VOLUME: 16 | 02 AUGUST 2026 | ಭಾನುವಾರ | RS: 2 | PAGE: 06 ISSUE: 168 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಬ್ಯಾಕ್ ಟು ಬ್ಯಾಕ್ ಸಿನಿಮಾಗಳಲ್ಲಿ ನಿರತರಾಗಿರುವ ನ್ಯಾಷನಲ್ ಕ್ರಶ್ ಖ್ಯಾತಿಯ ರಶ್ಮಿಕಾ ಮಂದಣ್ಣ ಗಾಯಗೊಂಡಿದ್ದಾರೆ. ಸಾಂಗ್ ಸೀಕ್ವೆನ್ಸ್ ಶೂಟ್ ವೇಳೆ ಈ ಅಪಘಾತ ಸಂಭವಿಸಿದೆ. ವಿಷಯ ತಿಳಿದ ಅಭಿಮಾನಿಗಳು ಬೇಸರಗೊಂಡಿದ್ದು, ಶೀಘ್ರ ಚೇತರಿಕೆಗೆ ಹಾರೈಸಿದ್ದಾರೆ. ಸೆಟ್‌ನಲ್ಲಿ ಗಾಯಗೊಂಡ ಅವರನ್ನು ಆ ಕೂಡಲೇ ಆಸ್ಪತ್ರೆಗೆ ಕರೆದೊಯ್ಯಲಾಯಿತು.

BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



ತಮ್ಮ ಜೀವನದ ಬೆಳವಣಿಗೆಯಲ್ಲಿ ರಾಮಕೃಷ್ಣ ಆಶ್ರಮದ ಪ್ರಭಾವ ಬಹಳ ದೊಡ್ಡದು ಎಂದು ಹೇಳಿದ ಪ್ರಧಾನಿ ಮೋದಿ, ಮೈಸೂರು ಪವಿತ್ರ ಭೂಮಿಯಾಗಿದ್ದು, ಇಲ್ಲಿನ ಎಲ್ಲ ಸಂತರು ಮತ್ತು ಮಹನೀಯರಿಗೆ ಪ್ರಣಾಮ ಸಲ್ಲಿಸುವುದಾಗಿ ತಿಳಿಸಿದರು. ಮೈಸೂರು ಸಾಂಸ್ಕೃತಿಕ ಮತ್ತು ಐತಿಹಾಸಿಕ ಕೇಂದ್ರವಾಗಿದ್ದು, ಇಲ್ಲಿನ ದಸರಾ, ಸಂಗೀತ ಮತ್ತು ಕಲೆ ವಿಶ್ವಪ್ರಸಿದ್ಧವಾಗಿವೆ. ಮೈಸೂರಿನ ಕಣ ಕಣದಲ್ಲೂ ಕಲೆ ಮತ್ತು ಸಂಸ್ಕೃತಿ ತುಂಬಿಕೊಂಡಿದೆ ಎಂದರು. ರಾಷ್ಟ್ರಕವಿ ಕುವೆಂಪು ಅವರು ಮೈಸೂರಿನಲ್ಲಿ ವಾಸವಾಗಿದ್ದರು. ಕುವೆಂಪು ಅವರಿಗೂ ರಾಮಕೃಷ್ಣ ಆಶ್ರಮಕ್ಕೂ ನಿಕಟ ಸಂಪರ್ಕವಿತ್ತು ಎಂದು ಪ್ರಧಾನಿ ಮೋದಿ ಸ್ಮರಿಸಿದರು. ಜೀವನದಲ್ಲಿ ಪ್ರತಿದಿನವೂ ಒಂದಲ್ಲ ಒಂದು ಪರೀಕ್ಷೆ ಎದುರಾಗುತ್ತದೆ.

# ಮೈಸೂರಿನ ಶ್ರೀರಾಮಕೃಷ್ಣ ಆಶ್ರಮದಲ್ಲಿ ವಿವೇಕ ಸ್ಮಾರಕ ಉದ್ಘಾಟನೆ

ಮೈಸೂರು: ಮೈಸೂರಿನ ಕಣ ಕಣದಲ್ಲೂ ಕಲೆ ಮತ್ತು ಸಂಸ್ಕೃತಿ ಮೇಳೈಸಿದ್ದು, ನಗರವು ಭಾರತದ ಪ್ರಮುಖ ಸಾಂಸ್ಕೃತಿಕ ಹಾಗೂ ಐತಿಹಾಸಿಕ ಕೇಂದ್ರವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಬಣ್ಣಿಸಿದರು.

ಮೈಸೂರಿನ ಶ್ರೀರಾಮಕೃಷ್ಣ ಆಶ್ರಮದಲ್ಲಿ ವಿವೇಕ ಸ್ಮಾರಕವನ್ನು ಉದ್ಘಾಟಿಸಿ ಮಾತನಾಡಿದ ಪ್ರಧಾನಿ ಮೋದಿ, ಕನ್ನಡದಲ್ಲೇ ಭಾಷಣ ಆರಂಭಿಸಿ 'ಎಲ್ಲರಿಗೂ ನಮಸ್ಕಾರಗಳು' ಎಂದು ಹೇಳಿದರು. ಬಳಿಕ ಚಾಮುಂಡೇಶ್ವರಿ ತಾಯಿಗೆ ನಮನ ಸಲ್ಲಿಸಿದರು.

ತಮ್ಮ ಜೀವನದ ಬೆಳವಣಿಗೆಯಲ್ಲಿ ರಾಮಕೃಷ್ಣ ಆಶ್ರಮದ ಪ್ರಭಾವ ಬಹಳ ದೊಡ್ಡದು ಎಂದು ಹೇಳಿದ ಪ್ರಧಾನಿ ಮೋದಿ, ಮೈಸೂರು ಪವಿತ್ರ ಭೂಮಿಯಾಗಿದ್ದು, ಇಲ್ಲಿನ ಎಲ್ಲ ಸಂತರು ಮತ್ತು ಮಹನೀಯರಿಗೆ ಪ್ರಣಾಮ ಸಲ್ಲಿಸುವುದಾಗಿ ತಿಳಿಸಿದರು. ಮೈಸೂರು ಸಾಂಸ್ಕೃತಿಕ ಮತ್ತು



ಐತಿಹಾಸಿಕ ಕೇಂದ್ರವಾಗಿದ್ದು, ಇಲ್ಲಿನ ದಸರಾ, ಸಂಗೀತ ಮತ್ತು ಕಲೆ ವಿಶ್ವಪ್ರಸಿದ್ಧವಾಗಿವೆ. ಮೈಸೂರಿನ ಕಣ ಕಣದಲ್ಲೂ ಕಲೆ ಮತ್ತು ಸಂಸ್ಕೃತಿ ತುಂಬಿಕೊಂಡಿದೆ ಎಂದರು.

ರಾಷ್ಟ್ರಕವಿ ಕುವೆಂಪು ಅವರು ಮೈಸೂರಿನಲ್ಲಿ ವಾಸವಾಗಿದ್ದರು. ಕುವೆಂಪು ಅವರಿಗೂ ರಾಮಕೃಷ್ಣ ಆಶ್ರಮಕ್ಕೂ ನಿಕಟ ಸಂಪರ್ಕವಿತ್ತು ಎಂದು ಪ್ರಧಾನಿ ಮೋದಿ ಸ್ಮರಿಸಿದರು. ಜೀವನದಲ್ಲಿ ಪ್ರತಿದಿನವೂ ಒಂದಲ್ಲ ಒಂದು ಪರೀಕ್ಷೆ ಎದುರಾಗುತ್ತದೆ.

ಆ ಪರೀಕ್ಷೆಗಳನ್ನು ಎದುರಿಸಿಯೇ ಸಾಧನೆಯ ಹಾದಿಯಲ್ಲಿ ಮುನ್ನಡೆಯಬೇಕು. ಈ ಸಾಧನೆಗೆ ಸಂತರ ಆಶೀರ್ವಾದ ಮತ್ತು ಪ್ರೇರಣೆ ಅತ್ಯಂತ ಮುಖ್ಯ ಎಂದು ಹೇಳಿದರು.

ಸ್ವಾಮಿ ವಿವೇಕಾನಂದರನ್ನು ಮೈಸೂರು ಮಹಾರಾಜರು ಮೈಸೂರಿಗೆ ಆಹ್ವಾನಿಸಿದ್ದರು. ಸ್ವಾಮಿ ವಿವೇಕಾನಂದರು ಭಾರತೀಯ ಯುವಜನತೆಯ ಚೇತನವಾಗಿದ್ದಾರೆ ಎಂದು ಪ್ರಧಾನಿ ಮೋದಿ ಹೇಳಿದರು.

ವಿವೇಕ ಸ್ಮಾರಕವು ಸಾಧಕರಿಗೆ ಪ್ರೇರಣೆಯ ಕೇಂದ್ರವಾಗಬೇಕು. ಯುವಜನರಿಗೆ ರಾಷ್ಟ್ರವೇ ಮೊದಲ ಆದ್ಯತೆಯಾಗಬೇಕು. ದೇಶ ನಿರ್ಮಾಣದ ಚಿಂತನೆ ಪ್ರತಿಯೊಬ್ಬ ಯುವಕನಲ್ಲೂ ಮೂಡಬೇಕು ಎಂದು ಕರೆ ನೀಡಿದರು.

ಒಂದು ಕಾಲದಲ್ಲಿ ಭಾರತೀಯ ಯುವಕರು ಗುಲಾಮಗಿರಿಯ ಮನಸ್ಥಿತಿಯಲ್ಲಿದ್ದರು. ಆದರೆ ಇಂದು ಯುವಜನತೆ ಆ ಮನಸ್ಥಿತಿಯಿಂದ ಹೊರಬಂದಿದೆ. ಯುವಕರ ಮನಸ್ಥಿತಿ ಬದಲಾಗಿರುವುದರಿಂದ ಇಡೀ ದೇಶದ ಪ್ರಗತಿಯ ದಿಕ್ಕು ಕೂಡ ಬದಲಾಗಿದೆ. ಭಾರತ ಇಂದು ಎಲ್ಲ ಕ್ಷೇತ್ರಗಳಲ್ಲೂ ಜಗತ್ತಿನ ಮುಂದೆ ಬೆಳಗುತ್ತಿರುವುದಕ್ಕೆ ಯುವಜನತೆಯೇ ಪ್ರಮುಖ ಕಾರಣ ಎಂದು ಪ್ರಧಾನಿ ಮೋದಿ ಹೇಳಿದರು.

ಎಲ್ಲ ಕ್ಷೇತ್ರಗಳಲ್ಲೂ ಯುವ ಸಮೂಹ ತನ್ನ ಪ್ರಗತಿಯ ಹೆಜ್ಜೆ ಗುರುತು ಮೂಡಿಸುತ್ತಿದೆ. ಯುವಜನತೆಯ ಶಕ್ತಿಯೇ ದೇಶದ ಶಕ್ತಿಯಾಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಕಳೆದ 12 ವರ್ಷಗಳಲ್ಲಿ ದೇಶದಲ್ಲಿ ಶಿಕ್ಷಣ ಕ್ಷೇತ್ರದ ವಿಸ್ತರಣೆಗೆ ದೊಡ್ಡ ಮಟ್ಟದಲ್ಲಿ ಆದ್ಯತೆ ನೀಡಲಾಗಿದೆ. ಹಲವು ವಿಶ್ವವಿದ್ಯಾಲಯಗಳು, ಸಾವಿರಾರು ಕಾಲೇಜುಗಳು ಮತ್ತು ಹಲವು ಐಐಟಿಗಳನ್ನು ಸ್ಥಾಪಿಸಲಾಗಿದೆ. ವೈದ್ಯಕೀಯ ಕಾಲೇಜುಗಳ ಸಂಖ್ಯೆಯನ್ನೂ ಹೆಚ್ಚಿಸಲಾಗಿದೆ.

ಯುವಜನತೆಯ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಇಡೀ ಶಿಕ್ಷಣ ವ್ಯವಸ್ಥೆಯಲ್ಲಿ ದೊಡ್ಡ ಮಟ್ಟದ ಸುಧಾರಣೆಗಳನ್ನು ಕೈಗೊಳ್ಳಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

## ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆ ರೂ.200ರಷ್ಟು ಇಳಿಕೆ

ನವದೆಹಲಿ: ಬಹುದಿನಗಳ ಬಳಿಕ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬಳಕೆದಾರರಿಗೆ ಸಿಹಿಸುದ್ದಿ ಸಿಕ್ಕಿದೆ. ಬೆಂಗಳೂರು, ದೆಹಲಿ, ಕೋಲ್ಕತ್ತಾ ಸೇರಿದಂತೆ ಹಲವು ಮಹಾನಗರಗಳಲ್ಲಿ 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು ಸುಮಾರು ರೂ.200ರಷ್ಟು ಇಳಿಕೆ ಮಾಡಲಾಗಿದೆ. ಪರಿಷ್ಕೃತ ದರಗಳು ಇಂದಿನಿಂದಲೇ ಜಾರಿಗೆ ಬಂದಿವೆ.




ಕೋಲ್ಕತ್ತಾದಲ್ಲಿ 19 ಕೆಜಿ ವಾಣಿಜ್ಯ ಸಿಲಿಂಡರ್ ಬೆಲೆ ರೂ.209ರಷ್ಟು ಇಳಿಕೆಯಾಗಿದ್ದು, ಇದೀಗ ಪ್ರತಿ ಸಿಲಿಂಡರ್ ಬೆಲೆ ರೂ.2,872.50ಕ್ಕೆ ಇಳಿದಿದೆ. ದೆಹಲಿಯಲ್ಲಿ ರೂ.202ರಷ್ಟು ಕಡಿತವಾಗಿದ್ದು, ಹೊಸ ದರ ರೂ.2,728ಕ್ಕೆ ಇಳಿಕೆಯಾಗಿದೆ. ಬೆಂಗಳೂರಿನಲ್ಲಿ ವಾಣಿಜ್ಯ ಸಿಲಿಂಡರ್ ಬೆಲೆ ರೂ.200ರಷ್ಟು ಇಳಿಕೆಯಾಗಿದೆ.

ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆ ಇಳಿಕೆಯಿಂದ ಹೋಟೆಲ್, ರೆಸ್ಟೋರೆಂಟ್, ಫಾಸ್ಟ್‌ಫುಡ್ ಹಾಗೂ ಅಡುಗೆ ಸೇವಾ ಉದ್ಯಮಗಳಿಗೆ ಕೊಂಚ ನೆಮ್ಮದಿ ಸಿಕ್ಕಂತಾಗಿದೆ. ಆದರೆ ಗೃಹಬಳಕೆಯ 14.2 ಕೆಜಿ ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ ಯಾವುದೇ ಬದಲಾವಣೆ ಮಾಡಲಾಗಿಲ್ಲ.

ತೈಲ ಮಾರುಕಟ್ಟೆ ಕಂಪನಿಗಳು ಕಳೆದ ತಿಂಗಳು 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು ರೂ.183.50ರಷ್ಟು ಕಡಿತ ಮಾಡಿದ್ದವು. ಇದೀಗ ಮತ್ತೊಮ್ಮೆ ಬೆಲೆ ಇಳಿಕೆ ಮಾಡಲಾಗಿದ್ದು, ಒಂದು ತಿಂಗಳ ಅವಧಿಯಲ್ಲಿ ಎರಡನೇ ಬಾರಿ ವಾಣಿಜ್ಯ ಸಿಲಿಂಡರ್ ಬೆಲೆ ಕಡಿಮೆಯಾಗಿದೆ.

ಇದರ ಜತೆಗೆ 5 ಕೆಜಿ ತೂಕದ ಫ್ರೀ ಟ್ರೇಡ್ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನೂ ಶೇ.13ರಷ್ಟು ಇಳಿಕೆ ಮಾಡಲಾಗಿದೆ. ದೆಹಲಿಯಲ್ಲಿ ಇದರ ಪರಿಷ್ಕೃತ ಚಿಲ್ಲರೆ ಬೆಲೆ ರೂ.808.50ಕ್ಕೆ ಇಳಿದಿದೆ.

ಇದೇ ವೇಳೆ, ಕಳೆದ ಜೂನ್‌ನಲ್ಲಿ 14.2 ಕೆಜಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು ರೂ.29ರಷ್ಟು ಹೆಚ್ಚಿಸಲಾಗಿತ್ತು. ಇದರಿಂದ ದೆಹಲಿಯಲ್ಲಿ ಗೃಹಬಳಕೆಯ ಸಿಲಿಂಡರ್ ಬೆಲೆ ರೂ.913ರಿಂದ ರೂ.942ಕ್ಕೆ ಏರಿಕೆಯಾಗಿತ್ತು.



ಮುಖ್ಯಮಂತ್ರಿ ಆದ ನಂತರ ಇದೇ ಮೊದಲ ಬಾರಿಗೆ ಮೈಸೂರಿಗೆ ಶನಿವಾರ ಆಗಮಿಸಿದ ಡಿ.ಕೆ.ಶಿವಕುಮಾರ್ ಅವರನ್ನು ಸಚಿವ ಯತೀಂದ್ರ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಬೃಹತ್ ಬೆಲ್ಲ ಮತ್ತು ಸೇಬಿನ ಹಾರ ಹಾಕಿ ತೆರೆದ ವಾಹನದಲ್ಲಿ ಮೆರವಣಿಗೆಯಲ್ಲಿ ಕರೆದೊಯ್ಯಲಾಯಿತು. ಸಂಸದ ಅನಿಲ್ ಚಿಕ್ಕಮಾಧು, ಶಾಸಕರಾದ ತನ್ವಿರ್ ಸೇಠ್, ಹರೀಶ್ ಗೌಡ, ರವಿಶಂಕರ್ ಮತ್ತಿತರರು ಉಪಸ್ಥಿತರಿದ್ದರು.

# ಸಂಪುಟ ವಿಸ್ತರಣೆ ನಾಳೆ ಬಹುತೇಕ ಅಂತಿಮ...?

ಲೋಕಭ ವನದಲ್ಲಿ ಪ್ರಮಾಣವಚನ ಕಾರ್ಯಕ್ರಮಕ್ಕೆ ಸಿದ್ಧತೆ ಮಾಡಿಕೊಳ್ಳುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚಿಸಿದ್ದಾರೆ ಎನ್ನಲಾಗಿದೆ. ಆಗಸ್ಟ್ 2ರಂದು ನೂತನ ಸಚಿವರ ಅಂತಿಮ ಪಟ್ಟಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಕೈ ಸೇರಲಿದ್ದು, ಸೋಮವಾರ ಸಂಜೆ 4 ಗಂಟೆಗೆ ನೂತನ ಸಚಿವರು ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆ ಇದೆ. ಖಾಲಿ ಇರುವ 20 ಸಚಿವ ಸ್ಥಾನಗಳ ಪೈಕಿ 18ಕ್ಕೂ ಹೆಚ್ಚು ಸ್ಥಾನಗಳನ್ನು ಭರ್ತಿ ಮಾಡುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಬೆಂಗಳೂರು: ರಾಜ್ಯ ಸಚಿವ ಸಂಪುಟ ವಿಸ್ತರಣೆಗೆ ಕೊನೆಗೂ ಮುಹೂರ್ತ ನಿಗದಿಯಾಗಿದ್ದು, ಸೋಮವಾರ ಸಂಜೆ 4 ಗಂಟೆಗೆ ನೂತನ ಸಚಿವರ ಪ್ರಮಾಣವಚನ ಕಾರ್ಯಕ್ರಮ ನಡೆಯುವ ಸಾಧ್ಯತೆ ಇದೆ. ಕಾಂಗ್ರೆಸ್ ಹೈಕಮಾಂಡ್ ಅಂತಿಮ ಹಂತದ ಒಪ್ಪಿಗೆ ನೀಡಿರುವ ಹಿನ್ನೆಲೆಯಲ್ಲಿ ಪ್ರಮಾಣವಚನ ಕಾರ್ಯಕ್ರಮಕ್ಕೆ ಸಿದ್ಧತೆ ಆರಂಭಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಲೋಕಭ ವನದಲ್ಲಿ ಪ್ರಮಾಣವಚನ ಕಾರ್ಯಕ್ರಮಕ್ಕೆ ಸಿದ್ಧತೆ ಮಾಡಿಕೊಳ್ಳುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚಿಸಿದ್ದಾರೆ ಎನ್ನಲಾಗಿದೆ. ಆಗಸ್ಟ್ 2ರಂದು ನೂತನ ಸಚಿವರ ಅಂತಿಮ ಪಟ್ಟಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಕೈ ಸೇರಲಿದ್ದು, ಸೋಮವಾರ ಸಂಜೆ 4 ಗಂಟೆಗೆ ನೂತನ ಸಚಿವರು ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆ ಇದೆ. ಖಾಲಿ ಇರುವ 20 ಸಚಿವ ಸ್ಥಾನಗಳ ಪೈಕಿ 18ಕ್ಕೂ ಹೆಚ್ಚು ಸ್ಥಾನಗಳನ್ನು ಭರ್ತಿ ಮಾಡುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ಅವರು ಹೈಕಮಾಂಡ್‌ಗೆ ಪ್ರತ್ಯೇಕವಾಗಿ ಸಂಭವನೀಯ ಸಚಿವರ ಪಟ್ಟಿಯನ್ನು ಸಲ್ಲಿಸಿದ್ದಾರೆ. ಭಾನುವಾರ ಸಂಜೆ ವೇಳೆಗೆ ಅಂತಿಮ ಪಟ್ಟಿ ಸಿದ್ಧವಾಗುವ ನಿರೀಕ್ಷೆಯಿದ್ದು, ಹೈಕಮಾಂಡ್ ಅನುಮೋದನೆಯ ಬಳಿಕ ನೂತನ ಸಚಿವರ ಹೆಸರುಗಳು ಅಧಿಕೃತವಾಗಲಿವೆ.

ಸಂಭಾವ್ಯ ಸಚಿವರ ಪಟ್ಟಿಯಲ್ಲಿ ದಾವಣಗೆರೆ ಶಾಸಕ ಎಸ್.ಎಸ್. ಮಲ್ಲಿಕಾರ್ಜುನ, ನಾಗಮಂಗಲ ಶಾಸಕ ಎನ್. ಚಲುವರಾಯಸ್ವಾಮಿ, ಚಾಮರಾಜಪೇಟೆ ಶಾಸಕ ಜಮೀರ್ ಅಹ್ಮದ್, ಹೊಸಕೋಟೆ ಶಾಸಕ ಶರತ್ ಬಚ್ಚೇಗೌಡ, ಆನೇಕಲ್ ಶಾಸಕ ಶಿವಣ್ಣ, ಮಾಯಕೊಂಡ ಶಾಸಕ ಕೆ.ಎಸ್. ಬಸವಂತಪ್ಪ, ಕಂಪ್ಲಿ ಶಾಸಕ ಜೆ.ಎನ್. ಗಣೇಶ್... ಹಾವೇರಿ ಶಾಸಕ ರುದ್ರಪ್ಪ ಲಮಾಣಿ, ವಿರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ, ಸಾಗರ ಶಾಸಕ ಬೇಳೂರು ಗೋಪಾಲಕೃಷ್ಣ, ಬ್ಯಾಡಗಿ ಶಾಸಕ ಶಿವಣ್ಣನವರ್, ಹಾನಗಲ್ ಶಾಸಕ ಶ್ರೀನಿವಾಸ್ ಮಾನೆ ಹಾಗೂ ಭಟ್ಕಳ ಶಾಸಕ ಮಂಕಾಳು ವೈದ್ಯ ಸೇರಿದಂತೆ ಹಲವು ಹೆಸರುಗಳು ಕೇಳಿಬರುತ್ತಿವೆ.

ಮಾಜಿ ಸಚಿವ ಜಮೀರ್ ಅಹ್ಮದ್ ಖಾನ್ ಅವರು ಮತ್ತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸಂಪುಟ ಸೇರುತ್ತಾರೆಯೇ ಎಂಬುದು ಕುತೂಹಲ ಮೂಡಿಸಿದೆ. ದಾವಣಗೆರೆ ಉಪಚುನಾವಣೆಯಲ್ಲಿ ಪಕ್ಷ ವಿರೋಧಿ ಚಟುವಟಿಕೆ ನಡೆಸಿದ್ದಾರೆ ಎಂಬ ಆರೋಪ ಜಮೀರ್ ವಿರುದ್ಧ ಕೇಳಿಬಂದ ಹಿನ್ನೆಲೆಯಲ್ಲಿ ರಾಜ್ಯ ಕಾಂಗ್ರೆಸ್‌ನಲ್ಲಿ ಈ ಹಿಂದೆ ಭಿನ್ನಾಭಿಪ್ರಾಯ ಉಂಟಾಗಿತ್ತು. ಈ ವಿಚಾರವಾಗಿ ಜಮೀರ್ ಅವರು ಹೈಕಮಾಂಡ್ ಹಾಗೂ ರಾಜ್ಯ ನಾಯಕರಲ್ಲಿ ಕ್ಷಮೆಯಾಚಿಸಿದ್ದರು ಎನ್ನಲಾಗಿದೆ. ಇದೀಗ ಅವರ ಸಚಿವ ಸ್ಥಾನದ ಬಗ್ಗೆ ಹೈಕಮಾಂಡ್ ಮಟ್ಟದಲ್ಲಿ ಅಂತಿಮ ತೀರ್ಮಾನ ಕೈಗೊಳ್ಳುವ ಸಾಧ್ಯತೆ ಇದೆ.

ಸಿದ್ದರಾಮಯ್ಯ ಅವರ ಹಿಂದಿನ ಸಚಿವ ಸಂಪುಟದಲ್ಲಿದ್ದ ಆರು ಮಂದಿಯನ್ನು ಮತ್ತೆ ಸಂಪುಟಕ್ಕೆ ಸೇರಿಸುವ ಬಗ್ಗೆಯೂ ಚರ್ಚೆ ನಡೆದಿದೆ ಎನ್ನಲಾಗಿದ್ದು, ಹೈಕಮಾಂಡ್‌ನ ಅಂತಿಮ ಪಟ್ಟಿ ಭಾನುವಾರ ಸಂಜೆ ಅಥವಾ ಸೋಮವಾರದೊಳಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಕೈ ಸೇರಲಿದೆ ಎಂದು ಮೂಲಗಳು ತಿಳಿಸಿವೆ.

ಇದೇ ವೇಳೆ, ಸಚಿವ ಸ್ಥಾನಕ್ಕೆ ತಮಗೆ ಅವಕಾಶ ನೀಡಬೇಕು ಎಂದು ಶಾಸಕ ಅಪ್ಪಾಜಿಗೌಡ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿ ಮನವಿ ಮಾಡಿದ್ದಾರೆ ಎನ್ನಲಾಗಿದೆ. ಈ ಬಾರಿ ಸಚಿವ ಸ್ಥಾನ ಸಿಗುವ ವಿಶ್ವಾಸವಿದೆ. ಆದರೆ, ತಮ್ಮನ್ನು ಸಚಿವ ಸ್ಥಾನದಿಂದ ದೂರವಿಡಲು ಷಡ್ಯಂತ್ರ ನಡೆಯುತ್ತಿದೆ ಎಂದು ಅಪ್ಪಾಜಿಗೌಡ ಆರೋಪಿಸಿದ್ದಾರೆ. ಸಚಿವ ಸಂಪುಟ ವಿಸ್ತರಣೆಯ ಅಂತಿಮ ಪಟ್ಟಿಯಲ್ಲಿ ತಮ್ಮ ಹೆಸರು ಸೇರಲಿದೆ ಎಂಬ ನಿರೀಕ್ಷೆಯನ್ನೂ ಅವರು ವ್ಯಕ್ತಪಡಿಸಿದ್ದಾರೆ.

## 'ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಕಡ್ಡಾಯ ಎಚ್‌ಐವಿ ಪರೀಕ್ಷೆ ಇಲ್ಲ'

ಬೆಂಗಳೂರು: ರಾಜ್ಯದಲ್ಲಿ ಎಚ್‌ಐವಿ ಸೋಂಕಿನ ಸ್ಥಿತಿಗತಿ ಹಾಗೂ ಇತ್ತೀಚೆಗೆ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ವಿವಿಧ ವದಂತಿಗಳ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸ್ಪಷ್ಟನೆ ನೀಡಿದೆ. ಶಾಲಾ–ಕಾಲೇಜು ವಿದ್ಯಾರ್ಥಿಗಳಲ್ಲಿ ಭಾರಿ ಪ್ರಮಾಣದಲ್ಲಿ ಎಚ್‌ಐವಿ ಸೋಂಕು ಹರಡಿದೆ ಹಾಗೂ ವಿದ್ಯಾರ್ಥಿಗಳಿಗೆ ಕಡ್ಡಾಯವಾಗಿ ಎಚ್‌ಐವಿ ಪರೀಕ್ಷೆ ನಡೆಸಲಾಗುತ್ತಿದೆ ಎಂಬ ಸುದ್ದಿಗಳು ಸಂಪೂರ್ಣ ಸುಳ್ಳು ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ಸ್ಪಷ್ಟಪಡಿಸಿದ್ದಾರೆ.

ರಾಜ್ಯದ ಕಾಲೇಜು ವಿದ್ಯಾರ್ಥಿಗಳಲ್ಲಿ 7,000ಕ್ಕೂ ಹೆಚ್ಚು ಮಂದಿಗೆ ಎಚ್‌ಐವಿ ಸೋಂಕು ತಗುಲಿದೆ ಎಂಬ ಸುದ್ದಿ ಆಧಾರರಹಿತವಾಗಿದೆ. ಶಾಲಾ–ಕಾಲೇಜುಗಳಲ್ಲಿ ಎಚ್‌ಐವಿ ಪರೀಕ್ಷೆಯನ್ನು ಕಡ್ಡಾಯಗೊಳಿಸುವ ಯಾವುದೇ ನಿಯಮವಿಲ್ಲ. ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳಿಗೆ ಎಚ್‌ಐವಿ ಕುರಿತು ಜಾಗೃತಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಮಾತ್ರ ನಡೆಸಲಾಗುತ್ತಿದೆ. ರಾಜ್ಯದಲ್ಲಿ ಸಾಮಾನ್ಯ ವ್ಯಕ್ತಿಗಳಿಗೆ ಎಚ್‌ಐವಿ ಪರೀಕ್ಷೆಯನ್ನು ಕಡ್ಡಾಯಗೊಳಿಸಿಲ್ಲ ಎಂದು ಆರೋಗ್ಯ ಇಲಾಖೆ ತಿಳಿಸಿದೆ.

ಪ್ರಸ್ತುತ ಪ್ರಮುಖವಾಗಿ ಎರಡು ಸಂದರ್ಭಗಳಲ್ಲಿ ಮಾತ್ರ ಎಚ್‌ಐವಿ ಪರೀಕ್ಷೆ ನಡೆಸಲಾಗುತ್ತಿದೆ. ಗರ್ಭಿಣಿಯರ ತಪಾಸಣೆ ಮತ್ತು ರಕ್ತದಾನ ಮಾಡುವ ಸಂದರ್ಭದಲ್ಲಿ ಪರೀಕ್ಷೆ ನಡೆಸಲಾಗುತ್ತಿದೆ.

ಕಳೆದ ಮೂರು ತಿಂಗಳಲ್ಲಿ ರಾಜ್ಯಾದ್ಯಂತ ಒಟ್ಟು 5,53,453 ಮಂದಿಯನ್ನು ಎಚ್‌ಐವಿ ಪರೀಕ್ಷೆಗೆ ಒಳಪಡಿಸಲಾಗಿದ್ದು, ಈ ಪೈಕಿ 3,091 ಮಂದಿಯಲ್ಲಿ ಸೋಂಕು ಪತ್ತೆಯಾಗಿದೆ ಎಂದು ಇಲಾಖೆ ಮಾಹಿತಿ ನೀಡಿದೆ. ಇದೇ ಅವಧಿಯಲ್ಲಿ 2,81,742 ಗರ್ಭಿಣಿಯರನ್ನು ಪರೀಕ್ಷೆಗೆ ಒಳಪಡಿಸಲಾಗಿದ್ದು, 111 ಮಂದಿಯಲ್ಲಿ ಎಚ್‌ಐವಿ ಸೋಂಕು ಪತ್ತೆಯಾಗಿದೆ. ಸುಮಾರು 56,000 ಸೋಂಕಿತರು ಸದ್ಯ ತಪಾಸಣೆ ಮತ್ತು ನಿರಂತರ ಚಿಕಿತ್ಸೆಯ ವ್ಯಾಪ್ತಿಯಿಂದ ಹೊರಗುಳಿದಿರುವುದು ಕಂಡುಬಂದಿದ್ದು, ಅವರನ್ನು ಗುರುತಿಸಿ ಮತ್ತೆ ಚಿಕಿತ್ಸಾ ವ್ಯಾಪ್ತಿಗೆ ತರಲು ಆರೋಗ್ಯ ಇಲಾಖೆ ಪ್ರಯತ್ನ ನಡೆಸುತ್ತಿದೆ.ರಾಜ್ಯದಲ್ಲಿ ಎಚ್‌ಐವಿ ಸೋಂಕಿನ ಪರಿಸ್ಥಿತಿ ಸಂಪೂರ್ಣ ನಿಯಂತ್ರಣದಲ್ಲಿದೆ.

## ಪರೀಕ್ಷಾ ಅಕ್ರಮ ತಡೆ ಮಸೂದೆಗೆ ರಾಷ್ಟ್ರಪತಿಗಳ ಅಂಕಿತ

ನವದೆಹಲಿ: ಸಾರ್ವಜನಿಕ ಪರೀಕ್ಷೆಗಳ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಅಕ್ರಮ ಮಾರ್ಗಗಳಿಗೆ ಕಡಿವಾಣ ಹಾಕುವ ಉದ್ದೇಶದ ತಿದ್ದುಪಡಿ ಮಸೂದೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಶನಿವಾರ ಅಂಕಿತ ಹಾಕಿದ್ದಾರೆ. ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಅಂಗೀಕಾರಗೊಂಡಿದ್ದ ಸಾರ್ವಜನಿಕ ಪರೀಕ್ಷೆಗಳು (ಅಕ್ರಮ ಮಾರ್ಗಗಳ ತಡೆ ಗಟ್ಟುವಿಕೆ) ತಿದ್ದುಪಡಿ ಮಸೂದೆ, 2026ಕ್ಕೆ ರಾಷ್ಟ್ರಪತಿ ಅಂಕಿತ ಹಾಕಿರುವುದಾಗಿ ಕಾನೂನು ಸಚಿವಾಲಯ ತಿಳಿಸಿದೆ. ಈ ವಾರದ ಆರಂಭದಲ್ಲಿ ಸಂಸತ್ತಿನ ಉಭಯ ಸದನಗಳಲ್ಲಿ ಮಸೂದೆಯನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಗಿತ್ತು. ಬಳಿಕ ರಾಷ್ಟ್ರಪತಿಯ ಅಂಕಿತಕ್ಕಾಗಿ ಕಳುಹಿಸಲಾಗಿತ್ತು. ತಿದ್ದುಪಡಿ ಕಾಯ್ದೆಯಡಿ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳ ವಿಚಾರಣೆಯನ್ನು ತ್ವರಿತಗೊಳಿಸಲು ತ್ವರಿತಗತಿ ನ್ಯಾಯಾಲಯಗಳನ್ನು ಸ್ಥಾಪಿಸುವುದು ಹಾಗೂ ತನಿಖೆಯನ್ನು ಎರಡು ತಿಂಗಳೊಳಗೆ ಪೂರ್ಣಗೊಳಿಸುವ ಪ್ರಸ್ತಾಪವಿದೆ. ಅಲ್ಲದೆ, ಇಂತಹ ಅಪರಾಧಗಳಲ್ಲಿ ಭಾಗಿಯಾಗುವವರಿಗೆ ವಿಧಿಸುವ ಶಿಕ್ಷೆಯ ಪ್ರಮಾಣವನ್ನೂ ಹೆಚ್ಚಿಸಲಾಗಿದೆ.

ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಲ್ಲಿ ತಪ್ಪಿತಸ್ಥರೆಂದು ಸಾಬೀತಾದವರಿಗೆ ಗರಿಷ್ಠ 10 ವರ್ಷಗಳವರೆಗೆ ಭಾಗಿಯಾಗಿರುವ ಸಂಘಟಿತ ಅಪರಾಧ ಸಿಂಡಿಕೇಟ್‌ಗಳಿಗೆ ಏಳರಿಂದ 10 ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ ಕನಿಷ್ಠ 10 ಕೋಟಿ ರೂ. ದಂಡ ವಿಧಿಸಲು ಅವಕಾಶ ಕಲ್ಪಿಸಲಾಗಿದೆ.

# 'ಭಾರತದ ಪ್ರಗತಿ ಕರ್ನಾಟಕದ ಪ್ರಗತಿಯೊಂದಿಗೆ ಸಾಗಬೇಕು'

ಮೈಸೂರು: ಭಾರತ ಪ್ರಗತಿ ಸಾಧಿಸಬೇಕಾದರೆ ಕರ್ನಾಟಕವೂ ಅದರೊಂದಿಗೆ ಸಮಾನವಾಗಿ ಪ್ರಗತಿ ಸಾಧಿಸಬೇಕು. ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಮತ್ತು ರಾಜ್ಯಗಳು ಒಟ್ಟಾಗಿ ಕೆಲಸ ಮಾಡಬೇಕು. ಕರ್ನಾಟಕಕ್ಕೆ ನೆರವು ನೀಡುವಾಗ ಕೇಂದ್ರ ಸರ್ಕಾರ ಹೃದಯ ವೈಶಾಲ್ಯತೆಯಿಂದ ನೆರವು ನೀಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮನವಿ ಮಾಡಿದರು.

ಮೈಸೂರಿನ ರಾಮಕೃಷ್ಣ ವಿದ್ಯಾಶಾಲೆಯಲ್ಲಿ ಶನಿವಾರ ನಡೆದ ವಿವೇಕ ಸ್ಮಾರಕ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸ್ವಾಮಿ ವಿವೇಕಾನಂದರ ತ್ಯಾಗ ಮತ್ತು ಆದರ್ಶಗಳು ನಮಗೆ ಸ್ಫೂರ್ತಿಯಾಗಬೇಕು. ಅವರ ಶಕ್ತಿಯನ್ನು ನಾವು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಈ ಕಾರ್ಯಕ್ರಮ ಯುವ ಕ್ರಾಂತಿಯ ಐತಿಹಾಸಿಕ ಘಳಿಗೆಯಾಗಿದೆ. ಸೋತಾಗ ಧೈರ್ಯ ಕಳೆದುಕೊಳ್ಳಬಾರದು, ಗೆದ್ದಾಗ ಹೃದಯ ವೈಶಾಲ್ಯತೆಯಿಂದ ವರ್ತಿಸಬೇಕು ಎಂಬ ವಿವೇಕಾನಂದರ




ಸಂದೇಶವನ್ನು ಎಲ್ಲರೂ ಪಾಲಿಸಬೇಕು ಎಂದರು.

ಇಂದು ಇಡೀ ವಿಶ್ವ ಕರ್ನಾಟಕದತ್ತ ತಿರುಗಿ ನೋಡುತ್ತಿದೆ. ಬೆಂಗಳೂರು ಮೂಲಕ ಇಡೀ ಭಾರತವನ್ನು ವಿಶ್ವ ಗಮನಿಸುತ್ತಿದೆ. ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಶಂಕುಸ್ಥಾಪನೆಗೆ ಬೆಂಗಳೂರಿಗೆ ಬಂದಿದ್ದ ಸಂದರ್ಭದಲ್ಲಿ, ವಿಶ್ವದ ನಾಯಕರು ಮೊದಲು ದೆಹಲಿಗೆ ಬಂದು ನಂತರ ದೇಶದ ಇತರ ನಗರಗಳಿಗೆ ತೆರಳುತ್ತಿದ್ದರು. ಆದರೆ ಕಾಲ ಬದಲಾಗಿದ್ದು, ಇಂದು ವಿಶ್ವದ ನಾಯಕರು ದೆಹಲಿಗೆ ಬಂದ ಬಳಿಕ ದೇಶದ ಇತರ ನಗರಗಳಿಗೆ ಭೇಟಿ ನೀಡುತ್ತಿದ್ದಾರೆ ಎಂದು ಹೇಳಿದ್ದರು. ಆ ಸಂದರ್ಭದಲ್ಲಿ ಇದೇ ಸಂಸ್ಥೆಯಲ್ಲಿ ಶಿಕ್ಷಣ ಪಡೆದಿದ್ದ ಎಸ್.ಎಂ. ಕೃಷ್ಣ ಅವರು ಮುಖ್ಯಮಂತ್ರಿಯಾಗಿದ್ದರು ಎಂದು ಸ್ಮರಿಸಿದರು.

ಕರ್ನಾಟಕದ ಹವಾಮಾನ ಮತ್ತು ಸಂಸ್ಕೃತಿ ನಮ್ಮ ಶಕ್ತಿಯಾಗಿವೆ. ಒಕ್ಕೂಟ ವ್ಯವಸ್ಥೆಯಲ್ಲಿ ನಾವು ಕಾರ್ಯನಿರ್ವಹಿಸುತ್ತಿದ್ದು, ಕರ್ನಾಟಕ ಯಾವಾಗಲೂ ದೇಶದೊಂದಿಗೆ ನಿಲ್ಲುತ್ತದೆ. ಕೇಂದ್ರ ಮತ್ತು ರಾಜ್ಯಗಳು ಒಟ್ಟಾಗಿ ಕೆಲಸ ಮಾಡುವ ಮೂಲಕ ದೇಶದ ಅಭಿವೃದ್ಧಿಗೆ ವೇಗ ನೀಡಬೇಕು ಎಂದು ಮುಖ್ಯಮಂತ್ರಿ ಕರೆ ನೀಡಿದರು.

ಕರ್ನಾಟಕ ಸಂಕಲ್ಪದ ಭೂಮಿಯಾಗಿದೆ. ಸ್ವಾಮಿ ವಿವೇಕಾನಂದರು ಮೈಸೂರಿನಿಂದ ವಿದೇಶಕ್ಕೆ ಪ್ರಯಾಣಿಸುವ ಸಂದರ್ಭದಲ್ಲಿ ಉದ್ಯಮಿ ಜಮ್ಶೆಡ್‌ಜಿ ಟಾಟಾ ಅವರಿಗೆ ಭಾರತ ಬಡ ರಾಷ್ಟ್ರವಾಗಿದ್ದು, ದೇಶದಲ್ಲಿ ವಿಜ್ಞಾನ ಸಂಸ್ಥೆಗಳು ಸ್ಥಾಪನೆಯಾಗಬೇಕು ಎಂಬ ಆಲೋಚನೆಯನ್ನು ವ್ಯಕ್ತಪಡಿಸಿದ್ದರು. ಈ ವಿಚಾರವನ್ನು ಟಾಟಾ ಅವರು ಮೈಸೂರು ಮಹಾರಾಜರಿಗೆ ತಿಳಿಸಿದ್ದರು. ಬಳಿಕ ಮೈಸೂರು ಮಹಾರಾಜರು ಬೆಂಗಳೂರಿನಲ್ಲಿ 300 ಎಕರೆ ಜಾಗವನ್ನು ನೀಡಿದ್ದು, ಅಲ್ಲಿಯೇ ಭಾರತೀಯ ವಿಜ್ಞಾನ ಸಂಸ್ಥೆ ಆರಂಭವಾಯಿತು. ದೇಶದ ವಿಜ್ಞಾನ ಕ್ಷೇತ್ರದ ಬೆಳವಣಿಗೆಗೆ ಮೈಸೂರು ಮಹಾರಾಜರು ನೀಡಿದ ಕೊಡುಗೆ ಅಪಾರ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಇದು ಐತಿಹಾಸಿಕ ಕಾರ್ಯಕ್ರಮ. ಯುವಶಕ್ತಿ, ಯುವ ಆಲೋಚನೆ ಮತ್ತು ಯುವ ಚಿಂತನೆಯೇ ದೇಶದ ಭವಿಷ್ಯ. ಸ್ವಾಮಿ ವಿವೇಕಾನಂದರ ವಿಚಾರಗಳನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಲು ತಾವು ಪ್ರಯತ್ನಿಸುತ್ತಿದ್ದೇನೆ. ಹೊಸ ಚಿಂತನೆಯೇ ಬದಲಾವಣೆಯ ಆರಂಭವಾಗಿದ್ದು, ಯುವಕರ ಕನಸೇ ದೇಶದ ಕನಸಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು. ನಮ್ಮ ಸರ್ಕಾರವೂ ಸ್ವಾಮಿ ವಿವೇಕಾನಂದರ ಆಲೋಚನೆಗಳನ್ನು ಹೊಂದಿದೆ. 'ಯುವ ಯುಗ, ನವ ಯುಗ' ಎಂಬುದು ನಮ್ಮ ಸರ್ಕಾರದ ಘೋಷಣೆಯಾಗಿದೆ ಎಂದರು. ಕರ್ನಾಟಕವನ್ನು ತಂಡವಾಗಿ ಮುನ್ನಡೆಸಬೇಕು. ಪಂಚಾಯಿತಿ ಹಾಗೂ ವಾರ್ಡ್ ಮಟ್ಟದಲ್ಲಿ ಯುವಕರು ಒಂದಾಗಿ ತಮ್ಮ ಕಲೆ, ಕ್ರೀಡೆ ಮತ್ತು ಸಾಂಸ್ಕೃತಿಕ ಪ್ರತಿಭೆಗಳನ್ನು ಬೆಳೆಸಿಕೊಳ್ಳಲು ಅವಕಾಶ ಕಲ್ಪಿಸುವ ಉದ್ದೇಶದಿಂದ ಯುವಕರ ಸಂಘಗಳನ್ನು ಸ್ಥಾಪಿಸಲು ಸರ್ಕಾರ ಮುಂದಾಗಿದೆ.

ಭಾರತ ಸಾರಥಿ 02/08/2026
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಹಣಕ್ಕಾಗಿ ಪ್ರಾಧ್ಯಾಪಕಿ ಪುತ್ರಿಯ ಕುತ್ತಿಗೆಗೆ ಚಾಕುವಿನಿಂದ ಇರಿದ ತಂದೆ

ಬೆಂಗಳೂರು

ಹಣಕ್ಕಾಗಿ ತಂದೆಯೇ ತನ್ನ ಮಗಳ ಮೇಲೆ ಚಾಕುವಿನಿಂದ ಹಲ್ಲೆ ನಡೆಸಿರುವ ಘಟನೆ ಬೆಂಗಳೂರಿನ ರಾಜಾನುಕುಂಟೆಯಲ್ಲಿ ನಡೆದಿದೆ. ಖಾಸಗಿ ಎಂಜಿನಿಯರಿಂಗ್ ಕಾಲೇಜೊಂದರಲ್ಲಿ ಸಹಾಯಕ ಪ್ರಾಧ್ಯಾಪಕಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಮಗಳ ಬಳಿ 40 ಲಕ್ಷ ರೂಪಾಯಿ ನೀಡುವಂತೆ ಒತ್ತಾಯಿಸುತ್ತಿದ್ದ ತಂದೆ, ಆಕೆಯ ಕಾಲೇಜಿನ ಚೇಂಬರ್‌ಗೆ ನುಗ್ಗಿ ಚಾಕುವಿನಿಂದ ಇರಿದಿದ್ದಾನೆ ಎನ್ನಲಾಗಿದೆ.

ಆರೋಪಿ 52 ವರ್ಷದ ನಾಗೇಂದ್ರ ಜುಲೈ 25ರಂದು ಮಗಳು ಕೆಲಸ ಮಾಡುತ್ತಿದ್ದ ಕಾಲೇಜಿಗೆ ತೆರಳಿದ್ದಾನೆ. ಸಭೆ ಮುಗಿಸಿ ಮಗಳು ಚೇಂಬರ್‌ಗೆ ಬರುತ್ತಿದ್ದಂತೆ ಆಕೆಯ ಮೇಲೆ ಚಾಕುವಿನಿಂದ ಹಲ್ಲೆ ನಡೆಸಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಕಿಬ್ಬೊಟ್ಟೆ, ಎದೆ ಹಾಗೂ ಕುತ್ತಿಗೆ ಭಾಗಕ್ಕೆ ಹಲವು ಬಾರಿ ಇರಿತಕ್ಕೊಳಗಾದ ಯುವತಿಗೆ ಗಂಭೀರ ಗಾಯಗಳಾಗಿದ್ದು, ತೀವ್ರ ರಕ್ತಸ್ರಾವವಾಗಿದೆ.

ಘಟನೆ ಗಮನಿಸಿದ ಕಾಲೇಜು ಸಿಬ್ಬಂದಿ ಕೂಡಲೇ ಗಾಯಗೊಂಡಿದ್ದ ಪ್ರಾಧ್ಯಾಪಕಿಯನ್ನು ಸಮೀಪದ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಸದ್ಯ ಅವರು ಚಿಕಿತ್ಸೆ ಪಡೆಯುತ್ತಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ತಿಳಿದುಬಂದಿದೆ.

ಮಗಳ ವಿದ್ಯಾಭ್ಯಾಸಕ್ಕಾಗಿ ತಾನು ಸಾಕಷ್ಟು ಹಣ ಖರ್ಚು ಮಾಡಿದ್ದು, ಮದುವೆಯಾದ ಬಳಿಕವೂ ಹಣ ನೀಡಬೇಕು ಎಂದು ಆರೋಪಿ ಆಗಾಗ್ಗೆ ಒತ್ತಾಯಿಸುತ್ತಿದ್ದ ಎನ್ನಲಾಗಿದೆ. ತಂದೆಯ ಕಿರುಕುಳದಿಂದ ಬೇಸತ್ತಿದ್ದ ಪ್ರಾಧ್ಯಾಪಕಿ, ತಾಯಿಯೊಂದಿಗೆ ಪ್ರತ್ಯೇಕವಾಗಿ ವಾಸಿಸುತ್ತಿದ್ದರು ಎಂದು ತಿಳಿದುಬಂದಿದೆ.ಆರೋಪಿ 52 ವರ್ಷದ ನಾಗೇಂದ್ರ ಜುಲೈ 25ರಂದು ಮಗಳು ಕೆಲಸ ಮಾಡುತ್ತಿದ್ದ ಕಾಲೇಜಿಗೆ ತೆರಳಿದ್ದಾನೆ. ಸಭೆ ಮುಗಿಸಿ ಮಗಳು ಚೇಂಬರ್‌ಗೆ ಬರುತ್ತಿದ್ದಂತೆ ಆಕೆಯ ಮೇಲೆ ಚಾಕುವಿನಿಂದ ಹಲ್ಲೆ ನಡೆಸಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಕಿಬ್ಬೊಟ್ಟೆ, ಎದೆ ಹಾಗೂ ಕುತ್ತಿಗೆ ಭಾಗಕ್ಕೆ ಹಲವು ಬಾರಿ ಇರಿತಕ್ಕೊಳಗಾದ ಯುವತಿಗೆ ಗಂಭೀರ ಗಾಯಗಳಾಗಿದ್ದು, ತೀವ್ರ ರಕ್ತಸ್ರಾವವಾಗಿದೆ.

ಘಟನೆಗೆ ಸಂಬಂಧಿಸಿದಂತೆ ಆರೋಪಿ ನಾಗೇಂದ್ರನನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ರಾಜಾನುಕುಂಟೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.

# 2 ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸಲು ಸೂಚನೆ

ಬೆಂಗಳೂರು

ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಆಯುಕ್ತ ಡಾ. ರಾಜೇಂದ್ರ ಕೆ.ವಿ. ಅವರು ಯಶವಂತಪುರ ರೈಲ್ವೆ ಮೇಲ್ಸೇತುವೆ ಅಗಲೀಕರಣ ಕಾಮಗಾರಿ ನಡೆಯುತ್ತಿರುವ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕಾಮಗಾರಿಯನ್ನು ಎರಡು ತಿಂಗಳೊಳಗೆ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಸೂಚಿಸಿದ ಅವರು, ನಗರದ ಪ್ರಮುಖ ಪ್ರದೇಶವಾಗಿರುವ ಕಾರಣ ಕಾಮಗಾರಿ ನಡೆಯುತ್ತಿರುವ ಸ್ಥಳದಲ್ಲಿ ಸ್ವಚ್ಛತೆ ಕಾಪಾಡಬೇಕು. ಯಾವುದೇ ಕಾರಣಕ್ಕೂ ಕಾಮಗಾರಿ ಪ್ರದೇಶದಲ್ಲಿ ಕಸ ತಂದು ಸುರಿಯದಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕಾಮಗಾರಿ ಪ್ರದೇಶದಲ್ಲಿ ವಾಹನಗಳ ನಿಲುಗಡೆಗೆ ಅವಕಾಶ ನೀಡದಂತೆ ಬ್ಯಾರಿಕೇಡ್ ಅಳವಡಿಸಿ, ಸಾರ್ವಜನಿಕರ ಸುರಕ್ಷತೆಗೆ ಅಗತ್ಯ ಭದ್ರತಾ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಿದರು.

ಅಪ್ರೋಚ್ ರಸ್ತೆಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕ್ರಿಯೆ ಕುರಿತು ಅಗತ್ಯ ಕ್ರಮ ಕೈಗೊಳ್ಳುವಂತೆ ಪಾಲಿಕೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ರೈಲ್ವೆ ಲೆವೆಲ್ ಕ್ರಾಸಿಂಗ್ ಪ್ರದೇಶವನ್ನೂ ಪರಿಶೀಲಿಸಿ ಅಧಿಕಾರಿಗಳಿಗೆ ಹಲವು ಸೂಚನೆಗಳನ್ನು ನೀಡಿದರು. ಕಾಮಗಾರಿಯನ್ನು ಎರಡು ತಿಂಗಳೊಳಗೆ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಸೂಚಿಸಿದ ಅವರು, ನಗರದ ಪ್ರಮುಖ ಪ್ರದೇಶವಾಗಿರುವ ಕಾರಣ ಕಾಮಗಾರಿ ನಡೆಯುತ್ತಿರುವ ಸ್ಥಳದಲ್ಲಿ ಸ್ವಚ್ಛತೆ ಕಾಪಾಡಬೇಕು. ಯಾವುದೇ ಕಾರಣಕ್ಕೂ ಕಾಮಗಾರಿ ಪ್ರದೇಶದಲ್ಲಿ ಕಸ ತಂದು ಸುರಿಯದಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕಾಮಗಾರಿ ಪ್ರದೇಶದಲ್ಲಿ ವಾಹನಗಳ ನಿಲುಗಡೆಗೆ ಅವಕಾಶ ನೀಡದಂತೆ ಬ್ಯಾರಿಕೇಡ್ ಅಳವಡಿಸಿ, ಸಾರ್ವಜನಿಕರ ಸುರಕ್ಷತೆಗೆ ಅಗತ್ಯ ಭದ್ರತಾ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಿದರು.

ಅಪ್ರೋಚ್ ರಸ್ತೆಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕ್ರಿಯೆ ಕುರಿತು ಅಗತ್ಯ ಕ್ರಮ ಕೈಗೊಳ್ಳುವಂತೆ ಪಾಲಿಕೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ರೈಲ್ವೆ ಲೆವೆಲ್ ಕ್ರಾಸಿಂಗ್ ಪ್ರದೇಶವನ್ನೂ ಪರಿಶೀಲಿಸಿ ಅಧಿಕಾರಿಗಳಿಗೆ ಹಲವು ಸೂಚನೆಗಳನ್ನು ನೀಡಿದರು.

ಈ ಸಂದರ್ಭದಲ್ಲಿ ರೈಲ್ವೆ ಅಧಿಕಾರಿಗಳು, ಮುಖ್ಯ ಎಂಜಿನಿಯರ್‌ಗಳು, ಗುತ್ತಿಗೆದಾರರು ಹಾಗೂ ಪಾಲಿಕೆಯ ಅಧೀಕ್ಷಕ ಎಂಜಿನಿಯರ್‌ಗಳು ಮತ್ತು ಕಾರ್ಯಪಾಲಕ ಎಂಜಿನಿಯರ್‌ಗಳು ಉಪಸ್ಥಿತರಿದ್ದರು.

# ಕಾಮಗಾರಿಗಳ ಪ್ರಗತಿ ಪರಿಶೀಲನೆ

ಬೆಂಗಳೂರು

ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ ರಸ್ತೆ, ರೈಲ್ವೆ ಹಾಗೂ ಜಂಕ್ಷನ್ ಅಭಿವೃದ್ಧಿ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಸುರಕ್ಷಿತ ಹಾಗೂ ಸುಗಮ ಸಂಚಾರ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಅಪರ ಆಯುಕ್ತರಾದ ಲೋಖಂಡೆ ಸ್ನೇಹಲ್ ಸುಧಾಕರ್ ರವರು ರೈಲ್ವೆ ಇಲಾಖೆ, ಕಂದಾಯ ಇಲಾಖೆ ಹಾಗೂ ನಗರ ಪಾಲಿಕೆಯ ಅಧಿಕಾರಿಗಳೊಂದಿಗೆ ವಿವಿಧ ಪ್ರಮುಖ ಅಭಿವೃದ್ಧಿ ಕಾಮಗಾರಿಗಳ ಸ್ಥಳ ಪರಿಶೀಲನೆ ನಡೆಸಿ ಕಾಮಗಾರಿಗಳ ಪ್ರಗತಿ ಪರಿಶೀಲಿಸಿದರು.

ಪರಿಶೀಲನೆ ವೇಳೆ ವಿವಿಧ ಯೋಜನೆಗಳಿಗೆ ಸಂಬಂಧಿಸಿದ ತಾಂತ್ರಿಕ, ಆಡಳಿತಾತ್ಮಕ ಹಾಗೂ ಭೂಸ್ವಾಧೀನ ಪ್ರಕ್ರಿಯೆಗಳ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿ, ಬಾಕಿ ಉಳಿದಿರುವ ಎಲ್ಲ ಪ್ರಕ್ರಿಯೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬಾಗ್ ಮನೆ ಜಂಕ್ಷನ್ ಅಭಿವೃದ್ಧಿ ಕಾಮಗಾರಿ ಪರಿಶೀಲನೆ

ಔಟರ್ ರಿಂಗ್ ರೋಡ್‌ನ ಬಾಗ್ ಮನೆ ಜಂಕ್ಷನ್‌ನಲ್ಲಿ ಸುರಕ್ಷಾ–75 ಯೋಜನೆಯಡಿ ಕೈಗೊಳ್ಳಲಾಗುತ್ತಿರುವ ಜಂಕ್ಷನ್ ಅಭಿವೃದ್ಧಿ ಕಾಮಗಾರಿಯನ್ನು ಪರಿಶೀಲಿಸಿದ ಅಪರ ಆಯುಕ್ತರು, ವಾಹನ ದಟ್ಟಣೆ ಹೆಚ್ಚಿರುವ ಈ ಜಂಕ್ಷನ್‌ನಲ್ಲಿ ಕಾಮಗಾರಿಯನ್ನು ಗುಣಮಟ್ಟದೊಂದಿಗೆ ಹಾಗೂ ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸುವಂತೆ ಸೂಚಿಸಿದರು.

ಕಾಮಗಾರಿ ನಡೆಯುವ ಅವಧಿಯಲ್ಲಿ ಸಾರ್ವಜನಿಕರ ಸಂಚಾರಕ್ಕೆ ಯಾವುದೇ ಅಡಚಣೆ ಉಂಟಾಗದಂತೆ ಅಗತ್ಯ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಸೂಕ್ತ ಬ್ಯಾರಿಕೇಡಿಂಗ್, ಸೂಚನಾ ಫಲಕಗಳು ಹಾಗೂ ಸಂಚಾರ ನಿರ್ವಹಣೆಗೆ ಸಂಬಂಧಿಸಿದ ಎಲ್ಲಾ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

# ಸ್ಟೇಟ್ ಆಫ್ ಜಾಯ್‌ನಿಂದ 'ಅನಾಟಮ್' ಬಿಡುಗಡೆ

ಬೆಂಗಳೂರು

ಪ್ರೀಮಿಯಂ ಸ್ನೀಕರ್ ಬ್ರ್ಯಾಂಡ್ ಸ್ಟೇಟ್ ಆಫ್ ಜಾಯ್ 2026ರ ಶರತ್ಕಾಲ–ಚಳಿಗಾಲದ ಸಂಗ್ರಹವನ್ನು ಅನಾವರಣಗೊಳಿಸುವುದರೊಂದಿಗೆ, ದೈನಂದಿನ ಬಳಕೆ ಹಾಗೂ ದಿನವಿಡೀ ಆರಾಮದಾಯಕ ಅನುಭವಕ್ಕಾಗಿ ವಿನ್ಯಾಸಗೊಳಿಸಲಾದ ಹೊಸ ತಲೆಮಾರಿನ ಪಾದರಕ್ಷೆಗಳ ವಿಭಾಗವಾದ 'ಅನಾಟಮ್' ಅನ್ನು ಬೆಂಗಳೂರಿನಲ್ಲಿ ಬಿಡುಗಡೆ ಮಾಡಿದೆ. ಸಮಕಾಲೀನ ವಿನ್ಯಾಸ, ನವೀನ ತಂತ್ರಜ್ಞಾನ ಹಾಗೂ ಅತ್ಯುತ್ತಮ ಆರಾಮವನ್ನು ಒದಗಿಸುವ ಪಾದರಕ್ಷೆಗಳನ್ನು ಅಭಿವೃದ್ಧಿಪಡಿಸುವ ಬ್ರ್ಯಾಂಡ್‌ನ ಬದ್ಧತೆಯನ್ನು ಈ ಹೊಸ ವಿಭಾಗ ಮತ್ತಷ್ಟು ಬಲಪಡಿಸಿದೆ.

'2026ರ ಶರತ್ಕಾಲ–ಚಳಿಗಾಲದ ಸಂಗ್ರಹ'ದಲ್ಲಿ ಋತುಮಾನಕ್ಕೆ ಹೊಂದುವ ಆಕರ್ಷಕ ವಿನ್ಯಾಸ




ಹಾಗೂ ದೈನಂದಿನ ಬಳಕೆಗೆ ಸೂಕ್ತವಾದ ಸಮಕಾಲೀನ ಸ್ನೀಕರ್‌ಗಳನ್ನು ಪರಿಚಯಿಸಲಾಗಿದೆ. ಇದರೊಂದಿಗೆ ಬಿಡುಗಡೆಯಾಗಿರುವ 'ಅನಾಟಮ್' ವಿಭಾಗವು ಆರಾಮ, ಸಹಜ ಚಲನೆ ಮತ್ತು ಉತ್ತಮ ಬಾಳಿಕೆಗೆ ಆದ್ಯತೆ ನೀಡುವ ಬ್ರ್ಯಾಂಡ್‌ನ ಹೊಸ ಆವಿಷ್ಕಾರವಾಗಿದೆ. ಶೈಲಿಯಲ್ಲಿ ಯಾವುದೇ ರಾಜಿ ಮಾಡಿಕೊಳ್ಳದೆ ಬಳಕೆದಾರರಿಗೆ ಅತ್ಯುತ್ತಮ ಅನುಭವ ಒದಗಿಸುವುದು ಇದರ ಪ್ರಮುಖ ಉದ್ದೇಶವಾಗಿದೆ.

ಪಾದದ ಸಹಜ ಆಕಾರವನ್ನು ಆಧರಿಸಿ ವಿನ್ಯಾಸಗೊಳಿಸಲಾಗಿರುವ 'ಅನಾಟಮ್' ಅನ್ನು ದಿನವಿಡೀ ಚಟುವಟಿಕೆಯಿಂದ ನಿರತರಾಗಿರುವವರ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ರೂಪಿಸಲಾಗಿದೆ. ಸಹಜ ಚಲನೆಗೆ ಅನುಕೂಲವಾಗುವಂತೆ ವಿಶಾಲವಾದ ಮುಂಭಾಗದ ವಿನ್ಯಾಸ ಹೊಂದಿದ್ದು, ಕಾಲ್ಬೆರಳುಗಳು ಮುಕ್ತವಾಗಿ ಚಲಿಸಲು ಅವಕಾಶ ಕಲ್ಪಿಸುತ್ತದೆ. ಇದರಿಂದ ದೀರ್ಘಕಾಲ ಧರಿಸಿದರೂ ಹೆಚ್ಚಿನ ಆರಾಮ ದೊರೆಯುತ್ತದೆ.

# ಪ್ಲಗ್–ಫ್ಲೋ ಸಂಕುಚಿತ ಜೈವಿಕ ಅನಿಲ ತಂತ್ರಜ್ಞಾನ ಪರಿಚಯ

ಬೆಂಗಳೂರು

ಭಾರತದ ಇನ್ಫಿಸ್ಟಾರ್ ರಿನ್ಯೂವಬಲ್ಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯು ಫಿನ್ಲೆಂಡ್ ಮೂಲದ ಆರ್‌ಸಿಪ್ಲಗ್ ಒವೈ ಸಂಸ್ಥೆಯೊಂದಿಗೆ ಸಹಯೋಗ ಮಾಡಿಕೊಂಡು, ಭಾರತದಲ್ಲಿ ಮೊದಲ ಬಾರಿಗೆ ಮಾಡ್ಯುಲರ್ ಪ್ಲಗ್–ಫ್ಲೋ ಸಂಕುಚಿತ ಜೈವಿಕ ಅನಿಲ ತಂತ್ರಜ್ಞಾನವನ್ನು ಪರಿಚಯಿಸಿದೆ.

'ಮೇಕ್ ಇನ್ ಇಂಡಿಯಾ' ಅಭಿಯಾನದಡಿ ಮಾಡ್ಯುಲರ್ ಪ್ಲಗ್–ಫ್ಲೋ ಸಂಕುಚಿತ ಜೈವಿಕ ಅನಿಲ ಘಟಕಗಳನ್ನು ಪರಿಚಯಿಸುವ ಉದ್ದೇಶದಿಂದ ಇನ್ಫಿಸ್ಟಾರ್ ರಿನ್ಯೂವಬಲ್ಸ್ ಪ್ರೈವೇಟ್ ಲಿಮಿಟೆಡ್ ಮತ್ತು ಆರ್‌ಸಿಪ್ಲಗ್ ಒವೈ ಸಂಸ್ಥೆಗಳು ವಿಶೇಷ ಜಂಟಿ



ಉದ್ಯಮಕ್ಕೆ ಸಹಿ ಹಾಕಿವೆ. ಮುಂದಿನ ಪೀಳಿಗೆಯ ಸಂಕುಚಿತ ಜೈವಿಕ ಅನಿಲ ಪರಿಹಾರಗಳ ಮೂಲಕ ದೇಶದ ನವೀಕರಿಸಬಹುದಾದ ಇಂಧನ ಗುರಿಗಳನ್ನು ಮುನ್ನಡೆಸುವ ನಿಟ್ಟಿನಲ್ಲಿ ಈ ಸಹಭಾಗಿತ್ವ ಮಹತ್ವದ ಹೆಜ್ಜೆಯಾಗಿದೆ.

ಯುರೋಪ್ ಮತ್ತು ಏಷ್ಯಾದ ವಿವಿಧ ಭಾಗಗಳಲ್ಲಿ ಈಗಾಗಲೇ ಯಶಸ್ವಿಯಾಗಿ ಅಳವಡಿಸಲಾಗಿರುವ ಈ ಮಾಡ್ಯುಲರ್ ತಂತ್ರಜ್ಞಾನವನ್ನು ಈ ಸಹಭಾಗಿತ್ವದ ಮೂಲಕ ಇದೇ ಮೊದಲ ಬಾರಿಗೆ ಭಾರತಕ್ಕೆ ಪರಿಚಯಿಸಲಾಗುತ್ತಿದೆ. ಕಡಿಮೆ ಪ್ರಮಾಣದ ಸಾವಯವ ತ್ಯಾಜ್ಯವನ್ನೂ ಪರಿಣಾಮಕಾರಿಯಾಗಿ ಸಂಸ್ಕರಿಸಿ ಸ್ವಚ್ಛ ಇಂಧನವಾಗಿ ಪರಿವರ್ತಿಸಲು ಈ ತಂತ್ರಜ್ಞಾನ ನೆರವಾಗಲಿದೆ.

# ಆನೇಕಲ್ ತಾಲ್ಲೂಕಿನ ಪ್ರತಿಭಾವಂತ ವಿದ್ಯಾರ್ಥಿಗಳಿಗೆ 'ಪ್ರತಿಭಾ ಪುರಸ್ಕಾರ 2025–26'



ಆನೇಕಲ್

ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಯನ್ನು ಗುರುತಿಸಿ, ಅವರನ್ನು ಮತ್ತಷ್ಟು ಉನ್ನತ ಸಾಧನೆಯತ್ತ ಪ್ರೋತ್ಸಾಹಿಸುವ ಉದ್ದೇಶದಿಂದ ಆನೇಕಲ್ ತಾಲ್ಲೂಕಿನ 2025–26ನೇ ಸಾಲಿನಲ್ಲಿ ಅತ್ಯುತ್ತಮ ಅಂಕಗಳನ್ನು ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ 'ಪ್ರತಿಭಾ ಪುರಸ್ಕಾರ 2025–26' ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಅಂತರರಾಷ್ಟ್ರೀಯ ಸಂಸ್ಥೆಯಾದ ರೋಟರಿ ಬೆಂಗಳೂರು ಸೌತ್ ಪೆರೇಡ್ ಹಾಗೂ ಸ್ಥಳೀಯ ಹಿತರಕ್ಷಣಾ ವೇದಿಕೆ ವತಿಯಿಂದ ಜುಲೈ 25ರಂದು ಬೊಮ್ಮಸಂದ್ರ ಸರ್ಕಾರಿ ಶಾಲೆಯ ಆವರಣದಲ್ಲಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಸರ್ಕಾರದ ಹೆಚ್ಚುವರಿ ಅಡ್ವೊಕೇಟ್ ಜನರಲ್ ಶ್ರೀ ಕೆಂಪಣ್ಣ ಅವರು, ವಿದ್ಯಾರ್ಥಿಗಳು ಮಾಜಿ ರಾಷ್ಟ್ರಪತಿ ಹಾಗೂ ಖ್ಯಾತ ವಿಜ್ಞಾನಿ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಜೀವನ ಮತ್ತು ಸಾಧನೆಯನ್ನು ಮಾದರಿಯಾಗಿಟ್ಟುಕೊಳ್ಳಬೇಕು ಎಂದು ಕರೆ ನೀಡಿದರು. ವಿದ್ಯಾರ್ಥಿಗಳು ಜೀವನದಲ್ಲಿ ದೊಡ್ಡ ಕನಸುಗಳನ್ನು ಕಾಣಬೇಕು. ಆದರೆ ಆ ಕನಸುಗಳು ಕೇವಲ ನಿದ್ರೆಯಲ್ಲಿ ಕಾಣುವ ಕನಸುಗಳಾಗಿರಬಾರದು. ಬದಲಾಗಿ, ತಮ್ಮ ನಿದ್ರೆಯನ್ನೇ ಕೆಡಿಸಿ, ಆ ಗುರಿಯನ್ನು ಸಾಧಿಸುವಂತೆ ಪ್ರೇರೇಪಿಸುವಂತಹ ಮಹತ್ವಾಕಾಂಕ್ಷೆಯ ಕನಸುಗಳಾಗಬೇಕು ಎಂದು ಅವರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಇನ್‌ಸೈಟ್ಸ್ ಐಎಎಸ್ ಸಂಸ್ಥೆಯ ಮುಖ್ಯಸ್ಥರಾದ ಜಿ.ಬಿ. ವಿನಯ್ ಕುಮಾರ್ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ನಂತರ ವಿದ್ಯಾರ್ಥಿಗಳಿಗೆ ಲಭ್ಯವಿರುವ ವಿವಿಧ ವೃತ್ತಿ ಅವಕಾಶಗಳ ಕುರಿತು ವಿವರಿಸಿದರು. ವಿದ್ಯಾರ್ಥಿಗಳು ತಮ್ಮ ಆಸಕ್ತಿ ಮತ್ತು ಸಾಮರ್ಥ್ಯಕ್ಕೆ ಅನುಗುಣವಾಗಿ ಭವಿಷ್ಯದ ವೃತ್ತಿ ಕ್ಷೇತ್ರವನ್ನು ಆಯ್ಕೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದ ಅವರು, ಐಎಎಸ್ ಮತ್ತು ಕೆಎಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಈಗಿನಿಂದಲೇ ಹೇಗೆ ಸಿದ್ಧತೆ ಮಾಡಿಕೊಳ್ಳಬೇಕು ಎಂಬುದರ ಕುರಿತು ವಿದ್ಯಾರ್ಥಿಗಳಿಗೆ ಅಮೂಲ್ಯ ಮಾರ್ಗದರ್ಶನ ನೀಡಿದರು.

ಸ್ಥಳೀಯ ಹಿತರಕ್ಷಣಾ ವೇದಿಕೆ ಮತ್ತು ರೋಟರಿ ಬೆಂಗಳೂರು ಸೌತ್ ಪೆರೇಡ್ ಜಂಟಿಯಾಗಿ ಆಯೋಜಿಸಿದ್ದ ಈ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಪೋಷಕರು, ಶಿಕ್ಷಕರು ಹಾಗೂ ಗಣ್ಯರು ಭಾಗವಹಿಸಿದ್ದರು.

# ವಾಸ್ಕೋ-ಡ-ಗಾಮ-ವೇಲಂಕಣ್ಣಿ ನಡುವೆ ವಿಶೇಷ ಎಕ್ಸ್‌ಪ್ರೆಸ್ ರೈಲುಗಳ ಸಂಚಾರ

ಬೆಂಗಳೂರು

ವೇಲಂಕಣ್ಣಿಯಲ್ಲಿ ನಡೆಯಲಿರುವ ಪ್ರಸಿದ್ಧ 'ಅವರ್ ಲೇಡಿ ಆಫ್ ಗುಡ್ ಹೆಲ್ತ್' ವಾರ್ಷಿಕ ಹಬ್ಬದಲ್ಲಿ ಪಾಲ್ಗೊಳ್ಳುವ ಭಕ್ತಾದಿಗಳ ಅನುಕೂಲಕ್ಕಾಗಿ ವಾಸ್ಕೋ–ಡ–ಗಾಮ ಮತ್ತು ವೇಲಂಕಣ್ಣಿ ನಡುವೆ ವಿಶೇಷ ಎಕ್ಸ್‌ಪ್ರೆಸ್ ರೈಲುಗಳ ಸಂಚಾರಕ್ಕೆ ರೈಲ್ವೆ ಮಂಡಳಿ ಅನುಮೋದನೆ ನೀಡಿದೆ. ಹಬ್ಬದ ಸಂದರ್ಭದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಸುವ ಭಕ್ತರಿಗೆ ಅನುಕೂಲವಾಗುವಂತೆ ಈ ವಿಶೇಷ ರೈಲು ಸೇವೆಗಳನ್ನು ಒದಗಿಸಲಾಗುತ್ತಿದೆ.

ರೈಲು ಸಂಖ್ಯೆ 07361/07362 ವಾಸ್ಕೋ ಡ ಗಾಮ–ವೇಲಂಕಣ್ಣಿ–ವಾಸ್ಕೋ ಡ ಗಾಮ ವಿಶೇಷ ಎಕ್ಸ್‌ಪ್ರೆಸ್ ಎರಡು ಸುತ್ತು ಸಂಚರಿಸಲಿದೆ. ರೈಲು ಸಂಖ್ಯೆ 07361 ವಾಸ್ಕೋ ಡ ಗಾಮ–ವೇಲಂಕಣ್ಣಿ ವಿಶೇಷ ಎಕ್ಸ್‌ಪ್ರೆಸ್ ರೈಲು ಆಗಸ್ಟ್ 27 ಮತ್ತು ಸೆಪ್ಟೆಂಬರ್ 1ರಂದು ರಾತ್ರಿ 9.55ಕ್ಕೆ ವಾಸ್ಕೋ ಡ ಗಾಮ ನಿಲ್ದಾಣದಿಂದ ಹೊರಟು, ಮೂರನೇ ದಿನ ಮುಂಜಾನೆ 3.45ಕ್ಕೆ ವೇಲಂಕಣ್ಣಿ ತಲುಪಲಿದೆ.

ಮರುಪ್ರಯಾಣದಲ್ಲಿ ರೈಲು ಸಂಖ್ಯೆ 07362 ವೇಲಂಕಣ್ಣಿ–ವಾಸ್ಕೋ ಡ ಗಾಮ ವಿಶೇಷ ಎಕ್ಸ್‌ಪ್ರೆಸ್ ರೈಲು ಆಗಸ್ಟ್ 29 ಮತ್ತು ಸೆಪ್ಟೆಂಬರ್ 3ರಂದು ರಾತ್ರಿ 11.55ಕ್ಕೆ ವೇಲಂಕಣ್ಣಿಯಿಂದ ಹೊರಟು, ಮೂರನೇ ದಿನ ಮುಂಜಾನೆ 3 ಗಂಟೆಗೆ ವಾಸ್ಕೋ ಡ ಗಾಮ ತಲುಪಲಿದೆ.

ಇದಲ್ಲದೆ, ರೈಲು ಸಂಖ್ಯೆ 07365/07366 ವಾಸ್ಕೋ ಡ ಗಾಮ–ವೇಲಂಕಣ್ಣಿ–ವಾಸ್ಕೋ ಡ ಗಾಮ ವಿಶೇಷ ಎಕ್ಸ್‌ಪ್ರೆಸ್ ಒಂದು ಸುತ್ತು ಸಂಚರಿಸಲಿದೆ. ರೈಲು ಸಂಖ್ಯೆ 07365 ವಾಸ್ಕೋ ಡ ಗಾಮ–ವೇಲಂಕಣ್ಣಿ ವಿಶೇಷ ಎಕ್ಸ್‌ಪ್ರೆಸ್ ರೈಲು ಸೆಪ್ಟೆಂಬರ್ 6ರಂದು ರಾತ್ರಿ 9.55ಕ್ಕೆ ವಾಸ್ಕೋ ಡ ಗಾಮದಿಂದ ಹೊರಟು, ಸೆಪ್ಟೆಂಬರ್ 8ರಂದು ಮುಂಜಾನೆ 3.45ಕ್ಕೆ ವೇಲಂಕಣ್ಣಿ ತಲುಪಲಿದೆ.

ಮರುಪ್ರಯಾಣದಲ್ಲಿ ರೈಲು ಸಂಖ್ಯೆ 07366 ವೇಲಂಕಣ್ಣಿ–ವಾಸ್ಕೋ ಡ ಗಾಮ ವಿಶೇಷ ಎಕ್ಸ್‌ಪ್ರೆಸ್ ರೈಲು ಸೆಪ್ಟೆಂಬರ್ 9ರಂದು ಮುಂಜಾನೆ 1 ಗಂಟೆಗೆ ವೇಲಂಕಣ್ಣಿಯಿಂದ ಹೊರಟು, ಸೆಪ್ಟೆಂಬರ್ 10ರಂದು ಮುಂಜಾನೆ 3 ಗಂಟೆಗೆ ವಾಸ್ಕೋ ಡ ಗಾಮ ತಲುಪಲಿದೆ.

ಈ ಎರಡೂ ವಿಶೇಷ ರೈಲುಗಳು ಮಾರ್ಗಮಧ್ಯೆ ಮಡಗಾಂವ್, ಸಾನ್ವೋರ್ಡೆಮ್ ಕರ್ಚೋರೆಮ್, ಕುಲೆಮ್, ಕ್ಯಾಸಲ್ ರಾಕ್, ಲೊಂಡಾ, ಧಾರವಾಡ, ಎಸ್‌ಎಸ್‌ಎಸ್ ಹುಬ್ಬಳ್ಳಿ, ಎಸ್‌ಎಂಎಂ ಹಾವೇರಿ, ದಾವಣಗೆರೆ, ಬೀರೂರು, ಅರಸೀಕೆರೆ, ತುಮಕೂರು, ಎಸ್‌ಎಂವಿಟಿ ಬೆಂಗಳೂರು, ಕೃಷ್ಣರಾಜಪುರಂ, ಬಂಗಾರಪೇಟೆ, ಸೇಲಂ, ನಮಕ್ಕಲ್, ಕರೂರ್, ತಿರುಚ್ಚಿರಾಪಳ್ಳಿ, ತಂಜಾವೂರು, ತಿರುವರೂರ್ ಹಾಗೂ ನಾಗಪಟ್ಟಿಣಂ ಸೇರಿದಂತೆ ಪ್ರಮುಖ ನಿಲ್ದಾಣಗಳಲ್ಲಿ ನಿಲುಗಡೆ ಹೊಂದಲಿವೆ.

ರೈಲು ಸಂಖ್ಯೆ 07361 ಮತ್ತು 07362 ಚಿಕ್ಕಜಾಜೂರು ನಿಲ್ದಾಣದಲ್ಲೂ ನಿಲುಗಡೆ ಹೊಂದಲಿದ್ದು, ರೈಲು ಸಂಖ್ಯೆ 07365 ಮತ್ತು 07366 ಚಿಕ್ಕಜಾಜೂರು ನಿಲ್ದಾಣದಲ್ಲಿ ನಿಲುಗಡೆ ಹೊಂದಿರುವುದಿಲ್ಲ ಎಂದು ರೈಲ್ವೆ ಇಲಾಖೆ ತಿಳಿಸಿದೆ.

ಪ್ರಯಾಣಿಕರ ಅನುಕೂಲಕ್ಕಾಗಿ ವಿಶೇಷ ರೈಲುಗಳಲ್ಲಿ ಒಟ್ಟು 19 ಬೋಗಿಗಳು ಇರಲಿವೆ. ಇದರಲ್ಲಿ 6 ತ್ರಿ–ಟೈರ್ ಎಸಿ ಬೋಗಿಗಳು, 7 ಸ್ಲೀಪರ್ ಕ್ಲಾಸ್ ಬೋಗಿಗಳು, 4 ಸಾಮಾನ್ಯ ದ್ವಿತೀಯ ದರ್ಜೆ ಬೋಗಿಗಳು, ದಿವ್ಯಾಂಗ ಸ್ನೇಹಿ ಸೌಲಭ್ಯ ಹೊಂದಿರುವ 1 ದ್ವಿತೀಯ ದರ್ಜೆಯ ಲಗೇಜ್–ಕಮ್–ಬ್ರೇಕ್ ವ್ಯಾನ್ ಹಾಗೂ 1 ಲಗೇಜ್–ಕಮ್–ಗಾರ್ಡ್–ಕಮ್–ಜನರೇಟರ್ ಕಾರ್ ಒಳಗೊಂಡಿರಲಿದೆ.

ವೇಲಂಕಣ್ಣಿ ವಾರ್ಷಿಕ ಹಬ್ಬದ ಸಂದರ್ಭದಲ್ಲಿ ದೇಶದ ವಿವಿಧ ಭಾಗಗಳಿಂದ ಸಾವಿರಾರು ಭಕ್ತರು ಆಗಮಿಸುವ ನಿರೀಕ್ಷೆಯಿದ್ದು, ವಿಶೇಷ ರೈಲು ಸೇವೆಯಿಂದ ಪ್ರಯಾಣಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ. ರೈಲುಗಳ ಸಂಪೂರ್ಣ ವೇಳಾಪಟ್ಟಿ ಹಾಗೂ ಮುಂಗಡ ಟಿಕೆಟ್ ಕಾಯ್ದಿರಿಸುವಿಕೆ ಕುರಿತ ಮಾಹಿತಿಗಾಗಿ ಪ್ರಯಾಣಿಕರು ಐಆರ್‌ಸಿಟಿಸಿ ಹಾಗೂ ರಾಷ್ಟ್ರೀಯ ರೈಲು ವಿಚಾರಣಾ ವ್ಯವಸ್ಥೆ ಮೂಲಕ ಮಾಹಿತಿ ಪಡೆಯಬಹುದು.

# 'ಸಮಾಜಕ್ಕೆ ಸರಿದಾರಿಯನ್ನು ತೋರುವುದು ಗುರುವಿನ ಕಾರ್ಯ'

ಗೋಕರ್ಣ

ಸರಿಯನ್ನು ತಿಳಿದವನು ಕೇವಲ ಜ್ಞಾನಿ. ಸರಿಯನ್ನು ತಿಳಿದು, ಅದನ್ನು ಇತರರಿಗೆ ತಿಳಿಸಿ ಸರಿಯಾದ ದಾರಿಯನ್ನು ತೋರಿಸುವವನೇ ಗುರು. ಸಮಾಜಕ್ಕೆ ಸರಿಯಾದ ಮಾರ್ಗವನ್ನು ತೋರಿಸುವುದು ಗುರುವಿನ ಕರ್ತವ್ಯ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮೀಜಿ ಹೇಳಿದರು.



ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ಜುಲೈ 29ರಂದು ನಡೆದ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ ಆಶೀರ್ವಚನ ನೀಡಿದ ಶ್ರೀಗಳು, ಶಂಕರಾಚಾರ್ಯರು ಸೈನ್ಯವಾಗಲಿ, ಅಪಾರ ಸಂಪತ್ತಾಗಲಿ ಇಲ್ಲದಿದ್ದರೂ ದೇಶದಲ್ಲಿ ಧರ್ಮಸಂರಕ್ಷಣೆಯ ಮಹತ್ವದ ಕಾರ್ಯವನ್ನು ಮಾಡಿದರು. ದೇಶಾದ್ಯಂತ ಸಂಚರಿಸಿ ಜನರಿಗೆ ಸರಿಯಾದ ದಾರಿಯನ್ನು ತೋರಿಸಿದ ಶಂಕರರು, ಆ ಕಾರ್ಯ ನಿರಂತರವಾಗಿ ಮುಂದುವರಿಯುವಂತೆ ದೇಶದ ವಿವಿಧೆಡೆ ಮಠಗಳನ್ನು ಸ್ಥಾಪಿಸಿದರು ಎಂದು ಹೇಳಿದರು.

ಶಂಕರಾಚಾರ್ಯರ ಉದ್ದೇಶವೇ ಮಠದ ಉದ್ದೇಶವಾಗಬೇಕು. ಶಂಕರರು ತೋರಿದ ಮಾರ್ಗದಲ್ಲಿ ಧರ್ಮಪ್ರಚಾರ ಮಾಡುತ್ತಾ, ಸಮಾಜಕ್ಕೆ ಸರಿ–ತಪ್ಪುಗಳ ಕುರಿತು ಮಾರ್ಗದರ್ಶನ ನೀಡುವುದು ಮಠದ ಕರ್ತವ್ಯ. ಜೀವನಕ್ಕೆ ಸರಿಯಾದ ದಾರಿಯನ್ನು ತೋರಿಸುವುದು ಹಾಗೂ ಸಮಾಜದಲ್ಲಿನ ತಪ್ಪುಗಳನ್ನು ತಿದ್ದುವ ಉದ್ದೇಶದಿಂದಲೇ ಮಠ ಕಾರ್ಯನಿರ್ವಹಿಸುತ್ತಿದೆ. ಇದೇ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಆಶಯವೂ ಆಗಿದೆ ಎಂದು ತಿಳಿಸಿದರು.

ಸಮಾಜಕ್ಕೆ ಸರಿಯಾದ ವಿಚಾರಗಳನ್ನು ತಿಳಿಸುವವರಿಗೆ ಶತ್ರುಗಳು ಹುಟ್ಟಿಕೊಳ್ಳುವುದು ಪ್ರಕೃತಿ ಸಹಜ. ಸರಿದಾರಿಯಲ್ಲಿ ನಡೆಯುವವರು ಇಂತಹ ವಿರೋಧಗಳನ್ನು ಎದುರಿಸಬೇಕಾಗುತ್ತದೆ. ರಾಮ ಮತ್ತು ಕೃಷ್ಣರಿಂದ ಹಿಡಿದು ಎಲ್ಲ ಮಹಾತ್ಮರ ಜೀವನದಲ್ಲಿಯೂ ಇದನ್ನು ಕಾಣಬಹುದು ಎಂದು ಹೇಳಿದರು.

ಕಳೆದ ವರ್ಷ ಮಾತು ಮತ್ತು ಭಾಷೆಗೆ ಸಂಬಂಧಿಸಿದ 'ಸ್ವಭಾಷಾ ಚಾತುರ್ಮಾಸ್ಯ' ಆಚರಿಸಲಾಗಿತ್ತು. ಈ ವರ್ಷ ಆಹಾರಕ್ಕೆ ಸಂಬಂಧಿಸಿದ 'ಅನ್ನಬ್ರಹ್ಮ ಚಾತುರ್ಮಾಸ್ಯ' ಆಚರಿಸಲಾಗುತ್ತಿದೆ. ಹೀಗೆ ಕಳೆದ ವರ್ಷದ ಮತ್ತು ಈ ವರ್ಷದ ಚಾತುರ್ಮಾಸ್ಯಗಳೆರಡೂ ನಾಲಿಗೆಗೆ ಸಂಬಂಧಿಸಿದ ವಿಚಾರಗಳನ್ನೇ ಕೇಂದ್ರವಾಗಿಸಿಕೊಂಡಿವೆ. ನಾಲಿಗೆಯಿಂದ ಆಗುವ ತಪ್ಪುಗಳನ್ನು ತಿದ್ದುವ ಕಾರ್ಯವೂ ಇದರ ಉದ್ದೇಶವಾಗಿದೆ ಎಂದು ವಿವರಿಸಿದರು.

ಆಹಾರದ ಕುರಿತು ಸಮರ್ಪಕವಾದ ಮಾಹಿತಿಯನ್ನು ಶಾಲೆ ಅಥವಾ ವಿಶ್ವವಿದ್ಯಾಲಯಗಳಲ್ಲಿ ಕಲಿಸಲಾಗುತ್ತಿಲ್ಲ. 'ನಾವು ಏನನ್ನು ತಿನ್ನುತ್ತೇವೆಯೋ ಅದೇ ನಾವಾಗುತ್ತೇವೆ' ಎಂಬುದನ್ನು ಅರಿತು, ಆಹಾರದ ಕುರಿತಾದ ಸರಿ–ತಪ್ಪುಗಳ ಬಗ್ಗೆ ಸಮಾಜಕ್ಕೆ ತಿಳಿಸುವ ಕಾರ್ಯಕ್ಕೆ ಮುಂದಾಗಿದ್ದೇವೆ ಎಂದು ಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮೀಜಿ ಹೇಳಿದರು.

# ಗೃಹ ಸಚಿವರ ರಾಜೀನಾಮೆಗೆ ಎಸ್.ಹರೀಶ್ ಆಗ್ರಹ

ಬೆಂಗಳೂರು

ಡಿ.ಜೆ.ಹಳ್ಳಿ ವಾರ್ಡ್‌ನಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಬೂತ್ ಮೇಲ್ವಿಚಾರಕ ಫಕೀರಪ್ಪ ಅವರ ಮೇಲೆ ಹಲ್ಲೆ ನಡೆದಿದೆ ಎಂದು ಆರೋಪಿಸಿರುವ ಬಿಜೆಪಿ ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್, ಸರ್ಕಾರಿ ಅಧಿಕಾರಿಗಳಿಗೆ ರಕ್ಷಣೆ ನೀಡುವಲ್ಲಿ ವಿಫಲರಾಗಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಫಕೀರಪ್ಪ ಅವರ ಮೇಲೆ ಹಲ್ಲೆ ನಡೆಸಿದ ಆರೋಪಿಗಳನ್ನು ಬಂಧಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು. ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲ ಬಿಎಲ್‌ಒಗಳು ಹಾಗೂ ಬಿಎಲ್‌ಎ–2ಗಳಿಗೆ ಸೂಕ್ತ ಭದ್ರತೆ ಒದಗಿಸಬೇಕು ಎಂದು ಒತ್ತಾಯಿಸಿದರು.

ಜಿಬಿಎ ವ್ಯಾಪ್ತಿಯಲ್ಲಿ ಹತ್ತು ಬೂತ್‌ಗಳಿಗೆ ಒಬ್ಬರಂತೆ ಮೇಲ್ವಿಚಾರಕರನ್ನು ನೇಮಿಸಲಾಗಿದೆ. ಈ ಪೈಕಿ ಫಕೀರಪ್ಪ ಅವರ ಮೇಲೆ ಕೆಲವರು ಹಲ್ಲೆ ನಡೆಸಿದ್ದಾರೆ. ಘಟನೆಯಲ್ಲಿ ಅವರ ಹಲ್ಲು ಹಾಗೂ ತುಟಿಗೆ ಗಾಯಗಳಾಗಿವೆ. ಘಟನೆ ಕುರಿತು ಬಹಿರಂಗವಾಗಿ ಮಾತನಾಡದಂತೆ ಸ್ಥಳೀಯರಿಂದ ಒತ್ತಡ ಹೇರಲಾಗಿದೆ ಎಂಬ ಆರೋಪವೂ ಕೇಳಿಬಂದಿದ್ದು, ಇದರಿಂದ ಫಕೀರಪ್ಪ ಅವರು ಭೀತಿಗೊಳಗಾಗಿದ್ದಾರೆ ಎಂದು ಹರೀಶ್ ಹೇಳಿದರು.

ಮತದಾರರ ಪಟ್ಟಿಗೆ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳನ್ನು ಸೇರ್ಪಡೆಗೊಳಿಸುವಂತೆ ಕೆಲವರು ಫಕೀರಪ್ಪ ಅವರ ಮೇಲೆ ಒತ್ತಡ ಹೇರಿದ್ದರು. ಆದರೆ ಸೂಕ್ತ ದಾಖಲೆಗಳಿಲ್ಲದೆ ಹೆಸರುಗಳನ್ನು ಮತದಾರರ ಪಟ್ಟಿಗೆ ಸೇರಿಸಲು ಸಾಧ್ಯವಿಲ್ಲ ಎಂದು ಅವರು ತಿಳಿಸಿದ್ದರಿಂದ ಹಲ್ಲೆ ನಡೆದಿದೆ ಎಂದು ಹರೀಶ್ ಆರೋಪಿಸಿದರು. ಗಾಯಗೊಂಡ ಫಕೀರಪ್ಪ ಅವರು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದಿದ್ದು, ಘಟನೆಯ ಬಳಿಕ ಭಯಭೀತರಾಗಿದ್ದಾರೆ ಎಂದು ತಿಳಿಸಿದರು.


ಶಿವಾಜಿನಗರದಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ಸಂದರ್ಭದಲ್ಲಿ ಅಧಿಕಾರಿಗಳ ಮೇಲೆ ಹಲ್ಲೆ ನಡೆದಿದ್ದರೂ ಸರ್ಕಾರ ಸೂಕ್ತ ಕ್ರಮ ಕೈಗೊಂಡಿಲ್ಲ.

# ಪಾರಂಪರಿಕ ತ್ಯಾಜ್ಯ ವಿಲೇವಾರಿಗೆ 'ತ್ಯಾಜ್ಯದಿಂದ ಸ್ವಾತಂತ್ರ್ಯ' ಅಭಿಯಾನ: ಕೃಷ್ಣ ಬೈರೇಗೌಡ

ಬೆಂಗಳೂರು

ಬೆಂಗಳೂರಿನಾದ್ಯಂತ ಆಗಸ್ಟ್ 1ರಿಂದ 'ತ್ಯಾಜ್ಯದಿಂದ ಸ್ವಾತಂತ್ರ್ಯ' ಅಭಿಯಾನ ಹಮ್ಮಿಕೊಳ್ಳಲಾಗುತ್ತಿದ್ದು, ಸಾರ್ವಜನಿಕ ಸ್ಥಳಗಳಲ್ಲಿ ಹಲವು ವರ್ಷಗಳಿಂದ ಸಂಗ್ರಹವಾಗಿರುವ ಪಾರಂಪರಿಕ ತ್ಯಾಜ್ಯವನ್ನು ಮಾತ್ರ ಈ ಅಭಿಯಾನದಡಿ ತೆರವುಗೊಳಿಸಲಾಗುವುದು. ಗೃಹ ತ್ಯಾಜ್ಯದಿಂದ ಉಂಟಾಗಿರುವ ಕಸದ ಕಪ್ಪು ತಾಣಗಳ ತೆರವು ಕಾರ್ಯವನ್ನು ಮುಂದಿನ ದಿನಗಳಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ಅಭಿಯಾನಕ್ಕೆ ಸಂಬಂಧಿಸಿದಂತೆ ಬುಧವಾರ ನಡೆದ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಗರದ ರಸ್ತೆ ಬದಿ, ಸಾರ್ವಜನಿಕ ಸ್ಥಳಗಳು ಹಾಗೂ ಖಾಲಿ ಜಾಗಗಳಲ್ಲಿ ಹಲವು



ವರ್ಷಗಳಿಂದ ಸಂಗ್ರಹವಾಗಿರುವ ಮಣ್ಣು, ಕಟ್ಟಡ ಭಗ್ನಾವಶೇಷಗಳು, ಪೈಪ್‌ಗಳು, ವಿದ್ಯುತ್ ಕಂಬಗಳು ಸೇರಿದಂತೆ ವಿವಿಧ ರೀತಿಯ ಪಾರಂಪರಿಕ ತ್ಯಾಜ್ಯವನ್ನು ತೆರವುಗೊಳಿಸಲಾಗುವುದು. ಗೃಹ ಬಳಕೆಯ ತ್ಯಾಜ್ಯದಿಂದ ಉಂಟಾಗಿರುವ ಕಸದ ಕಪ್ಪು ತಾಣಗಳನ್ನು ಮುಂದಿನ ಹಂತದಲ್ಲಿ ಸ್ವಚ್ಛಗೊಳಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ರಸ್ತೆ ಬದಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ತ್ಯಾಜ್ಯ ಮತ್ತು ವಿವಿಧ ಸಾಮಗ್ರಿಗಳನ್ನು ಸುರಿಯುತ್ತಿರುವುದರಿಂದ ಅವುಗಳ ಮೇಲೆ ಗಿಡಗಂಟಿಗಳು ಬೆಳೆದು, ಇಲಿ, ಹಾವು ಹಾಗೂ ಸೊಳ್ಳೆಗಳ ಉತ್ಪತ್ತಿಗೆ ಕಾರಣವಾಗುತ್ತಿದೆ. ಇದರಿಂದ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುವುದರ ಜತೆಗೆ, ಈಗಾಗಲೇ ತ್ಯಾಜ್ಯ ಬಿದ್ದಿರುವ ಸ್ಥಳಗಳಲ್ಲಿ ಮತ್ತಷ್ಟು ಕಸ ಎಸೆಯುವ ಪ್ರವೃತ್ತಿ ಹೆಚ್ಚಾಗಿ ನಗರದ ಸೌಂದರ್ಯಕ್ಕೂ ಧಕ್ಕೆ ಉಂಟಾಗುತ್ತಿದೆ ಎಂದು ಹೇಳಿದರು.

ನಗರದಲ್ಲಿರುವ ಅನೇಕ ಖಾಲಿ ನಿವೇಶನಗಳನ್ನು ಸ್ವಚ್ಛವಾಗಿಟ್ಟುಕೊಳ್ಳದ ಕಾರಣ ಮಣ್ಣು, ತ್ಯಾಜ್ಯ ಹಾಗೂ ಕಳೆ–ಗಿಡಗಳು ಬೆಳೆದು ಸುತ್ತಮುತ್ತಲಿನ ನಿವಾಸಿಗಳಿಗೆ ತೊಂದರೆಯಾಗುತ್ತಿದೆ. ಈ ಕುರಿತು ನಾಗರಿಕರಿಂದ ನೂರಾರು ದೂರುಗಳು ಬಂದಿವೆ ಎಂದು ತಿಳಿಸಿದರು.

ರಸ್ತೆ ಬದಿ, ಪಾದಚಾರಿ ಮಾರ್ಗ, ಸಾರ್ವಜನಿಕ ಸ್ಥಳಗಳು ಹಾಗೂ ಖಾಲಿ ನಿವೇಶನಗಳಷ್ಟೇ ಅಲ್ಲದೆ ವಿವಿಧ ಇಲಾಖೆಗಳ ಖಾಲಿ ಜಾಗಗಳಲ್ಲಿಯೂ ಪಾರಂಪರಿಕ ತ್ಯಾಜ್ಯ ಸಂಗ್ರಹವಾಗಿದೆ. ಇದರಿಂದ ಸಂಚಾರಕ್ಕೂ ಅಡಚಣೆ ಉಂಟಾಗುತ್ತಿದೆ. ಪ್ರಸ್ತುತ 1,616 ಸ್ಥಳಗಳಲ್ಲಿ ಸುಮಾರು 22 ಸಾವಿರ ಟನ್ ಪಾರಂಪರಿಕ ತ್ಯಾಜ್ಯವನ್ನು ಗುರುತಿಸಲಾಗಿದೆ. ನಗರದಾದ್ಯಂತ ಒಟ್ಟಾರೆ ಒಂದು ಲಕ್ಷ ಟನ್‌ಗಿಂತಲೂ ಹೆಚ್ಚು ಪಾರಂಪರಿಕ ತ್ಯಾಜ್ಯ ಇರಬಹುದೆಂದು ಅಂದಾಜಿಸಲಾಗಿದೆ ಎಂದು ಕೃಷ್ಣ ಬೈರೇಗೌಡ ತಿಳಿಸಿದರು.

ಈ ಹಿನ್ನೆಲೆಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ, ಐದು ನಗರ ಪಾಲಿಕೆಗಳು, ರೈಲ್ವೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಜಲಮಂಡಳಿ, ಬೆಸ್ಕಾಂ, ಕೆ–ರೈಡ್, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಪಾರಂಪರಿಕ ತ್ಯಾಜ್ಯ ತೆರವು ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದೆ.

ಬೃಹತ್ ಪ್ರಮಾಣದ ತ್ಯಾಜ್ಯ ತೆರವು ಕಾರ್ಯಕ್ಕಾಗಿ ಸುಮಾರು 100 ವಾಹನಗಳನ್ನು ನಿಯೋಜಿಸಲಾಗುತ್ತಿದ್ದು, ಅಗತ್ಯವಿದ್ದಲ್ಲಿ ಹೆಚ್ಚುವರಿ ವಾಹನಗಳನ್ನು ನಿಯೋಜಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.

## ಶ್ರೀಕಾಡಸಿದ್ದೇಶ್ವರ ಶ್ರೀಗಳಿಂದ ಗುರು ಪೂರ್ಣಿಮಿ ನಿಮಿತ್ತ ವಿಶೇಷ ಪೂಜೆ



ತಿಪಟೂರು

ಗುರು ಪರಂಪರೆಯ ರಾಷ್ಟ್ರದಲ್ಲಿ ಗುರುವಿಗೆ ಮೊದಲನೇ ಪೂಜ್ಯ ಸ್ಥಾನವನ್ನು ನೀಡಿ ಗೌರವಿಸಿ ಪೂಜಿಸುವ ರಾಷ್ಟ್ರ ಭಾರತವಾಗಿದೆ. ಹರ ಮುನಿದರೂ ಗುರು ಕಾಯುವನು ಎನ್ನುವ ಧಾರ್ಮಿಕ ಪರಂಪರೆಯಲ್ಲಿ ಗುರುವಿಗಾಗಿ ಆಚರಿಸುವ ಆಷಾಢ ಶುದ್ಧ ಪೌರ್ಣಾಮಿಯ ದಿನ ನಾಡಿನ ಎಲ್ಲಾ ಸದ್ಭಕ್ತರಿಗೆ ಕರುಣಾಮಯಿ ದಯಾಳು ಪರಶಿವನ ಆಶೀರ್ವಾದ ಸದಾ ಇರಲಿ ಎಂದು ಕಾಡಸಿದ್ದೇಶ್ವರ ಮಠದ ಶ್ರೀಡಾ.ಕರಿವೃಷಭದೇಶಿ ಕೇಂದ್ರ ಶಿವಯೋಗಿಶ್ವರ ಸ್ವಾಮೀಜಿ ಆಶಿಸಿದರು.

ಪವಿತ್ರ ಗುರುಪೂರ್ಣಿಮಿ ದಿನದಂದು ತುರುವೇಕೆರೆ ವಿರಕ್ತಮಠದಲ್ಲಿ ಇಷ್ಟಲಿಂಗ ಪೂಜೆ ನೆರವೇರಿಸಿ, ನೊಣವಿನಕೆರೆ ಶ್ರೀಕಾಡಸಿದ್ದೇಶ್ವರ ಮಠದ ಗದ್ದುಗೆಗೆ ರುದ್ರಾಭಿಷೇಕ ಮಹಾಮಂಗಳಾರತಿ ನೆರವೇರಿಸಿ ಭಕ್ತರನ್ನು ಉದ್ದೇಶಿಸಿ ಮಾತನಾಡಿದ ಶ್ರೀಗಳು, ಮೊದಲ ಗುರು ತಾಯಿ. ಶಿಕ್ಷಣ ಕಲಿಸಿ ಬುದ್ಧಿ ಹೇಳಿದ ಗುರು ಧಾರ್ಮಿಕ ಸದ್ಭಕ್ತಿ ಸದ್ಭಾವನೆ ಸಂಸ್ಕಾರ ತಿಳಿಸಿದ ಗುರುವಿಗೆ ಮೊದಲ ಪೂಜ್ಯ ಸ್ಥಾನವನ್ನು ಅನಾದಿ ಕಾಲದಿಂದಲೂ ನೀಡಲಾಗುತ್ತಿದೆ. ಪ್ರತಿಯೊಬ್ಬರ ಸಾಧನೆಯ ಮುಂದೆ ಗುರು ಮತ್ತು ಗುರಿ ಇದ್ದಾಗ ಸಾಧನೆಯ ಶಿಖರವನ್ನು ಏರುತ್ತಾನೆ. ನಾಡಿನ ಅನ್ನದಾತರಿಗೆ, ದೇಶ ಕಾಯುವ ಸೈನಿಕರಿಗೆ, ರಾಜಕಾರಣಿಗಳಿಗೆ, ಶ್ರಮಿಕ,ಕಾರ್ಮಿಕ ಕುಟುಂಬಗಳಿಗೆ ಒಳ್ಳೆಯದಾಗಲಿ, ಮುಂದಿನ ದಿನಗಳಲ್ಲಿ ಉತ್ತಮ ಮಳೆ ಬೆಳೆಯಾಗಿ ಅನ್ನದಾತನ ಮುಖದಲ್ಲಿ ಮಂದಹಾಸ ಬಿರಲಿ ಎಂದು ಆಶೀರ್ವದಿಸಿದರು.

ಕಿರಿಯ ಶ್ರೀಗಳಾದ ಅಭಿನವ ಕಾಡ ಸಿದ್ದೇಶ್ವರ ಶ್ರೀಗಳು ಸೇರಿದಂತೆ ಶ್ರೀ ಮಠದ ಆಡಳಿತ ವರ್ಗ ಹಾಗೂ ನೂರಾರು ಭಕ್ತರು ಹಾಜರಿದ್ದರು.

## ಗುರುತಿನ ಚೀಟಿ ವಿತರಣಾ ಕಾರ್ಯಕ್ರಮ

ದೊಡ್ಡಬಳ್ಳಾಪುರ

ನಗರ ಪತ್ರಕರ್ತರು ಸಮಾಜದ ಹಿತಕ್ಕಾಗಿ ನಾನಾ ಸವಾಲುಗಳನ್ನು ಮೀರಿ ನಿಂತು, ನಿಷ್ಪಕ್ಷಪಾತವಾಗಿ ಸುಡು ಬಿಸಿಲು, ಮಳೆ ಎನ್ನದೆ ಗಂಟೆ ಗಟ್ಟಲೆ ನಿಂತು, ಕಷ್ಟ–ನಷ್ಟಗಳನ್ನು ಲೆಕ್ಕಿಸದೆ ವಾಸ್ತವ ಸಂಗತಿಗಳನ್ನು ಪ್ರತಿ ದಿನ ಜನಸಾಮಾನ್ಯರಿಗೆ ಪ್ರಚಲಿತ ವಿದ್ಯಾಮಾನಗಳನ್ನು ತಲುಪಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತಿರುವ ಎಲ್ಲಾ ಸಂಪಾದಕರು ಹಾಗೂ ವರದಿಗಾರರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ ರಾಜ್ಯ ಸಹಕಾರದೊಂದಿಗೆ ಸಕಲ ಸೌಲಭ್ಯ ಒದಗಿಸಲು ಈ ಸಂಘದ ಗುರುತಿನ ಚೀಟಿ ಅಗತ್ಯವಾಗಿದ್ದು ಇದು ಜಿಲ್ಲಾ ಸಮಿತಿ ಸಹಕಾರದೊಂದಿಗೆ ಗುರುತಿನ ಚೀಟಿ ವಿತರಣೆ ಮಾಡಲಾಗಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ಶ್ರೀನಿವಾಸ್ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಸಮಿತಿ ವತಿಯಿಂದ ಆಯೋಜನೆ ಮಾಡಲಾಗಿದ್ದ ಕಾರ್ಯನಿರತ ಪತ್ರಕರ್ತರ ಸಂಘದ ಸರ್ವ ಸದಸ್ಯರಿಗೆ 2026– 27ನೇ ಸಾಲಿನ ಸದಸ್ಯತ್ವ ಗುರುತಿನ ಚೀಟಿ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಸಂಘದ ವತಿಯಿಂದ ಆಯೋಜನೆ ಮಾಡಲಾಗುವ ಸಭೆಯಲ್ಲಿ ಎಲ್ಲರು ಕಡ್ಡಾಯವಾಗಿ ಭಾಗವಹಿಸುವ ಅಭ್ಯಾಸ ಬೆಳೆಸಿಕೊಳ್ಳಬೇಕು ಈ ಮೂಲಕ ಸಂಘದ ಹಾಗೂ ಸದಸ್ಯರ ಅಭಿವೃದ್ಧಿಗಾಗಿ ನಮ್ಮಲ್ಲಿ ಉತ್ತಮ ನಿರ್ಧಾರ ಕೈಗೊಳ್ಳಲು ಸಹಕಾರಿಯಾಗಲಿದೆ ಎಂದರು.

ತಾಲ್ಲೂಕಿನಲ್ಲಿ ಸುದ್ದಿ ಮಾಡುವ ಬಿಡಿ ಬರಹಗಾರರಿಗೆ ವೇತನ, ಭತ್ಯೆ, ಹಾಗೂ ಆರೋಗ್ಯ ವಿಮೆ ಕಲ್ಪಿಸುವ ಮುಖ್ಯಉದ್ದೇಶವಿದ್ದು ದಿನಪತ್ರಿಕೆ ವರದಿಗಾರರಿಗೆ ಸೌಲಭ್ಯ ಕಲ್ಪಿಸುವ ಕುರಿತು ಜಿಲ್ಲಾ ಸಮಿತಿ ವತಿಯಿಂದ ರಾಜ್ಯ ಸಮಿತಿಗೆ ಪತ್ರ ರವಾನೆ ಮಾಡಲಾಗಿದ್ದು ಮುಂದಿನ ದಿನಗಳಲ್ಲಿ ನಮ್ಮ ಮನವಿ ಕಾರ್ಯರೂಪಕ್ಕೆ ಬರುವ ನಿರೀಕ್ಷೆ ಇದೆ ಎಂದರು.

ಈ ಸಂದರ್ಭದಲ್ಲಿ , ಉಪಾಧ್ಯಕ್ಷರಾದ ರಫಿ ಉಲ್ಲಾ, ಮುನಿವೀರಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆರ್. ರಮೇಶ್, ಜಿಲ್ಲಾ ಖಜಾಂಚಿ ಮುನಿರಾಜು, ಜಿಲ್ಲಾ ಕಾರ್ಯದರ್ಶಿ ಸತೀಶ್,ಜಿಲ್ಲಾ ನಿರ್ದೇಶಕರಾದ ಗಂಗರಾಜು ಶಿರವಾರ, ನೆಲ್ಲುಗುದ್ದಿಗೆ ಚಂದ್ರಪ್ಪ, ಸೇರಿದಂತೆ ತಾಲ್ಲೂಕಿನ ಎಲ್ಲಾ ಪತ್ರಕರ್ತರು ಭಾಗವಹಿಸಿದ್ದರು.

## ಆ.2 ರಂದು ಶಾಲಾ ಮಕ್ಕಳಿಗಾಗಿ ರಾಜ್ಯ ಮಟ್ಟದ ಗಾಳಿಪಟ ಸ್ಪರ್ಧೆ



ದೊಡ್ಡಬಳ್ಳಾಪುರ

ಕರ್ನಾಟಕ ಜಾನಪದ ಪರಿಷತ್ತು ಬೆಂಗಳೂರು ಗ್ರಾ.ಜಿಲ್ಲಾ ಘಟಕ ದೊಡ್ಡ ಬಳ್ಳಾಪುರ ಗಾಳಿಪಟ ಕಲಾ ಸಂಘದ ವತಿಯಿಂದ ಶಾಲಾ ಮಕ್ಕಳಿಗಾಗಿ ರಾಜ್ಯ ಮಟ್ಟದ ಗಾಳಿಪಟ ಸ್ಪರ್ಧೆ–2026, ಆಗಸ್ಟ್ 2 ರಂದು ಮಧ್ಯಾಹ್ನ 11 ಗಂಟೆಯಿಂದ ನಗರದ ಭಗತ್‌ಸಿಂಗ್ ಕ್ರೀಡಾಂಗಣದಲ್ಲಿ ನಡೆಯಲಿದೆ ಎಂದು ದೊಡ್ಡಬಳ್ಳಾಪುರ ಗಾಳಿಪಟ ಕಲಾಸಂಘದ ಅಧ್ಯಕ್ಷ ಎಲ್. ಎನ್.ಶ್ರೀನಾಥ್ ತಿಳಿಸಿದ್ದಾರೆ.

ಈ ಕುರಿತು ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ನೇಕಾರ ಉದ್ಯಮದ ತವರೂರು ದೊಡ್ಡಬಳ್ಳಾಪುರದ ಅತ್ಯಂತ ಪ್ರಾಚೀನ ಹಾಗೂ ಜನಪ್ರಿಯ ಕಲೆಯಾದ ಗಾಳಿಪಟ ತಯಾರಿಸುವ ಹಾಗೂ ಹಾರಿಸುವ ಕಲೆಯನ್ನು ಜೀವಂತವಾಗಿರಿಸುವ ನಿಟ್ಟಿನಲ್ಲಿ, ದೊಡ್ಡಬಳ್ಳಾಮರ ಗಾಳಿಪಟ ಕಲಾಸಂಘವು ಕಳೆದ 19ವರ್ಷಗಳಿಂದ ದೊಡ್ಡಬಳ್ಳಾಪುರದಲ್ಲಿ ಗಾಳಿಪಟ ಉತ್ಸವ ಹಾಗೂ ಸ್ಪರ್ಧೆಗಳನ್ನು ಆಯೋಜಿಸುತ್ತಾ ಬಂದಿದೆ. ನಮ್ಮೊಂದಿಗೆ ಜನಪದ ತಜ್ಞ ಎಚ್.ಎಲ್. ನಾಗೇಗೌಡರವರ ಆಸಕ್ತಿ ಮತ್ತು ಪರಿಶ್ರಮದಿಂದ ಸ್ಥಾಪನೆಯಾದ ಯುನೆಸ್ಕೊ ಮಾನ್ಯತೆ ಪಡೆದಿರುವ ಕರ್ನಾಟಕ ಜಾನಪದ ಪರಿಷತ್ತು ತನ್ನ 36ನೇ ವಾರ್ಷಿಕೋತ್ಸವದ ಅಂಗವಾಗಿ ಜೊತೆಗೂಡಿ, ಈ ಸ್ಪರ್ಧೆಗಳು ನಡೆಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಆಗಸ್ಟ್ 2 ರಂದು ಮಧ್ಯಾಹ್ನ 11 ಗಂಟೆಯಿಂದ ನಗರದ ಭಗತ್‌ಸಿಂಗ್ ಕ್ರೀಡಾಂಗಣದಲ್ಲಿ ಶಾಲಾ ಮಕ್ಕಳಿಗಾಗಿ ರಾಜ್ಯ ಮಟ್ಟದ ಗಾಳಿಪಟ ಸ್ಪರ್ಧೆಯನ್ನು ಏರ್ಪಡಿಸಲಾಗಿದ್ದು, ರಾಜ್ಯದ ವಿವಿದೆಡೆಗಳಿಂದ ಶಾಲಾ ಮಕ್ಕಳು ಭಾಗವಹಿಸಲಿದ್ದಾರೆ.

ದೊಡ್ಡಬಳ್ಳಾಪುರ ಗಾಳಿಪಟ ಕಲಾಸಂಘದ ಕಾರ್ಯದರ್ಶಿ ಎ.ಎನ್.ಪ್ರಕಾಶ್ ಮಾತನಾಡಿ, ಗಾಳಿಪಟ ಸ್ಪರ್ಧೆಗಳನ್ನು ಶಾಸಕ ಧೀರಜ್ ಮುನಿರಾಜ್ ಉದ್ಘಾಟಿಸಲಿದ್ದಾರೆ. ಗಾಳಿಪಟ ಕಲಾ ಸಂಘದ ಅಧ್ಯಕ್ಷ ಎಲ್.ಎನ್. ಶ್ರೀನಾಥ್ ಅಧ್ಯಕ್ಷತೆ ವಹಿಸಲಿದ್ದಾರೆ. ಕರ್ನಾಟಕ ಜಾನಪದ ಪರಿಷತ್ತಿನ ಅಧ್ಯಕ್ಷರಾದ ಪ್ರೊ. ಹಿ.ಚಿ. ಬೋರಲಿಂಗಯ್ಯ, ಮ್ಯಾನೇಜಿಂಗ್ ಟ್ರಸ್ಟಿ ಆದಿತ್ಯ ನಂಜರಾಜ್, ಕರ್ನಾಟಕ ಜಾನಪದ ಪರಿಷತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ಘಟಕದ ಅಧ್ಯಕ್ಷ ಎ.ಎನ್. ಪ್ರಕಾಶ (ಗಾಳಿಪಟ) ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಪ್ರಭಾ ನಾಗರಾಜ್, ಉಪಾಧ್ಯಕ್ಷ ವೆಂಕಟೇಶ್.ಆರ್(ಬಂತಿ) ಸೇರಿದಂತೆ ನಗರಸಭಾ ಸದಸ್ಯರು, ಗಣ್ಯರು ಭಾಗವಹಿಸಲಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಗಣ್ಯರನ್ನು ಸನ್ಮಾನಿಸಲಾಗುವುದು ಎಂದು ತಿಳಿಸಿದರು.ಈ ವೇಳೆ ದೊಡ್ಡಬಳ್ಳಾಪುರ ಗಾಳಿಪಟ ಕಲಾ ಸಂಘದ ಉಪಾಧ್ಯಕ್ಷ ಎಸ್.ಮುನಿರಾಜು, ವಿಶ್ವನಾಥ್, ಜೆ.ವಿ.ಸುಬ್ರಹ್ಮಣ್ಯ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಜರಿದ್ದರು.

## ಕಾವೇರಿ ನೀರು ತಮಿಳುನಾಡಿಗೆ ಬಿಡಬೇಡಿ: ಸರ್ಕಾರಕ್ಕೆ ಕನ್ನಡ ಪರ ಸಂಘಟನೆಗಳ ಎಚ್ಚರಿಕೆ

ದೊಡ್ಡಬಳ್ಳಾಪುರ

ರಾಜ್ಯದಲ್ಲಿ ಮಳೆಯಿಲ್ಲ. ಹಲವು ಜಿಲ್ಲೆಗಳಲ್ಲಿ ಬರದ ಪರಿಸ್ಥಿತಿ ಕಾಡುತ್ತಿದೆ. ಕಾವೇರಿ ಒಡಲು ಕೂಡ ಬರಿದಾಗುತ್ತಿದ್ದು, ಇಂತಹ ಸ್ಥಿತಿಯಲ್ಲಿ ತಮಿಳುನಾಡಿಗೆ ನೀರು ಬಿಡಲು ಹೇಗೆ ಸಾಧ್ಯ. ಒಂದು ವೇಳೆ ಸರ್ಕಾರ ಒತ್ತಡಕ್ಕೊಳಗಾಗಿ ತಮಿಳು ನಾಡಿಗೆ ನೀರು ಹರಿಸಿದರೆ ಕನ್ನಡ ಪರ ರೈತ ಪರ ಸಂಘಟನೆಗಳಿಂದ ತೀವ್ರ ಹೋರಾಟ ಎದುರಿಸಬೇಕಾಗುತ್ತದೆ ಎಂದು ಕರವೇ ಪ್ರವೀಣ್ ಶೆಟ್ಟಿ ಬಣದ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜಘಟ್ಟ ರವಿ ಹೇಳಿದರು.

ನಗರದ ತಾಲೂಕು ಕಚೇರಿ ಆವರಣದಲ್ಲಿ ಕನ್ನಡ ಪರ ಸಂಘಟನೆಗಳ ಒಕ್ಕೂಟದಿಂದ ಕಾವೇರಿ ನೀರು ನಿಯಂತ್ರಣ ಸಮಿತಿ ತೀರ್ಮಾನದ ವಿರುದ್ಧ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಅವರು ಮಾತನಾಡಿ, ರಾಜ್ಯದಲ್ಲಿ ಮಳೆ ಕೊರತೆಯಿಂದ ರೈತರು ಕಂಗಾಲಾಗಿದ್ದಾರೆ. ಇಂತಹ ಸ್ಥಿತಿಯಲ್ಲಿ ಕಾವೇರಿ ನೀರು ತಮಿಳುನಾಡಿಗೆ ನೀಡಿದರೆ ಕನ್ನಡಿಗರು ಏನು ಮಾಡಬೇಕು. ಡೆಡ್ ಸ್ಟೋರೇಜ್ ಬಿಟ್ಟರೆ ಕೇವಲ 8–9 ಟಿಎಂಸಿ ನೀರು ಮಾತ್ರ ಸದ್ಯ ಲಭ್ಯವಿದೆ. ಇದರಲ್ಲೂ 4 ಟಿಎಂಸಿವರೆಗೆ ನೀರನ್ನು ತಮಿಳುನಾಡಿಗೆ ನೀಡಿದರೆ



ಕನ್ನಡಿಗರು ಏನು ಮಾಡಬೇಕು. ಮೇಕೆದಾಟನ್ನು ಕಟ್ಟಲು ಅವರು ಬಿಡುವುದಿಲ್ಲ. ತಮಿಳುನಾಡು ಮಳೆ ನೀರು ವ್ಯರ್ಥ ಆಗುತ್ತಿರುವ ಬಗ್ಗೆ ಕೂಡ ಏನು ಕ್ರಮವಹಿಸುತ್ತಿಲ್ಲ. ಇಂತಹ ಸ್ಥಿತಿಯಲ್ಲಿ ಪ್ರಾಧಿಕಾರದ ಆದೇಶ ದಿಕ್ಕರಿಸುತ್ತೇವೆ. ರಾಜ್ಯ ಸರಕಾರ ಇದನ್ನು ತಿರಸ್ಕರಿಸಬೇಕು. ಕನ್ನಡಿಗರ ಹಿತ ಕಾಪಾಡಬೇಕು. ನ್ಯಾಯಮಂಡಳಿ ಬಂದು ಪರಿಶೀಲಿಸಿ ಆದೇಶ ನೀಡಬೇಕು. ಇಂತಹ ಪರಿಸ್ಥಿತಿಯಲ್ಲೂ ನೀರು ಕೊಡುವುದಿಲ್ಲ. ಸರಕಾರ ನೀರು ಬಿಟ್ಟರೆ ರಸ್ತೆಯಲ್ಲಿ ರಕ್ತ ಚೆಲ್ಲುತ್ತದೆ. ರಾಜ್ಯ ಸರಕಾರ ಇದರ ಬಗ್ಗೆ ಎಚ್ಚರವಹಿಸಬೇಕು ಎಂದು ಹೇಳಿದರು.

ಕನ್ನಡ ಪಕ್ಷದ ರಾಜ್ಯ ಉಪಾಧ್ಯಕ್ಷ ಸಂಜೀವ್ ನಾಯಕ್ ಮಾತನಾಡಿ, ದೇಶದಲ್ಲಿಯೇ ಮಳೆ ಕೊರತೆ ಆಗಿದ್ದು, ಎಲ್ಲೆಡೆ ಬರದ ಸ್ಥಿತಿಯಿದೆ. ವಾಡಿಕೆಗಿಂತ ಶೇ.50ಕ್ಕೂ ಹೆಚ್ಚು ಮಳೆ ಕೊರತೆಯಾಗಿದ್ದು, ಕೆರೆಗಳು, ಜಲಾಶಯಗಳು ಬರಿದಾಗಿದೆ. ನಮಗೆ ನೀರಿನ ಕೊರತೆಯಿರುವಾಗ ತಮಿಳುನಾಡಿಗೆ ನೀರನ್ನು ಹರಿಸುವುದು ಹೇಗೆ. ಪ್ರಾಧಿಕಾರವೂ ಕನ್ನಡಿಗರಿಗೆ ಮಾರಕವಾದ ಆದೇಶ ಮಾಡಿದೆ. ಕಾವೇರಿ ಪ್ರಾಧಿಕಾರ ಆದೇಶದಂತೆ ತಮಿಳುನಾಡಿಗೆ ನೀರು ಬಿಡಲು ಸಾಧ್ಯವಿಲ್ಲ. ಸರಕಾರವೂ ಕೂಡ ಇದಕ್ಕೆ ಬದ್ಧವಾಗಿದ್ದು, ಕನ್ನಡಿಗರ, ರೈತರ ಹಿತ ಕಾಪಾಡಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು.

ಪ್ರತಿಭಟನಕಾರರು ಅಂಬೇಡ್ಕರ್ ವೃತ್ತದಿಂದ ತಾಲೂಕು ಕಚೇರಿವರೆಗೂ ಜಾಥಾ ಮಾಡುವ ಮೂಲಕ ಪ್ರತಿಭಟನೆ ನಡೆಸಿ, ದೊಡ್ಡಬಳ್ಳಾಪುರ ತಹಶೀಲ್ದಾರ್ ಮಲ್ಲಪ್ಪ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಈ ವೇಳೆ ಕನ್ನಡ ಜಾಗೃತ ಪರಿಷತ್ತಿನ ಕಾರ್ಯದರ್ಶಿ ಡಿ.ಪಿ. ಆಂಜನೇಯ, ಪರಮೇಶ್, ವೆಂಕಟೇಶ್, ಮಂಜು, ಶಂಕರ್, ಫಯಾಜ್, ಭಾಸ್ಕರ್, ಸುರೇಶ್, ಚೌಡರಾಜು ಸೇರಿದಂತೆ ಕನ್ನಡ ಪರ ಸಂಘಟನೆಗಳ ಹೋರಾಟಗಾರರು ಭಾಗಿಯಾಗಿದ್ದರು.

## ಪೆಟ್ಟಿಗೆ ಅಂಗಡಿಗಳ ತೆರವುಗೊಳಿಸದಂತೆ ಆಗ್ರಹ

ವಿಜಯಪುರ

ಪಟ್ಟಣದ ದೇವನಹಳ್ಳಿ ಮುಖ್ಯ ರಸ್ತೆಯ ಪ್ರವಾಸಿ ಮಂದಿರದ ಪಕ್ಕದಲ್ಲಿ ರಸ್ತೆಯಿಂದ ಸುಮಾರು 40 ಅಡಿಗಳ ಅಂತರ ಬಿಟ್ಟು, ಪೆಟ್ಟಿಗೆ ಅಂಗಡಿಗಳನ್ನು ಇಟ್ಟುಕೊಂಡು ಕಾಫಿ, ಟೀ ಮಾರಾಟ ಮಾಡಿಕೊಂಡು ಜೀವನ ಸಾಗಿಸುತ್ತಿರುವ ಸಣ್ಣ ವ್ಯಾಪಾರಿಗಳನ್ನು ಪುರಸಭೆಯವರು ತೆರವುಗೊಳಿಸಬಾರದು ಎಂದು ಕೆಪಿಸಿಸಿ ರಾಜ್ಯ ಕಾರ್ಯದರ್ಶಿ ವಿ.ರಾಮಚಂದ್ರಪ್ಪ ಆಗ್ರಹಿಸಿದರು.

ಪುರಸಭೆಯ ಪೌರಕಾರ್ಮಿಕರು, ಪ್ರವಾಸಿಮಂದಿರದ ಪಕ್ಕದಲ್ಲಿರುವ ಪೆಟ್ಟಿಗೆ ಅಂಗಡಿಗಳನ್ನು ತೆರವುಗೊಳಿಸಲು ಬಂದಿದ್ದಾಗ, ಇಲ್ಲಿನ ವ್ಯಾಪಾರಿಗಳು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ನಾವು ಚಿಕ್ಕಬಳ್ಳಾಪುರ ರಸ್ತೆಯಲ್ಲಿ ಅಂಗಡಿಗಳನ್ನು ಇಟ್ಟುಕೊಂಡು ಜೀವನ ಮಾಡುತ್ತಿದ್ದೇವೆ. ರಸ್ತೆ ಅಗಲೀಕರಣ ಕಾಮಗಾರಿಯ ಕಾರಣದಿಂದ ನಮ್ಮನ್ನು ಅಲ್ಲಿಂದ ತೆರವು ಮಾಡಿಸಿದರು. ನಾವು ಬಂದು, ಇಲ್ಲಿ ರಸ್ತೆಯಿಂದ ದೂರಕ್ಕೆ ಅಂಗಡಿಗಳನ್ನು ಇಟ್ಟುಕೊಂಡಿದ್ದೇವೆ. ಇಲ್ಲಿ ವಾಹನಗಳ ಸಂಚಾರಕ್ಕೆ ಅಡ್ಡಿಯಾಗುವುದಿಲ್ಲ. ಆದರೂ ಪುರಸಭೆಯವರು ತೆರವುಗೊಳಿಸಲು ಬಂದಿರುವುದು ಎಷ್ಟು ಸರಿ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಈ ವೇಳೆ ಮಾತನಾಡಿದ ಕೆಪಿಸಿಸಿ ಕಾರ್ಯದರ್ಶಿ ವಿ.ರಾಮಚಂದ್ರಪ್ಪ ಅವರು, ಬಡವರು, ಬೀದಿಬದಿ ವ್ಯಾಪಾರಿಗಳು ಬದುಕುವುದು ಬೇಡವೇ? ಅವರನ್ನು ಎಲ್ಲಿಯೂ ವ್ಯಾಪಾರ ಮಾಡುವುದಕ್ಕೆ ಬಿಡದೇ ಹೋದ ಕಡೆಯಲ್ಲೆಲ್ಲಾ ತೆರವು ಮಾಡುತ್ತಿದ್ದರೆ ಅವರು ಎಲ್ಲಿಗೆ ಹೋಗಬೇಕು? ಸಂಚಾರಕ್ಕೆ ಅಡ್ಡಿಯಿಲ್ಲದೆ, ಇಟ್ಟುಕೊಂಡಿರುವ ಪೆಟ್ಟಿಗೆ ಅಂಗಡಿಗಳನ್ನು ತೆರವುಗೊಳಿಸದಂತೆ ಅವರು ಒತ್ತಾಯಿಸಿದರು.

ಸರಕಾರ ಬಡ ವ್ಯಾಪಾರಿಗಳ ಹಿತ ಕಾಯಬೇಕು. ಪರ್ಯಾಯ ವ್ಯವಸ್ಥೆ ಕಲ್ಪಿಸದೆ ಈ ರೀತಿ ಏಕಾಏಕಿ ತೆರವು ಕಾರ್ಯಾಚರಣೆ ನಡೆಸಿದರೆ ಅವರ ಕುಟುಂಬಗಳು ಬೀದಿಗೆ ಬೀಳುತ್ತವೆ. ಕೂಡಲೇ ಪುರಸಭೆ ಅಧಿಕಾರಿಗಳು ಈ ನಿರ್ಧಾರವನ್ನು ಕೈಬಿಡಬೇಕು. ಸಣ್ಣ ವ್ಯಾಪಾರಿಗಳಿಗೆ ರಕ್ಷಣೆ ನೀಡಬೇಕು. ರಸ್ತೆಯನ್ನು ಒತ್ತುವರಿ ಮಾಡಿಕೊಂಡಿರುವವರನ್ನು ತೆರವುಗೊಳಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮುಖಂಡ ಸಾಧತ್, ನಾರಾಯಣಸ್ವಾಮಿ, ಚಂದ್ರಪ್ಪ, ಸ್ಥಳೀಯ ಮುಖಂಡರು, ಪೆಟ್ಟಿಗೆ ಅಂಗಡಿ ಮಾಲೀಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ವಿಪ್ರ ಸ್ವಯಂ ಉದ್ಯಮ ಯೋಜನೆಗಾಗಿ ಅರ್ಜಿ ಆಹ್ವಾನ

ಕೋಲಾರ

ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ವತಿಯಿಂದ 2026–27ನೇ ಸಾಲಿಗೆ ವಿಪ್ರ ಸ್ವ ಉದ್ಯಮ ನೇರ ಸಾಲ ಯೋಜನೆಯಡಿ ಅರ್ಜಿಗಳನ್ನು ಆಹ್ವಾನಿಸಿದ್ದು, ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ(ಕ್ಯಾಟರಿಂಗ್), ಅಂಗಡಿ, ಟೈಲರಿಂಗ್, ಟ್ಯಾಕ್ಸಿ ಹಾಗೂ ಹಸು ಸಾಕಾಣಿಕೆ ಮಾಡಲು ಕನಿಷ್ಠ ರೂ. 1 ಲಕ್ಷ ಹಾಗೂ ಗರಿಷ್ಠ ರೂ. 2.00 ಲಕ್ಷಗಳವರೆಗೆ ಸಾಲವನ್ನು ಸಹಾಯಧನ ಸಮೇತ ನೀಡಲಾಗುತ್ತದೆ. ಸಹಾಯಧನ ಮೊತ್ತವು ಶೇ 20% ರಷ್ಟಿದ್ದು, ಉಳಿಕೆ 80% ಸಾಲದ ಮೊತ್ತಕ್ಕೆ ಶೇ 4% ಬಡ್ಡಿ ದರದಂತೆ ಒಟ್ಟು 34 ಕಂತುಗಳಲ್ಲಿ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ.

ಈ ಯೋಜನೆಯಡಿ ಅರ್ಜಿ ಸಲ್ಲಿಸಲು ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿ ಹಾಗೂ ಬ್ರಾಹ್ಮಣ ಸಮುದಾಯದ ಸಾಮಾನ್ಯ ವರ್ಗಕ್ಕೆ ಸೇರಿದವರಾಗಿದ್ದು ಆರ್ಥಿಕವಾಗಿ ಹಿಂದುಳಿದ ಪ್ರಮಾಣಪತ್ರ (EWS ಪ್ರಮಾಣ ಪತ್ರ) ಹೊಂದಿರಬೇಕು. ಅರ್ಜಿದಾರರ ವಯೋಮಿತಿ 18 ರಿಂದ 65 ವರ್ಷ ಒಳಗಿದ್ದು, ಒಂದು ಕುಟುಂಬದಿಂದ ಒಬ್ಬರು ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿದೆ.

ವ್ಯಾಸಂಗವನ್ನು ಮುಂದುವರೆಸುತ್ತಿರುವ ವಿದ್ಯಾರ್ಥಿಗಳು ಸದರಿ ಯೋಜನೆಯಡಿ ಅರ್ಜಿ ಸಲ್ಲಿಸಲು ಅವಕಾಶ ಇರುವುದಿಲ್ಲ, ಸಾಲದ ಉದ್ದೇಶವನ್ನು 10 ಪದಗಳಿಗಿಂತ ಕಡಿಮೆ ಇಲ್ಲದಂತೆ ಸ್ಪಷ್ಟವಾಗಿ ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಬೇಕು. ಇಲ್ಲವಾದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದು. ಮಹಿಳಾ ಅರ್ಜಿದಾರರಿಗೆ ಶೇ.33 ಹಾಗೂ ವಿಶೇಷ ಚೇತನ ಅರ್ಜಿದಾರರಿಗೆ ಶೇ. 05 ಮೀಸಲಾತಿ ನೀಡಲಾಗುವುದು. ಅರ್ಜಿದಾರರ ಆಧಾರ್‌ಗೆ ಮೊಬೈಲ್ ಸಂಖ್ಯೆ ಲಿಂಕ್ ಆಗಿರಬೇಕು ಮತ್ತು ಬ್ಯಾಂಕ್ ಖಾತೆ ಓಕಅಖರಡಿ ಸೀಡ್ ಆಗಿರಬೇಕು. ಆಸಕ್ತ ಅರ್ಜಿದಾರರು ವೆಬ್‌ಸೈಟ್ ವಿಳಾಸ: www.ksbdb.Karnataka.gov.inಗೆ ಲಾಗಿನ್ ಆಗಿ ಅರ್ಜಿಯನ್ನು ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ದಿನಾಂಕ:31.08.2026 ಅಂತಿಮ ದಿನವಾಗಿದ್ದು, ಅರ್ಜಿಯನ್ನು ಸದರಿ ದಿನಾಂಕದ ಸಂಜೆ 05.30 ಗಂಟೆಯೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಆಸಕ್ತರು ಸಹಾಯವಾಣಿ ಸಂಖ್ಯೆ:+91 8029605888 ಮತ್ತು +91 8762249230 ಅನ್ನು ಬೆಳಿಗ್ಗೆ 10 ರಿಂದ ಸಂಜೆ 5.30ರೊಳಗೆ ಅಥವಾ ಜಿಲ್ಲಾ ಕೌಶಲ್ಯಾಭಿವೃದ್ಧಿ ಕಛೇರಿ, ಜಿಲ್ಲಾಧಿಕಾರಿಗಳ ಕಾರ್ಯಾಲಯ, ಕೋಲಾರ ಕಛೇರಿಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದೆಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು: ನ್ಯಾಯಾಧೀಶೆ

ಕೆಜಿಎಫ್

ಮಾನವ ಕಳ್ಳ ಸಾಗಾಣಿಕೆ ಮಾನವ ಹಕ್ಕುಗಳ ಉಲ್ಲಂಘನೆಯಾಗಿದೆ. ಈ ಸಮಸ್ಯೆ ತಡೆಗಟ್ಟಲು ಎಲ್ಲರೂ ಸೇರಿ ಶ್ರಮಿಸಬೇಕೆಂದು ಅಪರ ಸಿವಿಲ್ ನ್ಯಾಯಧೀಶೆ ಹಾಗೂ ತಾಲೂಕು ಕಾನೂನು ಸೇವೆಗಳ ಸದಸ್ಯೆ ಶೆಮಿದಾ.ಕೆ ತಿಳಿಸಿದರು.

ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಪೊಲೀಸ್ ಇಲಾಖೆ, ಶಿಕ್ಷಣ ಇಲಾಖೆ, ಸರಕಾರಿ ಬಾಲಕಿಯರ ಪದವಿಪೂರ್ವ ಕಾಲೇಜುಗಳ ಜಂಟಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಮಾನವ ಕಳ್ಳಸಾಗಣಿಕೆ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮನುಷ್ಯರಿಗೆ ಮೋಸ, ಬೆದರಿಕೆ ಅಥವಾ ಬಲವಂತದಿಂದ ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಸಾಗಿಸುವುದು, ಲೈಂಗಿಕ ಶೋಷಣೆ ಅಥವಾ ಇತರೆ ಕೆಲಸ ಮಾಡಿಸುವುದು, ಅಂಗಾಂಗ ಕಳ್ಳಸಾಗಾಣಿಕೆಯಂತಹ ಅಮಾನವೀಯ ಚಟುವಟಿಕೆಗಳಿಗೆ ಬಳಸುವುದೇ ಮಾನವ ಕಳ್ಳ ಸಾಗಾಣಿಕೆಯಾಗಿದೆ.

ಇದು ಮಾನವ ಹಕ್ಕುಗಳ ಉಲ್ಲಂಘನೆಯಾಗಿದ್ದು, ವಿಶ್ವದಾದ್ಯಂತ ದೊಡ್ಡ ಅಪರಾಧವಾಗಿ ಪರಿಗಣಿಸಲಾಗಿದೆ. ಮಹಿಳೆಯರು, ಮಕ್ಕಳು ಮತ್ತು ಆರ್ಥಿಕವಾಗಿ ದುರ್ಬಲ ವರ್ಗದ ಜನರು ಹೆಚ್ಚಾಗಿ ಇದರ ಬಲಿಯಾಗುತ್ತಾರೆ ಎಂದರು.

ಮಾನವ ಕಳ್ಳ ಸಾಗಾಣಿಕೆ ತಡೆಗಟ್ಟಲು ಸರ್ಕಾರ, ಪೊಲೀಸ್ ಇಲಾಖೆ, ಸಾಮಾಜಿಕ ಸಂಘಟನೆಗಳು ಮತ್ತು ಸಾರ್ವಜನಿಕರು ಒಟ್ಟಾಗಿ ಕಾರ್ಯನಿರ್ವಹಿಸಿ ಜನರಲ್ಲಿ ಜಾಗೃತಿ ಮೂಡಿಸಬೇಕು. ಸಾರ್ವಜನಿಕರು ವಿಶೇಷವಾಗಿ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ಮಾನವ ಹಕ್ಕುಗಳ ಉಲ್ಲಂಘನೆಗೆ ಸಂಬಂಧಿಸಿದಂತೆ ಯಾವುದೇ ಅನುಮಾನಾಸ್ಪದ ಚಟುವಟಿಕೆಗಳು ಕಂಡುಬಂದರೆ, ತಕ್ಷಣ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು ಎಂದು ಹೇಳಿದರು.



ಡಿವೈಎಸ್ಪಿ ಲಕ್ಷ್ಮಯ್ಯ ಮಾತನಾಡಿ, ಮಕ್ಕಳ ರಕ್ಷಣಾ ನೀತಿ 2016 ಪರಿಷ್ಕೃತ ಮತ್ತು 2022ರ ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಪಾಲಿಸಬೇಕಾದ ನಿಯಮಗಳ ಕುರಿತು ಪ್ರತಿಯೊಂದು ಶಾಲೆ, ಕಾಲೇಜು ತನ್ನದೇ ಆದ ಲಿಖಿತ ಮಕ್ಕಳ ರಕ್ಷಣಾ ನೀತಿ ಹೊಂದಿರಬೇಕು.

ಶಾಲಾ ಆವರಣದಲ್ಲಿ ದೈಹಿಕ, ಮಾನಸಿಕ, ಲೈಂಗಿಕ, ಭಾವನಾತ್ಮಕ ಹಿಂಸೆ, ಬೆದರಿಕೆ, ರ್‍ಯಾಗಿಂಗ್ ಹಾಗೂ ತಾರತಮ್ಯಕ್ಕೆ ಅವಕಾಶ ನೀಡಬಾರದು. ಶಿಕ್ಷಕರು, ಚಾಲಕರು, ಸಹಾಯಕ ಸಿಬ್ಬಂದಿ ಸೇರಿದಂತೆ ಮಕ್ಕಳೊಂದಿಗೆ ಕೆಲಸ ಮಾಡುವ ಎಲ್ಲರ ಪೊಲೀಸ್ ಹಿನ್ನೆಲೆ ಪರಿಶೀಲನೆ ಪಡೆದುಕೊಳ್ಳಬೇಕು ಸಮಾಲೋಚನೆ ಅಗತ್ಯವಿರುವ ಮಕ್ಕಳಿಗೆ ಮಾನಸಿಕ ಆರೋಗ್ಯ ಮತ್ತು ಸಮಾಲೋಚನಾ ಸೇವೆಗಳನ್ನು ಒದಗಿಸಬೇಕೆಂದು ತಿಳಿಸಿದರು.

ವಕೀಲರ ಸಂಘದ ಅಧ್ಯಕ್ಷ ಎಸ್.ಎನ್. ರಾಜಗೋಪಾಲಗೌಡ ಮಾತನಾಡಿ, ಪ್ರಪಂಚದ ಎರಡನೇ ಅತಿ ದೊಡ್ಡ ದಂಧೆ ಎಂದೇ ಪರಿಗಣಿಸಲಾಗುತ್ತಿರುವ ಮಾನವ ಕಳ್ಳ ಸಾಗಾಣಿಕೆ ರಾಜ್ಯದಲ್ಲೂ ನಿರಾತಂಕವಾಗಿ ನಡೆಯುತ್ತಿದೆ. ಕಳೆದ ಐದು ವರ್ಷಗಳಲ್ಲಿ ರಾಜ್ಯದಲ್ಲಿ 763 ಪ್ರಕರಣಗಳು ದಾಖಲಾಗಿವೆ. ಇವುಗಳು ಅಧಿಕೃತವಾಗಿ ದಾಖಲಾಗಿರುವ ಪ್ರಕರಣಗಳಾದರೆ ಕಾನೂನಿನ ಕಣ್ಣು ತಪ್ಪಿಸಿ ದೊಡ್ಡ ಮಟ್ಟದಲ್ಲಿ ಈ ಜಾಲ ರಾಜ್ಯದಲ್ಲಿ ಹರಡಿಕೊಂಡಿದೆ.

ಹಲವು ಕಾರಣಗಳಿಂದಾಗಿ ನಡೆಯುತ್ತಿರುವ ಮಾವನ ಕಳ್ಳ ಸಾಗಾಣಿಕೆಗೆ ಮಹಿಳೆಯರು, ಅಪ್ರಾಪ್ತರು, ಬಡವರು ಬಲಿಯಾಗುತ್ತಿದ್ದಾರೆ. ಈ ಅಕ್ರಮವನ್ನು ನಿಯಂತ್ರಣ ಮಾಡಲು ಪೊಲೀಸ್ ಇಲಾಖೆ ಮುಂದಾಗಬೇಕೆಂದು ತಿಳಿಸಿದರು.

ರಾಜ್ಯ ಗೃಹ ಇಲಾಖೆ ನೀಡಿರುವ ಅಂಕಿ ಅಂಶಗಳ ಪ್ರಕಾರ, ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ 763 ಮಾನವ ಕಳ್ಳ ಸಾಗಾಣಿಕೆ ಪ್ರಕರಣಗಳು ದಾಖಲಾಗಿವೆ. ಈ ಪ್ರಕರಣಗಳಲ್ಲಿ ಭಾಗಿಯಾದ 972 ಆರೋಪಿಗಳನ್ನು ಬಂಧಿಸಲಾಗಿದೆ. ಮಾನವ ಕಳ್ಳ ಸಾಗಾಣಿಕೆಯನ್ನು ತಡೆಗಟ್ಟಲು ರಾಜ್ಯ ಸಿಐಡಿ ಘಟಕದಲ್ಲಿ ಆಂಟಿ ಹ್ಯೂಮನ್ ಟ್ರಾಫಿಕಿಂಗ್ ಸೆಲ್ ಸ್ಥಾಪಿಸಲಾಗಿದ್ದರೂ ಪೊಲೀಸರ ಕಣ್ಣು ತಪ್ಪಿಸಿ ವ್ಯವಸ್ಥಿತವಾಗಿ ಈ ದಂಧೆ ನಡೆಯುತ್ತಿದೆ.

ಈ ಸಂದರ್ಭದಲ್ಲಿ ಒಂದನೇ ಅಪರ ಸಿವಿಲ್ ನ್ಯಾಯಾಧೀಶೆ ಅಶ್ವಿನಿ.ವಿ, ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಜಿ. ನಾರಾಯಣಸ್ವಾಮಿ, ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಎನ್.ನಾಗರಾಜ್, ಸರಕಾರಿ ನೌಕರರ ಸಂಘದ ಅಧ್ಯಕ್ಷ ಎಲ್.ನರಸಿಂಹಮೂರ್ತಿ ಮಾನವ ಕಳ್ಳ ಸಾಗಣಿಕೆ ಕುರಿತು ಅರಿವು ಮೂಡಿಸಿದರು.

## ಖಾಲಿ ಇರುವ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನ

ರಾಮನಗರ

ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲೆಯ ನ್ಯಾಯಾಂಗ ಘಟಕಕ್ಕೆ ಮಂಜೂರಾಗಿರುವ ಬೆರಳಚ್ಚುಗಾರರು, ಬೆರಳಚ್ಚು–ನಕಲುಗಾರರು, ಆದೇಶ ಜಾರಿಕಾರರು ಮತ್ತು ಸೇವಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಬೆಂಗಳೂರು ದಕ್ಷಿಣ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ https://ramanagara.dcourts.gov.in/online-recruitment ಮೂಲಕ ಇದೇ ಆಗಸ್ಟ್ 31ರ ರಾತ್ರಿ 11.59ರ ವರೆಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಬೆಂಗಳೂರು ದಕ್ಷಿಣ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ https://ramanagara.dcourts.gov.in/online-recruitment ಅನ್ನು ಸಂಪರ್ಕಿಸುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜಪ್ಪ ಹನಮಂತಪ್ಪ ಅಣ್ಣಯ್ಯನವರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ‘ಬೂತ್ ಮಟ್ಟದಿಂದ ಕಾಂಗ್ರೆಸ್ ಬಲವರ್ಧನೆಗೆ ಹೊಸ ಹೆಜ್ಜೆ’

ಮಾಲೂರು

ಬೂತ್ ಮಟ್ಟದಲ್ಲಿ ಕಾಂಗ್ರೆಸ್ ಪಕ್ಷವನ್ನು ಬಲಿಷ್ಠ ಗೊಳಿಸಲು ರಾಹುಲ್ ಗಾಂಧಿಯವರ ಸೂಚನೆ ಮೇರೆಗೆ ಜಿಲ್ಲಾಧ್ಯಕ್ಷರನ್ನು ಹೊಸ ಪ್ರಯೋಗದೊಂದಿಗೆ ಆಯ್ಕೆ ಮಾಡಲಾಗುತ್ತಿದ್ದು, ಜಿಲ್ಲಾಧ್ಯಕ್ಷರನ್ನು ಆಯ್ಕೆ ಮಾಡಲು ಪ್ರತಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರ ಅಭಿಪ್ರಾಯವನ್ನು ಸಂಗ್ರಹಿಸಿ ಐಸಿಸಿ ವರಿಷ್ಠರಿಗೆ ಮಾಹಿತಿ ಒದಗಿಸಲಾಗುವುದು ಎಂದು ಎಐಸಿಸಿ ವೀಕ್ಷಕ ರಾಮಕಿಶನ್ ಒಜಾ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷರ ಆಯ್ಕೆಗೆ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರಿಂದ ಅಭಿಪ್ರಾಯ ಸಂಗ್ರಹಣೆ ಮಾಡಲು ಮಾಲೂರು, ಮಾಸ್ತಿ ಬ್ಲಾಕ್ ಕಾಂಗ್ರೆಸ್ ಸಮಿತಿಗಳ ವತಿಯಿಂದ ಆಯೋಜಿಸಲಾಗಿದ್ದ ಸಭೆಗೆ ಎಐಸಿಸಿ ವೀಕ್ಷಕರಾದ ರಾಮಕಿಶನ್ ಒಜಾ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದರು.

ಈ ಹಿಂದೆ ಕಾಂಗ್ರೆಸ್ ಪಕ್ಷದ ಜಿಲ್ಲಾಧ್ಯಕ್ಷರನ್ನು ಆಯ್ಕೆ ಮಾಡುವ ವೇಳೆ ನಾಲ್ಕೈದು ಮುಖಂಡರು ಚರ್ಚಿಸಿ ತೀರ್ಮಾನ ಮಾಡುತ್ತಿದ್ದರು, ಆದರೆ ಕಾಂಗ್ರೆಸ್ ಪಕ್ಷದ ರಾಹುಲ್ ಗಾಂಧಿಯವರು ವಿನೂತನ ಪ್ರಯೋಗ ಮಾಡುತ್ತಿದ್ದು, ಕಾರ್ಯಕರ್ತರ ಅಭಿಪ್ರಾಯದ ಮೇರೆಗೆ ಆಯ್ಕೆ ಮಾಡಲು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ವೀಕ್ಷಕರನ್ನು



ಕಳುಹಿಸಿದ್ದಾರೆ. ಕಾಂಗ್ರೆಸ್ ಪಕ್ಷದ ಜಿಲ್ಲಾಧ್ಯಕ್ಷರಾಗುವವರು ಚತುರರಾಗಿರಬೇಕು, ಸಂಘಟನಾ ಶಕ್ತಿ ಎಲ್ಲರನ್ನೂ ಒಗ್ಗೂಡಿಸಿಕೊಂಡು ಹೋಗಬೇಕು, ಪಕ್ಷವನ್ನು ಗಟ್ಟಿಗೊಳಿಸಲು ಮುಂದಾಗುವಂತಹವರನ್ನು ಆಯ್ಕೆ ಮಾಡಲು ಕಾರ್ಯಕರ್ತರೇ ತಮ್ಮ ಅಭಿಪ್ರಾಯಗಳನ್ನು ತಿಳಿಸುವ ಹೊಸ ಪ್ರಯೋಗವನ್ನು ಆರಂಭಿಸಿದ್ದಾರೆ.

ಬೂತ್ ಮಟ್ಟದಲ್ಲಿ ನಮ್ಮ ಪಕ್ಷ ದುರ್ಬಲವಾಗಿ ರುವುದರಿಂದ ಪಕ್ಷವನ್ನು ಬೇರು ಮಟ್ಟದಿಂದ ಸಂಘಟಿಸಿ ಪಕ್ಷವನ್ನು ಬಲಿಷ್ಠ ಗೊಳಿಸಲಾಗುವುದು, ಪಕ್ಷದ ಕಾರ್ಯಕರ್ತರು ಶಿಸ್ತಿನ ಸಿಪಾಯಿಗಳಾಗಿ ಪಕ್ಷದ ಸಂಘಟನೆಯಲ್ಲಿ ತೊಡಗಿಸಿಕೊಳ್ಳುತ್ತಾರೆ. ಇಲ್ಲಿನ ಕಾಂಗ್ರೆಸ್ ಪಕ್ಷದ ಶಾಸಕ ಕೆ.ವೈ.ನಂಜೇಗೌಡ ಅವರ ಮಾರ್ಗದರ್ಶನದಲ್ಲಿ ಪಕ್ಷ ಬಲಿಷ್ಠವಾಗಿದೆ, ಇವರು ಶಾಸಕರಾದ ನಂತರ ಎಲ್ಲಾ ಚುನಾವಣೆಗಳಲ್ಲಿ ಪಕ್ಷಕ್ಕೆ ಜಯ ತಂದುಕೊಟ್ಟಿದ್ದಾರೆ. ಮುಂಬರುವ ದಿನಗಳಲ್ಲಿಯೂ ಸಹ ಪಕ್ಷ ಮತ್ತಷ್ಟು ಬಲಿಷ್ಠ ಗೊಳಿಸಲು ಬೂತ್ ಮಟ್ಟದಿಂದ ಪಕ್ಷದ ಸದೃಢ ಕಾರ್ಯಕರ್ತರನ್ನು ಸದಸ್ಯರನ್ನಾಗಿ ಮಾಡಿ ಮುಂಬರುವ ಚುನಾವಣೆಗಳಿಗಾಗಿ ಪಕ್ಷವನ್ನು ಸಂಘಟಿಸಲಾಗುವುದು. ಜಿಲ್ಲಾಧ್ಯಕ್ಷರ ಆಯ್ಕೆಗೆ ಪ್ರತಿಯೊಬ್ಬ ಕಾರ್ಯಕರ್ತರು ಪ್ರತ್ಯೇಕವಾಗಿ ಅಭ್ಯರ್ಥಿಗಳ ಹೆಸರು ಹಾಗೂ ಅವರ ಅಭಿಪ್ರಾಯ ತಿಳಿಸಬಹುದಾಗಿತ್ತು ಕಾರ್ಯಕರ್ತರಿಂದ ಸಂಗ್ರಹಿಸಿದ ಅಭಿಪ್ರಾಯಗಳ ಮಾಹಿತಿಯನ್ನು ಎಐಸಿಸಿ ವರಿಷ್ಠರಿಗೆ ಪಕ್ಷದ ವರಿಷ್ಠರು ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷರ ಆಯ್ಕೆಯನ್ನು ಪ್ರಕಟಿಸುತ್ತಾರೆ.

ಶಾಸಕ ಕೆ ವೈ ನಂಜೇಗೌಡ ಮಾತನಾಡಿ, ಜಿಲ್ಲಾಧ್ಯಕ್ಷರ ಆಯ್ಕೆ ಇದೊಂದು ವಿನೂತನ ಪ್ರಯೋಗವನ್ನು ನಮ್ಮ ನಾಯಕರದ ರಾಹುಲ್ ಗಾಂಧಿಯವರು ಆರಂಭಿಸಿರುವುದು ಒಳ್ಳೆಯ ಬೆಳವಣಿಗೆಯಾಗಿದೆ, ಪಕ್ಷದಲ್ಲಿ ಕಾರ್ಯಕರ್ತರು ಬಲಿಷ್ಠವಾಗಿದ್ದಾರೆ, ತಾಲೂಕಿನಲ್ಲಿ ಪಕ್ಷದ ಮುಖಂಡರ ಒಗ್ಗಟ್ಟು ಹಾಗೂ ಶ್ರಮದಿಂದ ಕಾಂಗ್ರೆಸ್ ಪಕ್ಷ ಬಲಿಷ್ಠವಾಗಿದೆ, ಜಿಲ್ಲಾಧ್ಯಕ್ಷರ ವಿನೂತನ ರೀತಿಯಲ್ಲಿ ಆಯ್ಕೆ ಮಾಡಲು ರಾಹುಲ್ ಗಾಂಧಿಯವರು ಕಳುಹಿಸಿರುವ ವೀಕ್ಷಕರು ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತರಿಂದ ಅಭಿಪ್ರಾಯವನ್ನು ಸಂಗ್ರಹಿಸಿ ಜಿಲ್ಲಾ ವರಿಷ್ಠರಿಗೆ ನೀಡಲಿದ್ದಾರೆ.

ಮಾಜಿ ಶಾಸಕ ಎ.ನಾಗರಾಜ್, ಕೆಪಿಸಿಸಿ ವೀಕ್ಷಕರದ ಮಾಜಿ ಶಾಸಕ ಸಂಪಂಗಿ, ವೆಂಕಟೇಶ, ಮಣಿಂದರ್ ಸಿಂಗ್, ಯೋಗೇಶ್ವರಿ ವಿಜಯ, ಸಿ.ಲಕ್ಷ್ಮೀ ನಾರಾಯಣ್, ಹೇಮಮಾಲಿನಿ, ಎಂ ಕೃಷ್ಣಪ್ಪ, ಎಸ್ ಜೆ ರಾಮಮೂರ್ತಿ, ನಾರಾಯಣಸ್ವಾಮಿ, ಯೋಜನಾ ಪ್ರಾಧಿಕಾರ ಅಧ್ಯಕ್ಷ ವಿಜಯನರಸಿಂಹ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಮುಖಂಡರು ಹಾಜರಿದ್ದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
02/08/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಗ್ರಾಪಂ ಅಧಿಕಾರಿಗಳ ನಿರ್ಲಕ್ಷ್ಯ: ಬೇಸತ್ತ ಮಹಿಳೆಯರಿಂದ ಖಾಲಿ ಬಿಂದಿಗೆಗಳ ಪ್ರತಿಭಟನೆ



ಬಂಗಾರಪೇಟೆ

ತಾಲೂಕಿನ ಚಿಕ್ಕ ಅಂಕಂಡಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಅಧಿಕಾರಿಗಳ ನಿರ್ಲಕ್ಷ್ಯ ದಿಂದ ಪಾಕರಹಳ್ಳಿ ಗ್ರಾಮದಲ್ಲಿ ಕಳೆದ ಮೂರು ತಿಂಗಳಿಂದ ಉಲ್ಬಣಗೊಂಡಿರುವ ಕುಡಿಯುವ ನೀರಿನ ಸಮಸ್ಯೆಯಿಂದ ಬೇಸತ್ತ ಗ್ರಾಮಸ್ಥರು, ವಿಶೇಷವಾಗಿ ಮಹಿಳೆಯರು, ಖಾಲಿ ಬಿಂದಿಗೆಗಳೊಂದಿಗೆ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಸುಮಾರು ಸಾವಿರಕ್ಕೂ ಅಧಿಕ ಜನಸಂಖ್ಯೆ ಹಾಗೂ 400ರಿಂದ 500 ಮನೆಗಳನ್ನು ಹೊಂದಿರುವ ಪಾಕರಹಳ್ಳಿ ಗ್ರಾಮದಲ್ಲಿ ಕಳೆದ ಆರು ತಿಂಗಳ ಹಿಂದೆ ಪಂಚಾಯಿತಿ ವತಿಯಿಂದ ಟ್ಯಾಂಕ್‌ನಿಂದ ಮನೆಮನೆಗೆ ನಳಗಳ ಮೂಲಕ ನೀರು ಪೂರೈಕೆ ಮಾಡುವ ವ್ಯವಸ್ಥೆ ಮಾಡಲಾಗಿತ್ತು. ಆದರೆ ಕಳೆದ ಮೂರು ತಿಂಗಳಿಂದ ನಳಗಳಲ್ಲಿ ನೀರು ಬರುತ್ತಿಲ್ಲ ಎಂದು ಗ್ರಾಮಸ್ಥರು ಆರೋಪಿಸಿದರು.

ಕುಡಿಯುವ ನೀರಿನ ಅಭಾವದಿಂದ ಗ್ರಾಮಸ್ಥರು ಖಾಸಗಿ ಕೊಳವೆಬಾವಿಗಳಲ್ಲಿ ಬಿಂದಿಗೆಗಳಲ್ಲಿ ನೀರು ತುಂಬಿಕೊಂಡು ಬರಬೇಕಾದ ಪರಿಸ್ಥಿತಿ ಎದುರಾಗಿದೆ. ಹಲವರು ಟ್ಯಾಂಕರ್ ಮೂಲಕ ಹಣ ನೀಡಿ ನೀರು ಖರೀದಿಸುವ ಅನಿವಾರ್ಯತೆ ಎದುರಿಸುತ್ತಿದ್ದಾರೆ. ಈ ಸಮಸ್ಯೆ ಕುರಿತು ಹಲವು ಬಾರಿ ಪಂಚಾಯಿತಿ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಶಾಶ್ವತ ಪರಿಹಾರ ದೊರೆಯಲಿಲ್ಲ ಎಂದು ಗ್ರಾಮಸ್ಥರು ದೂರಿದರು.

ಈ ಹಿನ್ನೆಲೆ ರೊಚ್ಚಿಗೆದ್ದ ಮಹಿಳೆಯರು ಕೋಲಾರ–ಬಂಗಾರಪೇಟೆ ಮುಖ್ಯರಸ್ತೆಯ ಹುದುಕುಳ ವೃತ್ತದ ಪಾಕರಹಳ್ಳಿ ರಸ್ತೆಯಲ್ಲಿ ಖಾಲಿ ಬಿಂದಿಗೆಗಳೊಂದಿಗೆ ಧರಣಿ ನಡೆಸಿ ಪ್ರತಿಭಟನೆಗೆ ಇಳಿದರು. ಸುಮಾರು ಮೂರು ಗಂಟೆಗಳ ಕಾಲ ನಡೆದ ಪ್ರತಿಭಟನೆಯಿಂದ ಈ ರಸ್ತೆಯಲ್ಲಿ ವಾಹನ ಸಂಚಾರಕ್ಕೂ ಅಡಚಣೆ ಉಂಟಾಯಿತು.

ಮಾಹಿತಿ ತಿಳಿದು ಸ್ಥಳಕ್ಕೆ ಜಿಪಂ ಉಪ ವಿಭಾಗದ ಎಇಇ ಆನಂದ್, ಪಿಡಿಓ ದೇವರಾಜ್, ಜಲಜೀವನ್ ಮಿಷನ್ (ಜೆಜೆಎಂ) ಇಂಜಿನಿಯರ್ ರಾಜಶೇಖರ್ ಹೀರೇಮಠ್ ಹಾಗೂ ಸಬ್ ಇನ್ಸ್‌ಪೆಕ್ಟರ್ ರಾಜಣ್ಣ ಭೇಟಿ ನೀಡಿ ಪ್ರತಿಭಟನಾನಿರತ ಮಹಿಳೆಯರನ್ನು ಸಮಾಧಾನಪಡಿಸಲು ಪ್ರಯತ್ನಿಸಿದರು.

ಈ ವೇಳೆ ಮಹಿಳೆಯರು ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡರು. ನಾಳೆ ಬೆಳಿಗ್ಗೆಯೊಳಗೆ ನೀರು ಪೂರೈಕೆಗೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಅಧಿಕಾರಿಗಳು ಭರವಸೆ ನೀಡಿದ ಬಳಿಕ ಪ್ರತಿಭಟನೆಯನ್ನು ಹಿಂಪಡೆಯಲಾಯಿತು. ಭರವಸೆಯಂತೆ ನೀರು ಪೂರೈಕೆ ಆಗದಿದ್ದರೆ ಮತ್ತೆ ಉಗ್ರ ಪ್ರತಿಭಟನೆ ನಡೆಸುವುದಾಗಿ ಮಹಿಳೆಯರು ಎಚ್ಚರಿಕೆ ನೀಡಿದರು.

ಪ್ರತಿಭಟನೆಯ ವೇಳೆ ಅಧಿಕಾರಿಗಳು ಪರಿಶೀಲನೆ ನಡೆಸಿದಾಗ ಪಾಕರಹಳ್ಳಿ ಕೆರೆಯಲ್ಲಿರುವ ಗ್ರಾಮ ಕೊಳವೆಬಾವಿಯ ಮೋಟಾರು ಹಾಗೂ ಕೇಬಲ್ ಸುಟ್ಟು ಹೋಗಿರುವುದು ಬೆಳಕಿಗೆ ಬಂತು. ತಕ್ಷಣವೇ ಸ್ಥಳದಲ್ಲೇ ದುರಸ್ತಿ ಕಾರ್ಯ ಕೈಗೊಂಡು ಕೇಬಲ್ ಮತ್ತು ಮೋಟಾರನ್ನು ಸರಿಪಡಿಸಿ ನೀರು ಪೂರೈಕೆಗೆ ಕ್ರಮ ಕೈಗೊಳ್ಳಲಾಯಿತು. ಕೊಳವೆ ಬಾವಿಯ ಕೇಬಲ್ ಮತ್ತು ಮೋಟಾರು ದುರಸ್ಥಿ ಪಡಿಸಲು ಮಹಿಳೆಯರು ಖಾಲಿ ಬಿಂದಿಗೆ ಹಿಡಿದು ರಸ್ತೆ ಗಿಳಿಯಬೇಕಾದ ಪರಿಸ್ಥಿತಿ ಏಕೆ ನಿರ್ಮಾಣವಾಗಬೇಕು? ಎಂದು ಗ್ರಾಮಸ್ಥರು ಪ್ರಶ್ನಿಸಿದಾಗ ಅಧಿಕಾರಿಗಳು ಮೌನವಾಗಿರುವ ಘಟನೆ ಗಮನ ಸೆಳೆಯಿತು.

ತಾಲೂಕಿನ ಪಾಕರಹಳ್ಳಿ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಆಗ್ರಹಿಸಿ ಖಾಲಿ ಬಿಂದಿಗೆಗಳೊಂದಿಗೆ ರಸ್ತೆ ತಡೆದು ಪ್ರತಿಭಟನೆ ನಡೆಸಿದ ಮಹಿಳೆಯರು. ಪ್ರತಿಭಟನೆ ಬಿಸಿ ನಂತರ ಪಂಚಾಯತಿಗೆ ಸೇರಿದ ಕೊಳವೆಬಾವಿಯ ಕೇಬಲ್ ರಿಪೇರಿ ಕಾರ್ಯ ನಡೆಯುತ್ತು.

ಕಳೆದ ಮೂರು ತಿಂಗಳಿಂದ ನಮ್ಮ ಗ್ರಾಮದಲ್ಲಿ ಕುಡಿಯುವ ನೀರಿನ ತೀವ್ರ ಸಮಸ್ಯೆ ಎದುರಾಗಿದೆ. ಪ್ರತಿದಿನ ಖಾಸಗಿ ಕೊಳವೆಬಾವಿಗಳಿಗೆ ಹೋಗಿ ಬಿಂದಿಗೆಗಳಲ್ಲಿ ನೀರು ತಂದು ಜೀವನ ಸಾಗಿಸಬೇಕಾಗಿದೆ. ಹಲವು ಬಾರಿ ಪಂಚಾಯಿತಿ ಅಧಿಕಾರಿಗಳಿಗೆ ಮನವಿ ಮಾಡಿದರೂ ಯಾವುದೇ ಶಾಶ್ವತ ಪರಿಹಾರ ಸಿಕ್ಕಿಲ್ಲ. ನಮ್ಮ ಕಷ್ಟವನ್ನು ಯಾರೂ ಕೇಳದ ಕಾರಣ ಅನಿವಾರ್ಯವಾಗಿ ಖಾಲಿ ಬಿಂದಿಗೆಗಳೊಂದಿಗೆ ರಸ್ತೆಗಿಳಿದು ಪ್ರತಿಭಟನೆ ನಡೆಸಿದ್ದೇವೆ. ಇನ್ನುಂದೆಯಾದರೂ ಅಧಿಕಾರಿಗಳು ಎಚ್ಚೆತ್ತುಕೊಂಡು ಗ್ರಾಮಕ್ಕೆ ನಿರಂತರವಾಗಿ ಕುಡಿಯುವ ನೀರು ಪೂರೈಸಬೇಕು.

–ಗ್ರಾಮಸ್ಥೆ
ಪ್ರತಿಭಟನಾನಿರತ ಮಹಿಳೆ

ನೀರಿನ ಸಮಸ್ಯೆ ನಿವಾರಣೆಗೆ ರೈತರ ಕೊಳವೆಬಾವಿಗಳ ಮೂಲಕ ತಾತ್ಕಾಲಿಕವಾಗಿ ನೀರು ಪೂರೈಕೆ ಮಾಡುವ ವ್ಯವಸ್ಥೆ ಮಾಡಲಾಗಿತ್ತು. ಆದರೆ ವಿದ್ಯುತ್ ವ್ಯತ್ಯಯದಿಂದ ಸಮಸ್ಯೆ ಉಂಟಾಯಿತು. ಗ್ರಾಮದ ಕೊಳವೆಬಾವಿಯಲ್ಲಿ ಸುಟ್ಟು ಹೋಗಿದ್ದ ಮೋಟಾರು ಹಾಗೂ ಕೇಬಲ್ ಅನ್ನು ದುರಸ್ತಿಪಡಿಸಿ ನೀರು ಪೂರೈಕೆಗೆ ಕ್ರಮ ಕೈಗೊಳ್ಳಲಾಗಿದೆ. ಮುಂದಿನ ದಿನಗಳಲ್ಲಿ ಗ್ರಾಮದಲ್ಲಿ ನೀರಿನ ಸಮಸ್ಯೆ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕೆ ವಹಿಸಲಾಗುವುದು.

–ದೇವರಾಜ್. ಪಿಡಿಓ




## 'ಗುರು ಎಂದರೆ ಜ್ಞಾನದ ಬೆಳಕು'

ಕೊರಟಗೆರೆ

ಗುರು ಎಂದರೆ ಜ್ಞಾನದ ಬೆಳಕು. ಭಾರತೀಯ ಸಂಸ್ಕೃತಿಯಲ್ಲಿ ಗುರುಪೂರ್ಣಿಮೆಗೆ ವಿಶೇಷ ಮಹತ್ವವಿದ್ದು, ಆಧ್ಯಾತ್ಮಿಕತೆ ಮತ್ತು ಸೇವಾ ಮನೋಭಾವದ ಪ್ರತೀಕವಾಗಿ ಪಟ್ಟಣದ ಪುಣ್ಯಕೋಟಿ ಬಡಾವಣೆಯಲ್ಲಿರುವ ಶಿರಡಿ ಸಾಯಿಬಾಬಾ ದೇವಾಲಯದಲ್ಲಿ ಏಳನೇ ವರ್ಷದ ಗುರುಪೂರ್ಣಿಮೆ ಮಹೋತ್ಸವವನ್ನು ಭಕ್ತಿಭಾವದಿಂದ ಹಾಗೂ ವಿಜೃಂಭಣೆಯಿಂದ ಬುಧವಾರ ಆಚರಿಸಲಾಯಿತು.

ಶಿರಡಿ ಸಾಯಿಬಾಬಾ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಆಯೋಜಿಸಲಾಗಿದ್ದ ಈ ಮಹೋತ್ಸವದಲ್ಲಿ ಸಾವಿರಾರು ಭಕ್ತರು ಪಾಲ್ಗೊಂಡು ಸಾಯಿಬಾಬಾರ ದರ್ಶನ ಪಡೆದು ವಿಶೇಷ ಪೂಜೆಯಲ್ಲಿ ಭಾಗವಹಿಸಿದರು. ಪ್ರತಿ ವರ್ಷವೂ ಗುರುಪೂರ್ಣಿಮೆಯನ್ನು ವಿಶೇಷವಾಗಿ ಆಚರಿಸುತ್ತಿದ್ದು, ನಮ್ಮ ನಿರೀಕ್ಷೆಗೂ ಮೀರಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿರುವುದು ಸಂತಸ ತಂದಿದೆ ಎಂದು ಟ್ರಸ್ಟ್ ಅಧ್ಯಕ್ಷ ಶಂಕರನಾರಾಯಣ ತಿಳಿಸಿದರು.

ಮುಂಜಾನೆ 4.30 ಗಂಟೆಯಿಂದಲೇ ಸಾಯಿಮಂದಿರದಲ್ಲಿ ವಿಶೇಷ ಪೂಜೆ, ಮಹಾಭಿಷೇಕ, ಕೋಲಾಟ, ಭಜನೆ ಸೇರಿದಂತೆ ವಿವಿಧ ಧಾರ್ಮಿಕ ಹಾಗೂ ಆಧ್ಯಾತ್ಮಿಕ ಕಾರ್ಯಕ್ರಮಗಳು ನಡೆದವು. ದಿನವಿಡೀ ಭಕ್ತರು ಗುರುದೇವರ ದರ್ಶನ ಪಡೆದು ವಿಶೇಷ ಪೂಜೆಯಲ್ಲಿ ಪಾಲ್ಗೊಂಡು ತಮ್ಮ ಭಕ್ತಿ ಸಮರ್ಪಿಸಿದರು.

ಟ್ರಸ್ಟ್ ಉಪಾಧ್ಯಕ್ಷ ಡಾ. ಮಲ್ಲಿಕಾರ್ಜುನ್, ಕಾರ್ಯದರ್ಶಿ ಗಿರೀಶ್, ಖಜಾಂಚಿ ಪ್ರಕಾಶ್, ನಿರ್ದೇಶಕರಾದ ಬದ್ರಿಪ್ರಸಾದ್, ಆದಿ ರಮೇಶ್, ನವೀನ್ ಕುಮಾರ್, ಸುಧಾಮಣಿ, ಉಮಾ ಮಹೇಶ್ವರಿ, ಕೆ.ಎಸ್. ಈರಣ್ಣ ಸೇರಿದಂತೆ ಟ್ರಸ್ಟ್ನ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

## ಪುಟ್ಟ ಮಕ್ಕಳಿಗೆ ಅಕ್ಷರಾಭ್ಯಾಸ

ತಿಪಟೂರು

ನಗರದ ಶ್ರೀ ರುದ್ರಮುನಿ ಸ್ವಾಮೀಜಿ ಇಂಟರ್ನ್ಯಾಷನಲ್ ಪಬ್ಲಿಕ್ ಶಾಲೆಯಲ್ಲಿ ಗುರುಪೂರ್ಣಿಮೆ ಮಹೋತ್ಸವವನ್ನು ಅತ್ಯಂತ ವಿಜೃಂಭಣೆ ಮತ್ತು ಶ್ರದ್ಧಾಭಕ್ತಿಗಳಿಂದ ಆಚರಿಸಲಾಯಿತು.

ಗುರುಗಳ ಸ್ಮರಣೆ ಹಾಗೂ ಪೂಜನದೊಂದಿಗೆ ಆರಂಭವಾದ ಈ ಶುಭ ಸಮಾರಂಭದಲ್ಲಿ ಶಾಲೆಯ ಹೊಸ ಪುಟ್ಟ ಮಕ್ಕಳಿಗೆ ಧಾರ್ಮಿಕ ವಿಧಿ–ವಿಧಾನಗಳೊಂದಿಗೆ ಅಕ್ಷರಾಭ್ಯಾಸ ಕಾರ್ಯಕ್ರಮವನ್ನು ನೆರವೇರಿಸಲಾಯಿತು. ವಿದ್ಯಾರಂಭದ ಈ ಪವಿತ್ರ ಕ್ಷಣಕ್ಕೆ ಸಾಕ್ಷಿಯಾದ ಪೋಷಕರು ಮುದ್ದು ಮಕ್ಕಳ ಶಿಕ್ಷಣದ ಪಯಣಕ್ಕೆ ಶುಭ ಹಾರೈಸಿದರು.

ಕಾರ್ಯಕ್ರಮದ ಸಂಪೂರ್ಣ ಜವಾಬ್ದಾರಿಯನ್ನು ಹೊತ್ತು ಯಶಸ್ವಿಯಾಗಿ ನಡೆಸಿಕೊಟ್ಟ ರಶ್ಮಿ ನಿರಂಜನ್ ಅವರು, ಗುರುಪೂರ್ಣಿಮೆಯ ಮಹತ್ವ ಹಾಗೂ ಜೀವನದಲ್ಲಿ ಗುರುವಿನ ಸ್ಥಾನದ ಕುರಿತು ಬೆಳಕು ಚೆಲ್ಲಿದರು. ಭಕ್ತಿಯ ವಾತಾವರಣದಲ್ಲಿ ನೆರವೇರಿದ ಈ ಸಮಾರಂಭದ ಕೊನೆಯಲ್ಲಿ ಆಗಮಿಸಿದ್ದ ಎಲ್ಲರಿಗೂ ಪ್ರಸಾದ ವಿತರಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕ ವೃಂದ, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಪೋಷಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಗುರುಪೂರ್ಣಿಮೆ ಆಚರಣೆಯನ್ನು ಯಶಸ್ವಿಗೊಳಿಸಿದರು.

## ಬೀದಿಬದಿ ವ್ಯಾಪಾರಿಗಳಿಗೆ ತಳ್ಳುವ ಗಾಡಿಯಲ್ಲಿ ಮಾರಾಟ ಮಾಡಲು ಮಾತ್ರ ಅವಕಾಶ



ವಿಜಯಪುರ

ಪಟ್ಟಣದ ಹಳೇ ನಾಡಕಚೇರಿಯ ಮುಂಭಾಗದಲ್ಲಿ ರಸ್ತೆಗೆ ಅಡ್ಡಲಾಗಿ ಇಟ್ಟಿದ್ದ ಹಣ್ಣು ಮತ್ತು ತರಕಾರಿ ಅಂಗಡಿಗಳನ್ನು ತೆರವುಗೊಳಿಸಿದ್ದ ಪುರಸಭೆಯವರು, ಇದೇ ರಸ್ತೆಯಲ್ಲಿ, ತಳ್ಳುವ ಗಾಡಿಗಳಲ್ಲಿ ಹಣ್ಣು ತರಕಾರಿಗಳನ್ನು ಮಾರಾಟ ಮಾಡಿಕೊಳ್ಳಲು ಅವಕಾಶ ಮಾಡಿಕೊಟ್ಟಿದ್ದಾರೆ.

ರಸ್ತೆಯಲ್ಲಿ ಹೆಚ್ಚು ಟ್ರಾಫಿಕ್ ಸಮಸ್ಯೆಯಾಗಿದ್ದರಿಂದ ಅಂಗಡಿಗಳನ್ನು ತೆರವುಗೊಳಿಸಲಾಗಿತ್ತು. ಈ ವೇಳೆ ಬೀದಿಬದಿಗಳಿಗೆ ಸಂತೆ ಮೈದಾನದಲ್ಲಿ ವ್ಯಾಪಾರ ವಹಿವಾಟು ಮಾಡಿಕೊಳ್ಳಲು ಅವಕಾಶ ಮಾಡಿಕೊಡುವುದಾಗಿ ಪುರಸಭೆ ಅಧಿಕಾರಿಗಳು ಹೇಳಿದ್ದರು. ಇದಕ್ಕೆ ಒಪ್ಪದ ವ್ಯಾಪಾರಿಗಳು, ಈಗ ತೆರವುಗೊಳಿಸಿರುವ ಜಾಗದಲ್ಲೆ ಅಂಗಡಿಗಳನ್ನು ಇಟ್ಟುಕೊಂಡು ವ್ಯಾಪಾರ ಮಾಡಿಕೊಳ್ಳಲು ಅವಕಾಶ ಮಾಡಿಕೊಡುವಂತೆ ಮನವಿ ಮಾಡಿದ್ದರು.

ಪುರಸಭೆ ಅಧ್ಯಕ್ಷೆ ಎಸ್.ಭವ್ಯಾಮಹೇಶ್, ಮುಖ್ಯಾಧಿಕಾರಿ ವೈ.ಎನ್.ಸತ್ಯನಾರಾಯಣ, ಸದಸ್ಯ ವಿ.ನಂದಕುಮಾರ್ ಅವರು, ಬೀದಿಬದಿ ವ್ಯಾಪಾರಿಗಳೊಂದಿಗೆ ಸಮಾಲೋಚನೆ ನಡೆಸಿ, ಟ್ರಾಫಿಕ್ ಸಮಸ್ಯೆಯಾಗದಂತೆ ಪುರಸಭೆಯಿಂದ ಸೂಚಿಸುವಂತಹ ನಿಗದಿ ಜಾಗದಲ್ಲಿ ಮಾತ್ರವೇ ತಳ್ಳುವ ಬಂಡಿಗಳಲ್ಲಿ ಹಣ್ಣು ತರಕಾರಿ ವ್ಯಾಪಾರ ಮಾಡಿಕೊಳ್ಳಬೇಕು. ಒಂದು ವೇಳೆ ನಿಗದಿತ ಜಾಗವನ್ನು ಬಿಟ್ಟು ಹೊರಗೆ ಬಂದರೆ ಅಂಗಡಿಗಳನ್ನು ಪೂರ್ತಿ ತೆರವುಗೊಳಿಸುವುದಾಗಿ ಹೇಳಿ ಅವಕಾಶ ಮಾಡಿಕೊಟ್ಟಿದ್ದಾರೆ.

ಪುರಸಭೆ ಅಧ್ಯಕ್ಷೆ ಎಸ್.ಭವ್ಯಾಮಹೇಶ್ ಮಾತನಾಡಿ, ಬೀದಿಬದಿಗಳು ಎರಡು ದಿನಗಳಿಂದ ವ್ಯಾಪಾರ ವಹಿವಾಟುಗಳಿಲ್ಲದೆ ಸಂಕಷ್ಟಕ್ಕೆ ಸಿಲುಕಿದ್ದಾರೆ. ಅವರ ಹಿತವನ್ನು ಕಾಪಾಡುವುದು ಸಹಾ ನಮ್ಮ ಜವಾಬ್ದಾರಿಯಾಗಿದೆ. ಟ್ರಾಫಿಕ್ ಸಮಸ್ಯೆಯನ್ನೂ ನಿವಾರಣೆ ಮಾಡಬೇಕಿದೆ ಆದ್ದರಿಂದ ವಾಹನ ಸವಾರರಿಗೂ ತೊಂದರೆಯಾಗದಂತೆ, ಪಟ್ಟಣದಲ್ಲಿ ಪ್ರಮುಖ ರಸ್ತೆಗಳಲ್ಲಿರುವ ಅಂಗಡಿಗಳನ್ನು ತೆರವುಗೊಳಿಸಿ, ತಳ್ಳುವ ಗಾಡಿಗಳಲ್ಲಿ ವ್ಯಾಪಾರ ವಹಿವಾಟು ನಡೆಸಿಕೊಳ್ಳಲು ಅವಕಾಶ ಮಾಡಿಕೊಡಲಾಗಿದೆ ಎಂದರು.

## 'ಸಾಮಾನ್ಯ ಜ್ಞಾನ ಹೆಚ್ಚಲು ರಸಪ್ರಶ್ನೆ ಸ್ಪರ್ಧೆಗಳು ಸಹಕಾರಿ'



ತುಮಕೂರು

ಮಕ್ಕಳಲ್ಲಿ ಸಾಮಾನ್ಯ ಜ್ಞಾನ ಹೆಚ್ಚಿಸಲು ರಸಪ್ರಶ್ನೆ ಸ್ಪರ್ಧೆಗಳು ಸಹಕಾರಿ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉನಿರ್ದೇಶಕರು ಹಾಗೂ ಜಿಲ್ಲಾ ಬಾಲಭವನ ಸಮಿತಿ ಕಾರ್ಯದರ್ಶಿ ಡಾ: ಎಸ್. ಸಿದ್ದರಾಮಣ್ಣ ತಿಳಿಸಿದರು.

ರಾಜ್ಯ ಬಾಲಭವನ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲಭವನ ಸಮಿತಿ ಸಹಭಾಗಿತ್ವದಲ್ಲಿ ನಗರದ ಬಾಲಭವನದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ರಸಪ್ರಶ್ನೆ ಸ್ಪರ್ಧೆಗಳಲ್ಲಿ ಭಾಗವಹಿಸುವುದರಿಂದ ಮಕ್ಕಳ ಜ್ಞಾಪಕ ಶಕ್ತಿ ಚುರುಕಾಗುವುದರೊಂದಿಗೆ ಆತ್ಮ ವಿಶ್ವಾಸ ವೃದ್ಧಿಯಾಗುತ್ತದೆ. ಅಲ್ಲದೆ ವಿದ್ಯಾರ್ಥಿಗಳಲ್ಲಿ ಕಲಿಕಾ ಶಕ್ತಿಯನ್ನು ಮೂಡಿಸಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ತಾಲ್ಲೂಕು ಮಟ್ಟದ ರಸಪ್ರಶ್ನೆ ಸ್ಪರ್ಧೆಯಲ್ಲಿ ಕಿರಿಯ/ಹಿರಿಯ ಪ್ರಾಥಮಿಕ ಪಾಠಶಾಲೆ ಮತ್ತು ಪ್ರೌಢಶಾಲೆ ವಿಭಾಗದಿಂದ ಭಾಗವಹಿಸಿ ಪ್ರಥಮ ಬಹುಮಾನ ಗಳಿಸಿದ ತಂಡದ ಮಕ್ಕಳಿಗಾಗಿ ಈ ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆಯನ್ನು ಆಯೋಜಿಸಲಾಗಿದ್ದು, ರಸಪ್ರಶ್ನೆ ಸ್ಪರ್ಧೆಯಲ್ಲಿ ತಕ್ಷಣ ಉತ್ತರಿಸುವ ಮೂಲಕ ಮೆದುಳಿನ ಸಾಮರ್ಥ್ಯ ಮತ್ತು ಗ್ರಹಿಕೆ ಹೆಚ್ಚಾಗುತ್ತದೆ. ಮಕ್ಕಳಲ್ಲಿ ಕಡಿಮೆ ಸಮಯದಲ್ಲಿ ಸರಿಯಾದ ನಿರ್ಧಾರ ತೆಗೆದುಕೊಳ್ಳುವ ವೇಗ ಬೆಳೆಯುತ್ತದೆ. ಮಕ್ಕಳು ಇಂತಹ ಸ್ಪರ್ಧೆಗಳಲ್ಲಿ ಭಾಗವಹಿಸುವಿಕೆ ಬಹಳ ಮುಖ್ಯ ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಅಂಬಿಕಾ ಮಾತನಾಡಿ, ಆಧುನಿಕ ಜಗತ್ತಿನಲ್ಲಿ ಶಿಕ್ಷಣದ ಜೊತೆ ಸ್ಪರ್ಧಾತ್ಮಕ ಜ್ಞಾನ ಮುಖ್ಯವಾಗಿದೆ. ಮಕ್ಕಳಲ್ಲಿರುವ ಪ್ರತಿಭೆ ಉತ್ತಮ ಭವಿಷ್ಯಕ್ಕೆ ಸಹಕಾರಿಯಾಗಲಿದ್ದು, ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಹೊರತರಲು ಜಿಲ್ಲಾ ಬಾಲಭವನದಲ್ಲಿ ಈ ವೇದಿಕೆಯನ್ನು ಕಲ್ಪಿಸಲಾಗಿದೆ. ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶವನ್ನು ಮಾಡಿಕೊಡುವುದು ಪೋಷಕರ ಜವಬ್ದಾರಿಯಾಗಿರುತ್ತದೆ ಎಂದ ಅವರು, ಜಿಲ್ಲಾ ಬಾಲಭವನ ವತಿಯಿಂದ ಮುಂದಿನ ಪ್ರತಿ ಮಾಹೆಗಳಲ್ಲಿ ಕಾರ್ಯಕ್ರಮಗಳು ಆಯೋಜನೆಯಾಗುತ್ತಿದ್ದು, ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ರಸಪ್ರಶ್ನೆ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾಗಿ ಪ್ರಥಮ, ದ್ವಿತೀಯ, ತೃತೀಯ ಮತ್ತು ಸಮಾಧಾನಕರ ಸ್ಥಾನಗಳನ್ನು ಪಡೆದ ಮಕ್ಕಳಿಗೆ ಬಹುಮಾನ, ಪ್ರಮಾಣ ಪತ್ರ ಹಾಗೂ ಭಾಗವಹಿಸಿದ ಎಲ್ಲಾ ಮಕ್ಕಳಿಗೂ ಪ್ರಶಂಸನಾ ಪತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಬಾಲಭವನ ಸಮಿತಿ ವ್ಯವಸ್ಥಾಪಕ ಚಿದಾನಂದ ಮೂರ್ತಿ, ಸ್ಪರ್ಧಾ ತೀರ್ಪುಗಾರರಾದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ರವೀಶ್ ಹಾಗೂ ಹನುಮಂತರಾಜು, ಮಮತ ಪಿ., ಕಾರ್ಯಕ್ರಮ ಸಹಾಯಕಿ ಶಿಲ್ಪ ಜಿ.ಎಸ್, ಹಾಗೂ ವಿವಿಧ ಶಾಲೆಯ ಮಕ್ಕಳು, ಶಿಕ್ಷಕರು, ಮೇಲ್ವಿಚಾರಕರು, ಪೋಷಕರು ಉಪಸ್ಥಿತರಿದ್ದರು.

## ಕಿವಿಯ ಶ್ರವಣ ತಪಾಸಣೆ

ತಿಪಟೂರು

ಮನುಷ್ಯನ ದೇಹದ ಆರೋಗ್ಯಕ್ಕೆ ಪಂಚೇಂದ್ರಿಯಗಳ ಚಲನವಲನ ಬಹು ಮುಖ್ಯ. ಸಾಮಾನ್ಯವಾಗಿ ಪ್ರತಿಯೊಬ್ಬರು ನೇತ್ರ ಪರೀಕ್ಷೆ ಮಾಡಿಸಿದಂತೆ ಶ್ರವಣ ಪರೀಕ್ಷೆಯನ್ನು ಮಾಡಿಸಬೇಕು ಇಂತಹ ಸಮಾಜಮುಖಿ ಸೇವೆಯ

ಕಾರ್ಯಕ್ರಮ ಹಮ್ಮಿಕೊಂಡಿರುವ ಕಾರ್ಯ ಅತ್ಯುತ್ತಮವಾಗಿದೆ ಎಂದು ನಿವೃತ್ತ ನೌಕರರ ಸಂಘದ ಅಧ್ಯಕ್ಷ ಕೆ.ಎಂ. ರಾಜಣ್ಣ ತಿಳಿಸಿದರು. ನಗರದ ರೋಟರಿ ಭವನದಲ್ಲಿ ತಾ.ಕಾರ್ಯನಿರತ ಪತ್ರಕರ್ತರ ಸಂಘ, ಟೀಮ್ ಈಶ್ವರ್ ಮಲ್ಪೆ ಹಾಗೂ ರೋಟರಿ ಕ್ಲಬ್ ಸಹಯೋಗದಲ್ಲಿ ಆಯೋಜಿಸಿದ್ದ ಉಚಿತ ಕಿವಿಯ ಶ್ರವಣ ತಪಾಸಣೆ ಮತ್ತು ಶ್ರವಣ ಯಂತ್ರಕ್ಕೆ ಸಹಾಯಧನ ಕಾರ್ಯಕ್ರಮ ಹಾಗೂ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಆರೋಗ್ಯವಂತ ಜೀವನಕ್ಕೆ ಪಂಚೇಂದ್ರಿಯಗಳ ಕೊಡುಗೆ ಅಪಾರವಾಗಿದೆ. ಕಣ್ಣಿನ ದೋಷ ತಕ್ಷಣ ಪರಿಹರಿಸಿಕೊಳ್ಳುವ ನಾವು ಶ್ರವಣದೋಷಕ್ಕೂ ಆದ್ಯತೆ ಕೊಡಬೇಕು. ಇಂತಹ ಉಚಿತ ತಪಾಸಣಾ ಕಾರ್ಯಕ್ರಮ ಆಯೋಜಿಸಿದ್ದು ಶ್ಲಾಘನೀಯ ಎಂದು ತಿಳಿಸಿದರು.

ಶ್ರವಣ ತಜ್ಞ ಡಾ.ಪವನ್ ಮಾತನಾಡಿ, ಕಣ್ಣಿಗೆ ಸಮನಾಗಿ ಕಿವಿಯಲ್ಲಿ 5 ನರ ಮಂಡಲಗಳು ರಚನೆಯಾಗಿರುತ್ತವೆ.ದೇಹಕ್ಕೆ ಅವುಗಳಲ್ಲಿ ಕಿವಿಯ ಮಧ್ಯ ಭಾಗದ ತೊಂದರೆಯ ನಂತರದ ಶಸ್ತ್ರಚಿಕಿತ್ಸೆ ಅವಶ್ಯಕವಾಗಿರುತ್ತದೆ. ಇಂತಹ ತೊಂದರೆಗಳು, ಮದುವೆಯಾದಾಗ ಕಂಡು ಬರುತ್ತವೆ. ಹುಟ್ಟುವ ಮಕ್ಕಳಲ್ಲಿ ನಿಧಾನವಾಗಿ ಮಾತು ಬರುವುದು ಕಂಡು ಬರುತ್ತದೆ. ತಕ್ಷಣದಲ್ಲಿ ತಜ್ಞ ವೈದ್ಯರನ್ನು ಕಂಡು ಪರೀಕ್ಷಿಸಿಕೊಳ್ಳಬೇಕು. ಇತ್ತೀಚೆಗೆ ಶ್ರವಣದೋಷಕ್ಕೆ ಡಿಜಿಟಲ್ ಉಪಕರಣ ಉತ್ತಮವಾಗಿದೆ. ಆನ್ ಲೈನ್ ನಲ್ಲಿ ಮಾರಾಟವಾಗುವ ಯಂತ್ರಗಳನ್ನು ಪಡೆದು ಕೊಳ್ಳಬೇಡಿ. ತಜ್ಞರ ಸಲಹೆಯಂತೆ ವೈದ್ಯರು ನೀಡುವ ಉಪಕರಣವನ್ನು ಉಪಯೋಗಿಸಬೇಕು ಎಂದು ಕಿವಿಮಾತು ತಿಳಿಸಿದರು.

ಕಸಾಪ ಅಧ್ಯಕ್ಷ ಬಸವರಾಜಪ್ಪ, ಕೆಯುಡಬ್ಲ್ಯೂ ಜೆ ಅಧ್ಯಕ್ಷ ದಯಾನಂದ್, ಕಾರ್ಯದರ್ಶಿ ಸಿದ್ದೇಶ್, ರೋಟರಿ ಅಧ್ಯಕ್ಷ ಪ್ರಕಾಶ್ ಕಸಾಪ ಕಾರ್ಯದರ್ಶಿ ಮಂಜಪ್ಪ ಸೇರಿದಂತೆ ಕಾರ್ಯನಿರತ ಪತ್ರಕರ್ತರು, ಟೀಮ್ ಈಶ್ವರ್ ಮಲ್ಪೆ ಮತ್ತು ರೋಟರಿ ಪದಾಧಿಕಾರಿಗಳು ಹಾಗೂಶಿಬಿರಾರ್ಥಿಗಳು ಹಾಜರಿದ್ದರು.

## ಜನಪದ ನಮ್ಮ ಬದುಕಿನ ಸಂವೇದನೆಗಳ ಪ್ರತಿಬಿಂಬ



ದೊಡ್ಡಬಳ್ಳಾಪುರ

ಮಧುರೆ ಹೋಬಳಿ ಕನಸವಾಡಿ ಗ್ರಾಮದ ಹೊಂಗಿರಣ ಸಮಾನ ಮನಸ್ಕರ ಸಂಘದ ವತಿಯಿಂದ 18ನೇ ವಾರ್ಷಿಕೋತ್ಸವ, ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಗಣ್ಯರಿಗೆ ಸನ್ಮಾನ ಸಮಾರಂಭ ಕನಸವಾಡಿಯ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ನಡೆಯಿತು.

ಚಲನಚಿತ್ರ ಹಾಸ್ಯ ನಟರಾದ ಎಂ.ಎನ್. ಸುರೇಶ್ (ಮೂಗು ಸುರೇಶ್) ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಶಿಕ್ಷಣದಿಂದ ದೇಶದ ಪ್ರಗತಿ ಸಾಧ್ಯವಿದ್ದು, ಸಮುದಾಯದಿಂದ ಶಿಕ್ಷಣಕ್ಕೆ ಉತ್ತೇಜನ ನೀಡುವುದು ಸಹ ಮುಖ್ಯವಾಗಿದೆ. ಈ ದಿಸೆಯಲ್ಲಿ ಸಂಘಟನೆಗಳು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡುವ ಮೂಲಕ ಅವರನ್ನು ಪ್ರೋತ್ಸಾಹಿಸುತ್ತಿರುವುದು ಅಭಿನಂದನೀಯ ಎಂದರು.

ಸಾಹಿತಿ ಎಸ್.ರಾಮಲಿಂಗೇಶ್ವರ (ಸಿಸಿರಾ) ಮಾತನಾಡಿ, ಜನವಾಣಿ ಬೇರು ಕವಿವಾಣಿ ಹೂ ಎಂಬಂತೆ ಜನಪದ ನಮ್ಮ ಬದುಕಿನ ಸಂವೇದನೆಗಳ ಪ್ರತಿಬಿಂಬವಾಗಿದೆ. ಯಾಂತ್ರಿಕ ಬದುಕು, ಹಣಕ್ಕೆ ಪ್ರಾಮುಖ್ಯತೆ ನಿಡುವ ನಗರ ಜೀವನಕ್ಕಿಂತ ಉತ್ತಮ ಪರಿಸರದ ಜನರೊಂದಿಗೆ ಬಾಳುವ ಗ್ರಾಮೀಣರ ಬದುಕೇ ಚೆಂದ ಎಂದು ತಿಳಿಸಿದರು.

ಅಧ್ಯಕ್ಷತೆಯನ್ನು ಹೊಂಗಿರಣ ಸಮಾನ ಮನಸ್ಕರ ಸಂಘದ ಅಧ್ಯಕ್ಷ ಜಿ. ಪಾಂಡುರಂಗ ವಹಿಸಿದ್ದರು.

ಶಿಕ್ಷಣ ವಿಭಾಗದಲ್ಲಿ ಡಿಡಿಪಿಐ ಪಿ. ಬೈಲಾಂಜಿನಪ್ಪ ಕಲಾವಿದ ಕೆ.ಎಸ್ ಮುನಿರಾಜ, ಕೃಷಿಕ ಟಿ.ಸಿ.ಸಿದ್ಧರಾಜು, ಯೋಧ ಎಂ. ತಿಮ್ಮೇಗೌಡ, ಸಮಾಜ ಸೇವಕ ಹನುಮೇಗೌಡ, ಯುವ ಪ್ರತಿಭೆ ಎನ್ ಶ್ರೀನಿವಾಸ ಅವರನ್ನು ಸನ್ಮಾನಿಸಲಾಯಿತು.

ಮಧುರೆ ಹೋಬಳಿ ಮಟ್ಟದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ವಿಭಾಗದಲ್ಲಿ ಅತ್ಯಧಿಕ ಅಂಕ ಗಳಿಸಿದ 10 ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಮೂಲಕ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಪ್ರಯುಕ್ತ, ಕಾಲೇಜ್, ಪ್ರೌಢಶಾಲೆ, ಪ್ರಾಥಮಿಕ ಶಾಲಾ ಮಟ್ಟದಲ್ಲಿ ರಸಪ್ರಶ್ನೆ ಕಾರ್ಯಕ್ರಮ, ಹಾಗೂ ರಂಗಗೀತೆ ಕಾರ್ಯಕ್ರಮವನ್ನು ಆಯೋಜಿಸಿ ವಿಜೇತರಿಗೆ ಬಹುಮಾನ ನೀಡಲಾಯಿತು.

ಕಾರ್ಯಕ್ರಮದಲ್ಲಿ ಶನಿಮಹಾತ್ಮ ದೇವಸ್ಥಾನ ಕಾರ್ಯಕಾರಿ ಸಮಿತಿ ಅಧ್ಯಕ್ಷ ಜಿ.ರಾಜಕುಮಾರ್, ಬೈರಮಂಗಲ ರಾಮೇಗೌಡ, ಪ್ರಾಂಶುಪಾಲರು ಗದಿಗೆಪ್ಪ ಬ ಹೊಸಮನ, ಸಂಘದ ಗೌರವಾಧ್ಯಕ್ಷ ಜಿ. ಹನುಮಂತರಾಯಪ್ಪ, ಉಪಾಧ್ಯಕ್ಷ ಜಿ.ಎನ್. ಮಾರೇಗೌಡ, ಕಾರ್ಯದರ್ಶಿ ಹೆಚ್ ವಿ ಆನಂದ್, ಖಜಾಂಚಿ ಆರ್.ಮಹೇಶ್, ಸಂಘಟನಾ ಕಾರ್ಯದರ್ಶಿ ರವಿಚಂದ್ರ, ಕಾನೂನು ಸಲಹೆಗಾರರಾದ ಸಿ.ಗೋವಿಂದರಾಜು, ನಿರ್ದೇಶಕರುಗಳಾದ ಟಿ.ಸಿ.ವೆಂಕಟಾಚಲಪತಿ, ಎಂ.ಆರ್.ಮುನಿರಾಜು, ಕಾಂತ ರಾಜ್, ಎಸ್.ಎನ್.ದೇವರಾಜು, ಬೀರೇಶ್, ಎನ್ ಶ್ರೀನಿವಾಸ, ಗಂಗ ಬೈಲಪ್ಪ, ಹಾಜರಿದ್ದರು.

## ಸ್ವಯಂ ಪ್ರೇರಿತ ರಕ್ತದಾನ ಶಿಬಿರ

ಕನಕಪುರ

ಕಾರ್ಗಿಲ್ ವಿಜಯ್ ದಿವಸ್ ಅಂಗವಾಗಿ ನಮ್ಮ ಹೆಮ್ಮೆಯ ಸೈನಿಕರ ಗೌರವಾರ್ಥ ರೋಟರಿ ಕನಕಪುರ ಹಾಗೂ ಪತಂಜಲಿ ಯೋಗ ಸಮಿತಿ ಸಹಯೋಗದಲ್ಲಿ ಏರ್ಪಡಿಸಿದ್ದ ಸ್ವಯಂ ಪ್ರೇರಿತ ರಕ್ತದಾನ ಶಿಬಿರದಲ್ಲಿ ನೂರಾರು ಯುವಕರು, ಯುವತಿಯರು, ಸಾರ್ವಜನಿಕರು ಉತ್ಸಾಹದಿಂದ ಪಾಲ್ಗೊಂಡು ರಕ್ತದಾನ ಮಾಡಿದರು.

ನಗರದ ರೋಟರಿ ಭವನದಲ್ಲಿ ಕಾರ್ಗಿಲ್ ವೀರ ಯೋಧರ ಗೌರವಾರ್ಥವಾಗಿ ಆಯೋಜಿಸಿದ್ದ ಸ್ವಯಂ ಪ್ರೇರಿತವಾದ ರಕ್ತದಾನ ಶಿಬಿರಕ್ಕೆ ಅತ್ತಿಹಳ್ಳಿ ಮಠದ ಪೂಜ್ಯ ನಿರಂಜನ ಸ್ವಾಮೀಜಿ ಭಾರತಮಾತೆಯ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಚಾಲನೆಯನ್ನು ನೀಡಿ ಮಾತನಾಡಿ ಮನುಷ್ಯನ ಬದುಕಿಗೆ ಬಹಳ ಅಗತ್ಯ ಹಾಗೂ ಅಮೂಲ್ಯ ವಾಗಿರುವ ಮದ್ದು ರಕ್ತವಾಗಿದ್ದು ಒಬ್ಬ ಆರೋಗ್ಯವಂತ ವ್ಯಕ್ತಿಯ ರಕ್ತ ಮತ್ತೊಬ್ಬ ರೋಗಿಯ ಜೀವ ಮತ್ತು ಜೀವನ ವನ್ನು ಉಳಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ, ಗಡಿಯಲ್ಲಿ ಚಳಿ, ಗಾಳಿ, ಹಿಮ, ಮಳೆಯನ್ನು ಲೆಕ್ಕಿಸದೆ ದೇಶದ ಗಡಿಯಲ್ಲಿ ತಮ್ಮ ಪ್ರಾಣವನ್ನ ಅರ್ಪಿಸಿದ ವೀರ ಯೋಧರ ಗೌರವಾರ್ಥ ರಕ್ತದಾನ ಶಿಬಿರವನ್ನು ಆಯೋಜಿಸಿರುವುದು ಉತ್ತಮ ಕಾರ್ಯವಾಗಿದ್ದು ನಮ್ಮಯುವಕರು ವರ್ಷಕ್ಕೆ ಕನಿಷ್ಠ ಎರಡು ಬಾರಿ ರಕ್ತದಾನ ಮಾಡುವ ಮೂಲಕ ಸಮಾಜ ಸೇವೆಯಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವಂತೆ ತಿಳಿಸಿದರು.

ಪತಂಜಲಿ ಯೋಗ ಸಮಿತಿಯ ಬಾಲಕೃಷ್ಣ ಆರ್ಯ ಮಾತನಾಡಿ ತಾಲ್ಲೂಕಿನ ಯುವಕ– ಯುವತಿಯರು ಹಾಗೂ ಸಾರ್ವಜನಿಕರು, ರಕ್ತ ದಾನಿಗಳು ಹೆಚ್ಚಿನ ಸಂಖ್ಯೆ ಯಲ್ಲಿ ಶಿಬಿರಕ್ಕೆ ಆಗಮಿಸಿ ಸ್ವಯಂ ಪ್ರೇರಿತ ರಕ್ತದಾನ ಮಾಡುವ ಮೂಲಕ ನಮ್ಮ ಹೆಮ್ಮೆಯ ವೀರ ಸೈನಿಕರಿಗೆ ತಮ್ಮ ಶ್ರದ್ಧೆಯ ನಮನವನ್ನು ಸಲ್ಲಿಸಿದ್ದಕ್ಕಾಗಿ ಎಲ್ಲರಿಗೂ ಧನ್ಯವಾದಗಳನ್ನು ಅರ್ಪಿಸಿದರು.

ಬೆಂಗಳೂರಿನ ರಾಷ್ಟ್ರೋತ್ಥಾನ ಪರಿಷತ್ ನ ರಕ್ತನಿಧಿ ಕೇಂದ್ರದ ಸಹಯೋಗದೊಂದಿಗೆ ಬೆಳಿಗ್ಗೆ 9 ಗಂಟೆಯಿಂದ ಆರಂಭವಾಗಿ ಸಂಜೆ 5 ಗಂಟೆಯವರೆಗೂ ನಡೆದ ರಕ್ತದಾನ ಶಿಬಿರದಲ್ಲಿ ಸುಮಾರು 182 ಯೂನಿಟ್ ರಕ್ತ ವನ್ನು ಸಂಗ್ರಹಿಸಲಾಯಿತು.

ರೋಟರಿ ಟ್ರಸ್ಟ್ ಖಜಾಂಚಿ ಭಾನುಪ್ರಕಾಶ್, ಕನಕಪುರ ರೋಟರಿ ಅಧ್ಯಕ್ಷ ಕಾಂತರಾಜು, ರಂಜನ್, ಸದಸ್ಯ ರಾಮಚಂದ್ರು, ಸುರೇಂದ್ರ, ಚಂದ್ರು, ಚಂದ್ರಪ್ರಭಾ, ವೆಂಕಟೇಶ್, ದೇಸಯ್ಯ, ಸಿದ್ಧರಾಜು, ಪ್ರದ್ಯುಮ್ನ ಆರ್ಯ, ಅಂಕಿತಾ ಪ್ರದ್ಯುಮ್ನ, ಸುಮಂತ್ ದಂಪತಿ, ಪುಟ್ಟರಾಜು, ಸೇರಿದಂತೆ ರೋಟರಿ ಹಾಗೂ ಪತಂಜಲಿ ಸಮಿತಿಯ ಸದಸ್ಯರು ಈ ವೇಳೆ ಉಪಸ್ಥಿತರಿದ್ದರು.

## ಕೈವಾರ ತಾತಯ್ಯ ಗುರುಗಳ ತಪಃಶಕ್ತಿಯಿಂದ ಸನ್ಮಾರ್ಗ ಸಾಧ್ಯ: ಶಾಸಕಿ



ಕೆಜಿಎಫ್

ಮಾನವನ ಜೀವನದಲ್ಲಿ ಮುಕ್ತಿ ಮತ್ತು ಶಕ್ತಿ ಮಾರ್ಗವನ್ನು ತಲುಪಲು ಗುರುಗಳ ಜ್ಞಾನಶಕ್ತಿ, ತಪಃಶಕ್ತಿ ಹಾಗೂ ದೈವಶಕ್ತಿ ಅತ್ಯಗತ್ಯ. ಕೈವಾರ ತಾತಯ್ಯ ಹಾಗೂ ಶಿರಡಿ ಸಾಯಿಬಾಬಾರಂತಹ ಮಹಾನ್ ಗುರುಗಳನ್ನು ನಾವು ವರ್ಷಗಳಿಂದ ಗುರುಸ್ಥಾನದಲ್ಲಿಟ್ಟು ಪೂಜಿಸುತ್ತಾ ಬಂದಿದ್ದೇವೆ ಎಂದು ಕೆಜಿಎಫ್ ಕ್ಷೇತ್ರದ ಶಾಸಕಿ ರೂಪಕಲಾ ಶಶಿಧರ್ ತಿಳಿಸಿದರು.

ಎನ್.ಜಿ. ಹುಲೂರು ಗ್ರಾಪಂ ವ್ಯಾಪ್ತಿಯ ವಿ.ಕೋಟಿ ರಸ್ತೆಯ ಎಪಿಎಂಸಿ ಮಾರುಕಟ್ಟೆ ಅವರಣದಲ್ಲಿ ಶ್ರೀ ಸದ್ಗುರು ನಾರಾಯಣ ಯತೀಂದ್ರ ದೇವಸ್ಥಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ಗುರುಗಳು ತೋರಿದ ದಾರಿಯಲ್ಲಿ ನಡೆಯುವ ಭಕ್ತರಿಗೆ ಎಂದಿಗೂ ಸೋಲಿಲ್ಲ. ತಪಸ್ಸು, ಜ್ಞಾನ ಮತ್ತು ಭಕ್ತಿ ಮಾರ್ಗಗಳ ಮೂಲಕ ಗುರುಗಳು ತಮ್ಮ ಭಕ್ತರನ್ನು ದೇವರಿಗೆ ಹತ್ತಿರ ಮಾಡುತ್ತಾರೆ. ಈ ಕ್ಷೇತ್ರದಲ್ಲಿ ರೈತರು ಹಾಗೂ ಸ್ಥಳೀಯ ಮುಖಂಡರು ಅತ್ಯಂತ ಶ್ರದ್ಧೆ–ಭಕ್ತಿಯಿಂದ ದೇವತಾ ಸೇವೆ ಮತ್ತು ಧಾರ್ಮಿಕ ಕಾರ್ಯಗಳನ್ನು ಕೈಗೊಳ್ಳುತ್ತಿದ್ದಾರೆ.

ಮಾನವನ ಜನ್ಮದಲ್ಲಿ ಗುರುಗಳ ಸ್ಥಾನ ಅತ್ಯುನ್ನತವಾದುದು. ಬಾಲ್ಯದಿಂದಲೇ ತಾಯಿ, ತಂದೆ ಮತ್ತು ಶಿಕ್ಷಕರ ರೂಪದಲ್ಲಿ ಗುರುಗಳು ನಮಗೆ ದಾರಿದೀಪವಾಗುತ್ತಾರೆ. ಅವರ ಮಾರ್ಗದರ್ಶನ ಹಾಗೂ ಆಶೀರ್ವಾದವನ್ನು ಪಡೆದು ಜೀವನ ನಡೆಸಿದರೆ ಪ್ರತಿಯೊಬ್ಬರೂ ತಮ್ಮ ಗುರಿಯನ್ನು ಸುಲಭವಾಗಿ ತಲುಪಬಹುದು ಎಂದು ಕೋಟಿಲಿಂಗೇಶ್ವರ ದೇವಸ್ಥಾನದ ಆಡಳಿತಾಧಿಕಾರಿ ಕೆ.ವಿ. ಕುಮಾರಿ ಹೇಳಿದರು.

ಶ್ರೀ ಸದ್ಗುರು ನಾರಾಯಣ ಯತೀಂದ್ರ ಸ್ವಾಮೀಜಿ, ಶಿರಡಿ ಸಾಯಿನಾಥರು, ರಾಘವೇಂದ್ರ ಸ್ವಾಮಿಗಳು ಹಾಗೂ ಎಲ್ಲಾ ಸದ್ಗುರುಗಳ ಚರಣಗಳಿಗೆ ನಮಸ್ಕರಿಸಿದ ಅವರು, ಕ್ಷೇತ್ರದ ಶಾಸಕರಾದ ಶ್ರೀಮತಿ ರೂಪಕಲಾ ಶಶಿಧರ್ ಅವರ ಮುಖಂಡತ್ವ ಹಾಗೂ ಕೃಪೆಯಿಂದ ಈ ಕ್ಷೇತ್ರದಲ್ಲಿ ಮಹತ್ತರ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ ಎಂದರು.

ಶಾಸಕಿ ಎಂ.ರೂಪಕಲಾ, ಮಾಜಿ ಶಾಸಕ ವೈ ಸಂಪಂಗಿ, ಸಮಾಜ ಸೇವಕ ವಿ.ಮೋಹನ್ ಕೃಷ್ಣ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ವೆಂಕಟಾಚಲಪತಿ, ಸುನೀಲ್ ಕುಮಾರ್,ಗ್ಯಾರಂಟಿ ಸಮಿತಿ ಅಧ್ಯಕ್ಷ ರಾಧಾಕೃಷ್ಣ ರೆಡ್ಡಿ, ಎಪಿಎಂಸಿ ನಿರ್ದೇಶಕ ಶ್ರೀನಿವಾಸ್ ರೆಡ್ಡಿ, ಯುವ ಮುಖಂಡ ಚಂದ್ರಕಾಂತ್, ಭಾರ್ಗವ್ ರಾಮ್, ದೇಗುಲ ಕಮಿಟಿ ಅಧ್ಯಕ್ಷ ಪೆಂಡಲ್ ನಾರಾಯಣ ಸ್ವಾಮಿ, ಉಪಾಧ್ಯಕ್ಷ ರೇಷನ್ ಸೀನಪ್ಪ, ಪ್ರಧಾನ ಕಾರ್ಯದರ್ಶಿ ಸುಬ್ರಮಣಿ ನಾಯ್ಡು, ಧನುಷ್, ಗೌರವಾಧ್ಯಕ್ಷ ಗೋಪಾಲಪ್ಪ, ಗ್ರಾಪಂ ಮಾಜಿ ಸದಸ್ಯ ನಾರಾಯಣಸ್ವಾಮಿ, ವಿಶ್ವನಾಥ, ಪುರುಷೋತ್ತಮ್, ನಾಗರಾಜ್, ರಾಮಚಂದ್ರಪ್ಪ, ಪಿ.ಎಂ.ಶ್ರೀನಿವಾಸ್, ದೊರಬಾಬು, ಗಿರಿಜಮ್ಮ ಸ್ಥಳೀಯ ಪ್ರಮುಖರು, ಕಮಿಟಿಯ ಸರ್ವ ಸದಸ್ಯರು ಹಾಗೂ ಅಪಾರ ಸಂಖ್ಯೆಯ ಭಕ್ತಾದಿಗಳು ಉಪಸ್ಥಿತರಿದ್ದರು.

# 'ಐತಿಹಾಸಿಕ ಸಂಶೋಧನೆಗೆ ವಿಶ್ವವಿದ್ಯಾಲಯಗಳು ಹೆಚ್ಚು ಒತ್ತು ನೀಡಲಿ'

ತುಮಕೂರು

ಐತಿಹಾಸಿಕ ಮತ್ತು ಚಾರಿತ್ರಿಕ ವಿಷಯಗಳ ಬಗ್ಗೆ ಸಂಶೋಧನೆಗಳು ಕಡಿಮೆ. ಸಾವಿರಾರು ವರ್ಷಗಳ ಹಿಂದೆ ನಡೆದಿರುವ ಕೌತುಕಗಳ ಬಗ್ಗೆ ಮಾಹಿತಿ ಪಡೆಯಲು ಇಂದಿನ ಜನರು ಉತ್ಸುಕರಾಗಿದ್ದಾರೆ. ಆ ನಿಟ್ಟಿನಲ್ಲಿ ವಿಶ್ವವಿದ್ಯಾಲಯಗಳು ಕೆಲಸ ಮಾಡಬೇಕಾಗಿದೆ ಎಂದು ಮಾಜಿ ಸಚಿವರು ಹಾಗೂ ಶಾಸಕರಾದ ಹೆಚ್.ಕೆ.ಪಾಟೀಲ್ ತಿಳಿಸಿದ್ದಾರೆ.

ನಗರದ ಶ್ರೀದೇವಿ ಮೆಡಿಕಲ್ ಕಾಲೇಜು ಸಭಾಂಗಣದಲ್ಲಿ ಗಳಗನಾಥ ಮತ್ತು ನಾ.ಶ್ರೀರಾಜ ಪುರೋಹಿತ ಪ್ರತಿಷ್ಠಾನವತಿಯಿಂದ 2024ನೇ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಪಾಲ್ಗೊಂಡು,ಪ್ರಶಸ್ತಿ ಪ್ರಧಾನ ಮಾಡಿ ಮಾತನಾಡುತಿದ್ದ ಅವರು, ನಾಗಾವಿಯಲ್ಲಿ ಮೊದಲ ಕನ್ನಡ ವಿವಿ ಇತ್ತು. ಇಂದಿಗೂ ಘಟಿಕೋತ್ಸವ ಭವನ ಅಲ್ಲಿದೆ, ನೋಡಬಹುದು. ಇದರ ಬಗ್ಗೆ ಅನೇಕರಿಗೆ ಗೊತ್ತಿಲ್ಲ. ಇಂತಹ ಮಹತ್ವದ ವಿಚಾರಗಳು ಸಂಶೋಧನೆಗಳ ಮೂಲಕ ಜನರ ಗಮನಕ್ಕೆ ಬರಬೇಕಿದೆ. ನಾನು ಪ್ರವಾಸೋದ್ಯಮ ಮತ್ತು ಪುರಾತತ್ವ ಮಂತ್ರಿ ಇದ್ದಾಗ, ಹಸ್ತಪ್ರತಿ ಸಂರಕ್ಷಣಾ ಕಾಯ್ದೆ ಜಾರಿಗೆ ತಂದಿದೆ. ಯಾರ ಮನೆಯಲ್ಲಿಯೇ ಯಾವುದೇ ವಿಚಾರಕ್ಕೆ ಸಂಬಂಧಿಸಿದ ಹಸ್ತ ಪ್ರತಿಗಳಿದ್ದರು ಅವುಗಳನ್ನು ಸಂಗ್ರಹಿಸಿ,ಅದರಲ್ಲಿನ ಸಾರಾಂಶಗಳನ್ನು ಯುವ ಪೀಳಿಗೆಗೆ ಪರಿಚಯಿಸುವ ಕೆಲಸ ಆಗಬೇಕೆಂದರು.



ಗಳಗನಾಥರು ಹಾಗೂ ರಾಜಪುರೋಹಿತರು ತಮ್ಮ ಬದುಕಿಗೆ ಖರ್ಚು ಮಾಡಿದ್ದಕ್ಕಿಂತ ಹೆಚ್ಚು ಹಣವನ್ನು ಸಂಶೋಧನೆಗೆ ಖರ್ಚು ಮಾಡಿದ್ದಾರೆ. ಅಂದು ರಾಜಾಶ್ರಯದ ಕೊರತೆ ಇತ್ತು. ಆದರೆ ಇಂದು ಪರಿಸ್ಥಿತಿ ಬದಲಾಗಿದೆ. ಒಳ್ಳೆಯ ಉದ್ದೇಶವಿದ್ದರೆ ರಾಜಾಶ್ರಯ ದೊರೆಯಲಿದೆ. ಹಾಗಾಗಿ ಗಳಗನಾಥ ಮತ್ತು ನಾ.ಶ್ರೀ. ರಾಜಪುರೋಹಿತ ಪ್ರತಿಷ್ಠಾನ ಸಾಹಿತ್ಯ, ಸಂಶೋಧನೆ ದೃಷ್ಟಿಯಿಂದ ಮತ್ತಷ್ಟು ಬೆಳಕು ಚಲ್ಲಲ್ಲಿ ಎಂಬುದು ನಮ್ಮ ಆಶಯ.ಇಂದಿನ ತಂತ್ರಜ್ಞಾನ ಯುಗದಲ್ಲಿ ಕೃಷಿ ವಿಜ್ಞಾನಿಯಾಗಿರುವ ಡಾ.ಕೆ.ಎನ್.ಗಣೇಶಯ್ಯ ಅವರು ಮೋಡ ಬಿತ್ತನೆಯ ಬಗ್ಗೆ ಜನರಲ್ಲಿರುವ ಗೊಂದಲ ಬಗೆಹರಿಸುವ ನಿಟ್ಟಿನಲ್ಲಿ ನಿಮ್ಮಿಂದ ಲೇಖನಗಳು ಬರಲಿ ಎಂದು ಹೆಚ್.ಕೆ.ಪಾಟೀಲ್ ಮನವಿ ಮಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀದೇವಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಡಾ.ಎಂ.ಆರ್. ಹುಲಿನಾಯ್ಕರ್ ಮಾತನಾಡಿ, ಸಂಶೋಧನೆ ಮತ್ತು ಅಧ್ಯಾತ್ಮದಲ್ಲಿ ಬಹಳ ಹೆಸರು ಮಾಡಿದ್ದ ಗಳಗನಾಥರು ಮತ್ತು ರಾಜಪುರೋಹಿತರ ಪ್ರತಿಷ್ಠಾನದಿಂದ ನೀಡುವ ಪ್ರಶಸ್ತಿ ಪ್ರಧಾನ ಕಾರ್ಯಕ್ರಮಗಳ ನಮ್ಮ ಶಿಕ್ಷಣ ಸಂಸ್ಥೆಯಲ್ಲಿ ನಡೆಯುತ್ತಿರುವುದು ಸಂತೋಷದ ವಿಚಾರವಾಗಿದೆ. ಗಳಗನಾಥರು ಆರಂಭಿಸಿದ ಸದ್ಬೋಧ ಪತ್ರಿಕೆ 110 ವರ್ಷಗಳ ಹಿಂದೆ ಆರಂಭಿಸಿ, ಇಂದಿಗೂ ಮುದ್ರಣಗೊಳ್ಳುತ್ತಿದೆ. ಹಾಗೆಯೇ ರಾಜಪುರೋಹಿತರು ಸಂಶೋಧನೆಯ ಮೂಲಕ ಕರ್ನಾಟಕ ರಾಜಮನೆತನಗಳ ಚರಿತ್ರೆ ಕರ್ನಾಟಕಕ್ಕೆ ಹೊಸ ದಿಕ್ಕು ನೀಡಿವೆ. ಇರ್ವರ ಹೆಸರಿನಲ್ಲಿ ಹಿರಿಯ ಸಂಶೋಧಕರಾದ ಡಾ.ಆರ್.ಶೇಷಾ ಶ್ರಾಸ್ತಿ ಮತ್ತು ಹಿರಿಯ ಕಾದಂಬರಿಕಾರರಾದ ಡಾ.ಕೆ. ಎನ್. ಗಣೇಶಯ್ಯ ಅವರಿಗೆ ಪ್ರಶಸ್ತಿ ನೀಡುತ್ತಿರುವುದು ಸಂತೋಷ ತಂದಿದೆ ಎಂದರು.

ಶ್ರೀದೇವಿ ಶಿಕ್ಷಣ ಸಂಸ್ಥೆ ಗಣಕಪರಿಷತ್ತಿನ ಸಹಯೋಗದಲ್ಲಿ ಒಂದು ಮಹತ್ವದ ಕಾರ್ಯವನ್ನು ಕೈಗೊಂಡಿದೆ.ಕನ್ನಡದ ಸಾಹಿತ್ಯ ಕ್ಷೇತರದಲ್ಲಿರುವ ಎಲ್ಲಾ ಪುಸ್ತಕಗಳನ್ನು ಎಐಗೆ ಅಳವಡಿಸುವ ಕೆಲಸವನ್ನು ಆರಂಭಿಸಲಾಗಿದೆ. ಗೂಗಲ್ ಮತ್ತು ಜಾಟ್ ಟಿಪಿಟಿಯಲ್ಲಿ ಕನ್ನಡದ ಕುರಿತು ಪ್ರಶ್ನೆಗಳಿಗೆ ನಿಖರ ಉತ್ತರ ಪಡೆಯುವ ನಿಟ್ಟಿನಲ್ಲಿ ಪ್ರಜ್ಞಾ ಎಂಬ ಹೊಸ ತಂತ್ರಾಂಶ ಸೃಜಿಸಲು ಸುಮಾರು 50 ಲಕ್ಷ ರೂಗಳ ವೆಚ್ಚದಲ್ಲಿ 20 ಲಕ್ಷ ಪುಸ್ತಕಗಳನ್ನು ಎಐಗೆ ಅಳವಡಿಸಲು ಮುಂದಾಗಿದೆ. ಇದು ವಿದ್ಯಾರ್ಥಿಗಳಿಗೆ ಪ್ರಯೋಗಿಕ ಪರೀಕ್ಷೆಯ ಸಹ ಆಗಲಿದೆ. ಇಡೀ ವಿಶ್ವದಲ್ಲಿಯೇ ಈ ಜಾಲತಾಣ ಉಚಿತವಾಗಿ ದೊರೆಯಲಿದೆ ಎಂದು ಡಾ.ಎಂ.ಆರ್.ಹುಲಿನಾಯ್ಕರ್ ತಿಳಿಸಿದರು. ಗಳಗನಾಥ, ನಾ.ಶ್ರೀರಾಜಪುರೋಹಿತ ಪ್ರತಿಷ್ಠಾನದ 2024ನೇ ಸಾಲಿನ ಪ್ರಶಸ್ತಿಯನ್ನು ಹಿರಿಯ ಸಂಶೋಧಕ ಡಾ.ಆರ್.ಶೇಷಶಾಸ್ತ್ರಿ, ಕೃಷಿಕರು, ಕಾದಂಬರಿಕಾರರಾದ ಡಾ.ಕೆ.ಎನ್. ಗಣೇಶಯ್ಯ ಅವರಿಗೆ ನೀಡಿ ಗೌರವಿಸಲಾಯಿತು. ವೇದಿಕೆಯಲ್ಲಿ ಮಾಜಿ ಸಂಸದ ಜಿ.ಎಸ್.ಬಸವರಾಜು, ಪ್ರೊ.ದುಷ್ಯಂತಗೌಡ, ಡಾ.ಕೆ. ಆರ್.ಕಮಲೇಶ್, ಬಿಎಂಶ್ರಿ ಪ್ರತಿಷ್ಠಾನದ ಅಧ್ಯಕ್ಷರಾದ ಡಾ.ಬೈರಮಂಗಳ ರಾಮೇಗೌಡ, ತುಮಕೂರು ವಿವಿ ವಿಶ್ರಾಂತ ಕುಲಪತಿ ಪ್ರೊ.ಎಂ.ವೆಂಕಟೇಶ್ವರಲು ಅವರುಗಳು ಪಾಲ್ಗೊಂಡಿದ್ದರು.

# ಶಿಕ್ಷಣ ಕಲಿಯುವ ಹವ್ಯಾಸ ರೂಢಿಸಿಕೊಳ್ಳಬೇಕು: ಶಿವರಾಮರೆಡ್ಡಿ



ಚಿಕ್ಕಬಳ್ಳಾಪುರ

ವ್ಯಾಸಂಗದ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ಮೊಬೈಲ್ ಗೀಳು ಒಳ್ಳೆಯ ಬೆಳವಣಿಗೆ ಅಲ್ಲ, ಖುಷಿಯಿಂದ ಗುಣಾತ್ಮಕ ಶಿಕ್ಷಣ ಕಲಿಯುವ ಹವ್ಯಾಸವನ್ನು ರೂಢಿಸಿಕೊಳ್ಳಬೇಕು ಎಂದು ಬಿ.ಜಿ.ಎಸ್. ಶಿಕ್ಷಣ ಸಂಸ್ಥೆಗಳ ಮುಖ್ಯ ಆಡಳಿತಾಧಿಕಾರಿ ಡಾ. ಎನ್. ಶಿವರಾಮರೆಡ್ಡಿ ಹೇಳಿದರು.

ನಗರದ ಅಗಲಗುರ್ಕಿ ಬಳಿಯ ಬಿಜಿಎಸ್ ಸೈನ್ಸ್ ಅಕಾಡೆಮಿಯ ಆಡಿಟೋರಿಯಮ್ "ಗೆಲಾಕ್ಸಿ"ಯಲ್ಲಿ ಪ್ರಥಮ ವರ್ಷದ ಪದವಿ ತರಗತಿಗಳ "ಸ್ವಸ್ತಿ–2026" ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿ, ತಂದೆ ತಾಯಿಗಳ ಕನಸುಗಳನ್ನು ಸಾಕಾರಗೊಳಿಸುವುದು ವಿದ್ಯಾರ್ಥಿಗಳ ಕರ್ತವ್ಯವಾಗಿದ್ದು, ವ್ಯಾಸಂಗದ ಅವಧಿಯಲ್ಲಿ ಕಷ್ಟಪಟ್ಟು ಓದುವುದಕ್ಕಿಂತ ಇಷ್ಟಪಟ್ಟು ಓದುವ ಹವ್ಯಾಸ ರೂಢಿಸಿಕೊಳ್ಳುವುದರ ಜೊತೆಗೆ ಮಾನವೀಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಆದರ್ಶ ವ್ಯಕ್ತಿಗಳಾಗಿ ರೂಪಕೊಳ್ಳಬೇಕು ಎಂದ ಅವರು "ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಆದಿಚುಂಚನಗಿರಿ ಶ್ರೀಗಳು ಬಿ.ಜಿ.ಎಸ್ ಸಂಸ್ಥೆಯನ್ನು ಪ್ರಾರಂಭಿಸಿದ್ದು, ಶೈಕ್ಷಣಿಕ ಸೇವೆಯನ್ನು ಗುರಿಯಾಗಿಸಿಕೊಂಡಿರುವ ಈ ಸಂಸ್ಥೆಗಳು ನಿರಂತರವಾಗಿ ಮುಂದುವರೆಯುತ್ತ ಸಾವಿರಾರು ವಿದ್ಯಾರ್ಥಿಗಳಿಗೆ ದಾರಿದೀಪವಾಗಿದೆ ಎಂದ ಅವರು ಪ್ರಾಥಮಿಕ ಹಂತದಿಂದಲೇ ಒಳ್ಳೆಯ ಸಂಸ್ಕಾರ ಕಲಿಯಬೇಕು ಅದೇ ರೀತಿ ಗುರು–ಹಿರಿಯರ ಬಗ್ಗೆ ಗೌರವ ಭಾವನೆ ಮೂಡಿಸುವಂತಹ ವಾತಾವರಣ ನಿರ್ಮಾಣ ಆಗಬೇಕು ಎಂದರು. ಇದೇ ವೇಳೆ ಪದವಿ ಪೂರ್ವ ತರಗತಿಯಲ್ಲಿ ಅತ್ಯುತ್ತಮ ಅಂಕಗಳನ್ನು ಪಡೆದು ಸಾಧನೆಗೈದ ಸಾಧಕ ವಿದ್ಯಾರ್ಥಿಗಳನ್ನು ಗೌರವಿಸಿ ಸನ್ಮಾನಿಸಲಾಯಿತು.

ಬಿಜಿಎಸ್ ಸೈನ್ಸ್ ಅಕಾಡೆಮಿಯ ಡೀನ್ ಡಾ. ಎನ್. ಮಧುಸೂಧನ್, ಪ್ರಾಂಶುಪಾಲರಾದ ಹೆಚ್.ಬಿ. ರಮೇಶ್, ಉಪಪ್ರಾಂಶುಪಾಲ ಜೆ. ಚಂದ್ರಮೋಹನ್ ಜ್ಯೋತಿಕಿರಣ್ ಸೇರಿದಂತೆ ಉಪನ್ಯಾಸಕರು, ಪೋಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬರ ಪರಿಸ್ಥಿತಿಯನ್ನು ನಿಭಾಯಿಸಲು ಕರವೇ ಆಗ್ರಹ



ಚಿಂತಾಮಣಿ

ತಾಲೂಕಿನಾದ್ಯಂತ ಮಳೆಯ ಕೊರತೆಯಿಂದಾಗಿ ತೀವ್ರವಾದ ಬರ ಪರಿಸ್ಥಿತಿ ಉಂಟಾಗಿದೆ. ಮುಖ್ಯವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಜಾನುವಾರುಗಳಿಗೆ ನೀರು, ಮೇವಿನ ಕೊರತೆ ಉಂಟಾಗಿದೆ. ಜನರಿಗೆ ಕುಡಿಯುವ ನೀರಿನ ಸಮಸ್ಯೆ ಹೇಳತೀರದು. ಈ ಬಾರಿ ಮಳೆ ಕೈಕೊಟ್ಟ ಕಾರಣದಿಂದಾಗಿ ಗ್ರಾಮೀಣ ಭಾಗದಲ್ಲಿ ಯಾವುದೇ ರೀತಿಯ ಮುಂಗಾರು ಬೆಳೆಗಳು ಬಿತ್ತನೆ ಆಗಿಲ್ಲ. ಇದರಿಂದಾಗಿ ರೈತರು ತೀವ್ರ ಸಂಕಷ್ಟವನ್ನು ಅನುಭವಿಸುತ್ತಿದ್ದಾರೆ. ಕಷ್ಟಪಟ್ಟು ಬೆಳೆದ ಬೆಳೆಗಳಿಗೆ ಮಾರುಕಟ್ಟೆಯಲ್ಲಿ ಸರಿಯಾದ ದರಗಳು ಸಿಗದೆ ಪರೆದಾಡುವಂತಾಗಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಕುಮಾರ್ ಶೆಟ್ಟಿ ಆಗ್ರಹಿಸಿದ್ದಾರೆ.

ಈ ಕೂಡಲೇ ಸಮರ್ಪಕವಾಗಿ ಜಾನುವಾರುಗಳಿಗೆ ಕುಡಿಯುವ ನೀರಿನ ಜೊತೆಗೆ ಮೇವಿನ ವ್ಯವಸ್ಥೆಯನ್ನು ಕಲ್ಪಿಸಬೇಕು. ಜೊತೆಗೆ ಕುಡಿಯುವ ನೀರಿಗೆ ಯಾವುದೇ ಕೊರತೆಯಾಗದಂತೆ ನೋಡಿಕೊಳ್ಳಬೇಕು. ಈ ವಿಷಯವಾಗಿ ಗ್ರಾಮೀಣ ಭಾಗದಲ್ಲಿ ಕರ್ತವ್ಯ ನಿರ್ವಹಿಸುವ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ, ಸಲಹೆಗಳನ್ನು ನೀಡಿ ಬರ ಪರಿಸ್ಥಿತಿಯನ್ನು ನಿಭಾಯಿಸಲು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ.

# ಬಿದ್ದಾಗ ಎದ್ದುನಿಲ್ಲುವ ಆತ್ಮವಿಶ್ವಾಸ ತುಂಬುವವರು ಗುರುಗಳು

ಕೊರಟಗೆರೆ

ತಂದೆಯ ಜವಬ್ದಾರಿ, ತಾಯಿಯ ವಾತ್ಸಲ್ಯ, ಸ್ನೇಹಿತರ ಸಹಕಾರ ಎಲ್ಲಾ ಗುಣ ಒಟ್ಟಿಗೆ ಇರುವುದು ಗುರುವಿನಲ್ಲಿ. ಸಂಕಷ್ಟದಲ್ಲಿ ಸಿಲುಕಿದವರಲ್ಲಿ ಆತ್ಮಸ್ಥೈರ್ಯ ತುಂಬಿ ಎದ್ದು ನಿಲ್ಲುವಂತಹ ಶಕ್ತಿ ನೀಡುವವರು ಗುರುಗಳು ಎಂದು ಶ್ರೀ ವೀರಭದ್ರ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಅವರು ಸುಕ್ಷೇತ್ರ ಸಿದ್ಧರಬೆಟ್ಟದ ಬಾಳೇಹೊನ್ನೂರು ಖಾಸಾ ಶಾಖಾ ಮಠದಲ್ಲಿ 237ನೇ ಬೆಳದಿಂಗಳ ಕೂಟದ ಹಾಗೂ ಗುರು ಪೌರ್ಣಿಮೆಯಅಂಗವಾಗಿ ನೆಡೆದ ಧರ್ಮ ಹಾಗೂ ಜನಜಾಗೃತಿ ಸಮಾರಂಭದಲ್ಲಿ ಆಶೀರ್ವಚನ ನೀಡುತ್ತಾ ಗುರು ಕಾರುಣ್ಯದಿಂದಾಗಿ ಎಂತಹ ಸಿದ್ದಿಯನ್ನು ಬೇಕಾದರೂ ಸಾಧಿಸಬಹುದು ಎಂದು ತಿಳಿಸಿದರು.


ಗೋಡೆಕೆರೆ ಮಹಸಂಸ್ಥಾನದ ಶ್ರೀ ಮೃತ್ಯುಂಜಯ ದೇಶಿಕೇಂದ್ರ ಸ್ವಾಮೀಜಿ ಪ್ರವಚನವನ್ನು ನೀಡುತ್ತ ಧರ್ಮವು ಬದುಕಿಗೆ ಆಸರೆಯಾಗಿದೆ. ಧರ್ಮವೆಂಬುದು ಬಾಯಿಂದ ಹೇಳುವುದಲ್ಲ ಬದುಕಿನಲ್ಲಿ ನಡೆದು ತೋರಿಸುವುದು. ಧರ್ಮದಿಂದ ನೆಡೆಯುವ ವ್ಯಕ್ತಿಯನ್ನು ಯಾರಿಂದಲೂ ಮಣಿಸಲು ಸಾಧ್ಯವಿಲ್ಲ. ಸ್ವಾರ್ಥ ಜೀವನವನ್ನು ಬಿಟ್ಟು ನಿಸ್ವಾರ್ಥತೆಯಿಂದ ಬದುಕಿದರೆ ಮುಕ್ತಿ ದೊರೆಯುತ್ತದೆ. ನಡೆ ನುಡಿಯಲ್ಲಿ ಶುದ್ಧವಿದ್ದಾಗ ಬದುಕು ಸಾರ್ಥಕವಾಗುತ್ತದೆ ಎಂದು ತಿಳಿಸಿದರು.



ರಾಯಚೂರಿನ ಶ್ರೀ ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಡಾ. ಮೀನಾಕ್ಷಿ ಖಂಡೀಮಠ ರವರು ಉಪನ್ಯಾಸ ನೀಡುತ್ತಾ ಗುರು ಪೌರ್ಣಿಮೆಯು ಗುರುವಿನ ಶಕ್ತಿಯನ್ನು ಸ್ಮರಿಸುವ ದಿನ. ಸೃಷ್ಟಿಸುವ, ಮುನ್ನಡೆಸುವ ಹಾಗೂ ನಾಶಗೊಳಿಸು ತ್ರಿಮೂರ್ತಿಗಳ ಒಟ್ಟು ಶಕ್ತಿ ಗುರುವಿನಲ್ಲಿ ಅಡಗಿದೆ. ಭಕ್ತರಲ್ಲಿ ದಾನದ ಗುಣವನ್ನು ಬೆಳೆಸಿ, ಸತ್ಕಾರ್ಯ ಮಾಡುವ ದಾರಿತೋರಿಸುವುದು ಗುರುವೇ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮಸ್ಥರನ್ನೆಲ್ಲಾ ಒಗ್ಗೂಡಿಸಿ ಒಂಬತ್ತು ದೇವಾಲಯಗಳ ಜೀರ್ಣೋದ್ಧಾರ ಮಾಡಿದ ಗುಣೇ ಮೋರುಬಗಲ್ ಗ್ರಾಮದ ಜಿ.ಸಿ.ಬಸವೇಗೌಡ.ರವರನ್ನು ಸನ್ಮಾನಿಸಲಾಯಿತು. ವೇದಿಕೆಯಲ್ಲಿ ಜೋನಿಗರಹಳ್ಳಿ ಸವಿತಾ, ಮಮತ, ದುಷ್ಯಂತಕುಮಾರ್, ಗೌ.ರಾ.ರಾಮಮೂರ್ತಿ ಸೇರಿದಂತೆ ಇನಿತರರು ಉಪಸ್ಥಿತರಿದ್ದರು.

# ಇಂದಿನಿಂದ ನಗರದಲ್ಲಿ 3 ದಿನಕಾಲ ಚಾತುರ್ಮಾಸ ಕಾರ್ಯಕ್ರಮ



ತುಮಕೂರು

ಆಚಾರ್ಯಶ್ರೀ 108 ಪ್ರಮುಖ್ ಸಾಗರ್ ಜೀ ಮಹಾರಾಜರವರು ಹಾಗೂ ಸಂಘದವರು ಪುಷ್ಪ ಪ್ರಮುಖ ವರ್ಷಾಯೋಗ ಚಾತುರ್ಮಾಸವನ್ನು ತುಮಕೂರಿನಲ್ಲಿ ಆಚರಿಸಲು ಸಂಕಲ್ಪ ಮಾಡಿದ್ದು, ಇದರ ಅಂಗವಾಗಿ ಈ ತಿಂಗಳ 31ರಿಂದ ಆ. 2ರವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

31ರಂದು ನಗರದ ಚಿಕ್ಕಪೇಟೆಯಲ್ಲಿರುವ ಜಿನಮಂದಿರದಿಂದ ಬೆಳಿಗ್ಗೆ 7 ಗಂಟೆಗೆ ಧ್ವಜ ಶೋಭಾ ಯಾತ್ರೆ ಆರಂಭವಾಗಲಿದೆ. ಯಾತ್ರೆಯು ಬಿ.ಹೆಚ್. ರಸ್ತೆಯ ಜೈನ ಭವನ ತಲುಪಿದ ನಂತರ ಧ್ವಜಾರೋಹಣ, ನಂತರ ಬೆಳಿಗ್ಗೆ 8.30ಕ್ಕೆ ಮಂಟಪ ಉದ್ಘಾಟನೆ ನಡೆಯಲಿದೆ. ಆನಂತರ ಬೆಳಿಗ್ಗೆ 10 ಗಂಟೆಗೆ ಜೈನ ಭವನದಲ್ಲಿ ವೀರ ಶಾಸನ ಜಯಂತಿ ಧಾರ್ಮಿಕ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ 108 ಪ್ರಮುಖ್ ಸಾಗರ್ ಜೀ ಮಹಾರಾಜರು ಹಾಗೂ ಸಂಘದವರು ದಿವ್ಯ ಸಾನಿಧ್ಯ ವಹಿಸುವರು. ಶ್ರೀಕ್ಷೇತ್ರ ಅರಹಂತಗಿರಿಯ ಧವಲಕೀರ್ತಿ ಭಟ್ಟಾರಕ ಸ್ವಾಮೀಜಿ, ಶ್ರೀಕ್ಷೇತ್ರ ಎನ್.ಆರ್. ಪುರದ ಲಕ್ಷ್ಮಿಸೇನಾ ಭಟ್ಟಾರಕ ಚಾರ್ಯವರ್ಯ ಸ್ವಾಮೀಜಿ, ಶ್ರೀಕ್ಷೇತ್ರ ಕೊಲ್ಲಾಪುರದ ಲಕ್ಷ್ಮೀಸೇನಾ ಭಟ್ಟಾರಕ ಸ್ವಾಮೀಜಿ ಸಮಾರಂಭದ ಸಾನಿಧ್ಯ ವಹಿಸುವರು. ಕರ್ನಾಟಕ ಜೈನ್ ಅಸೋಸಿಯೇಷನ್ ಅಧ್ಯಕ್ಷ ಎಸ್. ಜಿತೇಂದ್ರಕುಮಾರ್, ಕಾರ್ಯಕಾರಿ ಸಮಿತಿ ಸದಸ್ಯ ಬಿ.ಆರ್. ಶೀತಲ್‌ಕುಮಾರ್ ಅತಿಥಿಗಳಾಗಿ ಭಾಗವಹಿಸುವರು. ನಗರದ ದಿಗಂಬರ ಜೈನ ಪಾರ್ಶ್ವನಾಥಸ್ವಾಮಿ ಜಿನ ಮಂದಿರದ ಅಧ್ಯಕ್ಷ ಟಿ.ಡಿ. ಬಾಹುಬಲಿಬಾಬು ಅಧ್ಯಕ್ಷತೆವಹಿಸುವರು.

ಶಾಸಕರಾದ ಜಿ.ಬಿ. ಜ್ಯೋತಿಗಣೇಶ್, ಬಿ. ಸುರೇಶ್‌ಗೌಡ ಭಾಗವಹಿಸಿದರೆ ದಿಗಂಬರ ಜೈನ ಪಾರ್ಶ್ವನಾಥಸ್ವಾಮಿ ಜಿನ ಮಂದಿರ ಅಧ್ಯಕ್ಷ ಟಿ.ಡಿ. ಬಾಹುಬಲಿ ಅಧ್ಯಕ್ಷತೆವಹಿಸುವರು. ಆಗಸ್ಟ್ 2ರಂದು ಬೆಳಿಗ್ಗೆ 7 ಗಂಟೆಗೆ ಜಿನಮಂದಿರದಿಂದ ಚಾತುರ್ಮಾಸ ಕಳಸ ಶೋಭಯಾತ್ರೆ ಆಗಮಿಸಲಿದೆ. ನಂತರ ಬೆಳಿಗ್ಗೆ 10 ಗಂಟೆಗೆ ಚಾತುರ್ಮಾಸ ಕಳಸ ಸ್ಥಾಪನೆ ಧಾರ್ಮಿಕ ಸಭೆಯು ಆಚಾರ್ಯ ಶ್ರೀ 108 ಪ್ರಮುಖ್ ಸಾಗರ್ ಜೀ ಮಹಾರಾಜರವರು ಹಾಗೂ ಸಂಘದವರ ಸಾನಿಧ್ಯದಲ್ಲಿ ನಡೆಯಲಿದೆ. ಎನ್.ಆರ್. ಪುರ ಕ್ಷೇತ್ರದ ಲಕ್ಷ್ಮೀಸೇನಾ ಭಟ್ಟಾರಕ ಪಟ್ಟಾಚಾರ್ಯ ಸ್ವಾಮೀಜಿ, ಶ್ರವಣ ಬೆಳಗೊಳ ಕ್ಷೇತ್ರದ ಅಭಿನವ ಚಾರುಕೀರ್ತಿ ಭಟ್ಟಾರಕ ಪಟ್ಟಾಚಾರ್ಯವರ್ಯ ಸ್ವಾಮೀಜಿ ಭಾಗವಹಿಸುವರು. ಉಪ ಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್, ಭಾರತೀಯ ಜೈನ್ ಮಿಲನ್ ರಾಷ್ಟ್ರೀಯ ಅಧ್ಯಕ್ಷರಾದ ಧರ್ಮಸ್ಥಳ ಕ್ಷೇತ್ರದ ಸುರೇಂದ್ರಕುಮಾರ್, ಅನಿತಾ ಸುರೇಂದ್ರಕುಮಾರ್, ಶಾಸಕ ಕೆ.ಎನ್. ರಾಜಣ್ಣ, ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಭಾಗವಹಿಸುವರು.

# ಬಿಎಲ್‌ಒಗಳೊಂದಿಗೆ ಸಭೆ

ಮಾಲೂರು

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ: ಶೇ.87.81% ಡಿಜಿಟಲೀಕರಣ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (SIR)–2026 ರ ಸಂಬಂಧ ತಾಲೂಕಿನಲ್ಲಿ ಒಟ್ಟು 1,95,550 ಮತದಾರರಿದ್ದು ಎನುಮರೇಷನ್ ಫಾರಂ ಡಿಜಿಟಲೀಕರಣ 769(ಶೇ. 0.39ರಷ್ಟು ಮತದಾರರು ಆನಲೈನ್ ಮೂಲಕ ಗಣತಿ ನಮೂನೆಗಳನ್ನು ಸಲ್ಲಿಸಿದ್ದಾರೆ ಎಂದು ಸಹಾಯಕ ಚುನಾವಣಾ ಅಧಿಕಾರಿ ಕುಮಾರ ಸ್ವಾಮಿ ಹೇಳಿದರು.

ನಗರದ ತಾಲೂಕು ಕಚೇರಿಯ ಸಭಾಂಗಣದಲ್ಲಿ ಬಿಎಲ್‌ಒ ಮೇಲ್ವಿಚಾರಕರು ಹಾಗೂ ಬಿಎಲ್‌ಎ ಗಳೊಂದಿಗೆ ಸಭೆ ನಡೆಸಿ ಮಾತನಾಡಿದರು. ಉಳಿಕೆ ಮತಗಟ್ಟೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ: ಶೇ.87.81% ಡಿಜಿಟಲೀಕರಣಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ – 2026 ರ ಸಂಬಂಧ ತಾಲೂಕಿನಲ್ಲಿ ಒಟ್ಟು 1,95,550 ಮತದಾರರಿದ್ದು ಎನುಮರೇಷನ್ ಫಾರಂ ಡಿಜಿಟಲೀಕರಣ 769(ಶೇ. 0.39ರಷ್ಟು ಮತದಾರರು ಆನಲೈನ್ ಮೂಲಕ ಗಣತಿ ನಮೂನೆಗಳನ್ನು ಸಲ್ಲಿಸಿದ್ದಾರೆ.

ಹಂತದ ಅಧಿಕಾರಿಗಳ ಬಿಎಲ್‌ಒ ಆಪ್‌ನಲ್ಲಿ ಗಣತಿ ನಮೂನೆಗಳನ್ನು ಅಪ್ಲೋಡ್ ಮಾಡಲಾಗಿದ್ದು, ಒಟ್ಟು ಮಾಲೂರು ತಾಲೂಕಿನಲ್ಲಿ ಶೇ. 87.81% ರಷ್ಟು ಡಿಜಿಟಲೀಕರಣವಾಗಿರುತ್ತದೆ. ಈಗಾಗಲೇ ನಮೂನೆ ಪಡೆದಿರುವ ಮತದಾರರು ಮಾಹಿತಿ ಭರ್ತಿ ಮಾಡಿ ಕಡ್ಡಾಯವಾಗಿ ಬಿಎಲ್‌ಒಗೆ ಹಿಂತಿರುಗಿಸಲು ತಿಳಿಸಿದೆ. ಮತದಾರರ ಪಟ್ಟಿಯನ್ನು ಸಂಪೂರ್ಣವಾಗಿ ದೋಷರಹಿತ ಹಾಗೂ ನವೀಕರಿಸಿದ ಪಟ್ಟಿಯನ್ನಾಗಿ ಮಾಡಲು ಬಿಎಲ್‌ಒಗಳು ಮತ್ತು ಅಧಿಕಾರಿಗಳ ತಂಡ ನಿರಂತರವಾಗಿ ಶ್ರಮಿಸುತ್ತಿದೆ ಎಂದರು.

ಚುನಾವಣೆ ಶಾಖೆಯ ಶ್ರೀಧರ್, ಸಂಪತ್ ಕುಮಾರ್, ಸಹಾಯಕ ಬಾಲು, ಬಿಎಲ್‌ಒ ಬಿಎಲ್‌ಎಗಳು ಹಾಜರಿದ್ದರು.

# 14 ಸಾವಿರ ಪಿಂಚಣಿ ಕಾರ್ಡ್ ರದ್ದು ಆರೋಪ: ಆ. 5ರಂದು ಧರಣಿ

ಕೆಜಿಎಫ್

ರಾಜ್ಯದ ಕಾಂಗ್ರೆಸ್ ಸರ್ಕಾರ ತಾಲೂಕಿನಾದ್ಯಂತ ಬಡವರಿಗೆ ನೀಡುತ್ತಿದ್ದ 4 ಸಾವಿರ ರೇಷನ್ ಕಾರ್ಡ್ ಹಾಗೂ 14 ಸಾವಿರ ಪೆನ್ಷನ್ ಕಾರ್ಡ್‌ಗಳನ್ನು ರದ್ದುಪಡಿಸಿರುವುದರ ವಿರುದ್ಧ ಬಿಜೆಪಿ ಪಕ್ಷದ ವತಿಯಿಂದ ತಾಲೂಕು ಕಚೇರಿ ಮುಂಭಾಗದಲ್ಲಿ ಬೃಹತ್ ಧರಣಿಯನ್ನು ಹಮ್ಮಿಕೊಳ್ಳಲಾಗಿದೆ ಎಂದು ನಗರ ಬಿಜೆಪಿ ಅಧ್ಯಕ್ಷ ಸುರೇಶ್ ಹೇಳಿದರು.

ನಗರದ ಕಿಂಗ್ ಜಾರ್ಜಹಾಲ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು. ರಾಜ್ಯದ ಕಾಂಗ್ರೆಸ್ ಸರ್ಕಾರದ ಎಡವಟ್ಟಿನಿಂದ ಅರ್ಹ ಪಡಿತರ ಚೀಟಿದಾರರ ಕಾರ್ಡ್‌ಗಳು ರದ್ದುಗೊಂಡಿವೆ. ನಮ್ಮ ಕ್ಷೇತ್ರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬಡವರು ವಾಸಿಸುತ್ತಿದ್ದಾರೆ. ಸರ್ಕಾರದ ಅಂಗವಾಗಿರುವ ಶಾಸಕರು ಪಡಿತರ ಚೀಟಿಗಳು ರದ್ದುಗೊಂಡಿದ್ದರು ಸರ್ಕಾರದ ಗಮನ ಸೆಳೆಯವಲ್ಲಿ ವಿಫಲರಾಗಿದ್ದಾರೆ. ಕ್ಷೇತ್ರದಲ್ಲಿ ನಡೆಯುತ್ತಿರುವ ಭ್ರಷ್ಟಚಾರವನ್ನು ಕಡಿವಾಣ ಹಾಕಲು ವಿಫಲರಾಗಿದ್ದಾರೆ ಎಂದು ದೂರಿದರು.

ಕ್ಷೇತ್ರದ ಜನರು ಇಲ್ಲಿ ನಡೆಯುತ್ತಿರುವ ಭ್ರಷ್ಟಚಾರ, ಅವ್ಯವಹಾರ, ಪಡಿತರ ಚೀಟಿ ರದ್ದುಗೊಂಡಿರುವ ಬಗ್ಗೆ ಯಾರು ಏಕೆ ಧ್ವನಿ ಎತ್ತುತ್ತಿಲ್ಲ ಎಂದು ಪ್ರಶ್ನೆ ಮಾಡುತ್ತಿದ್ದಾರೆ. ಆದ್ದರಿಂದ ಬಿಜೆಪಿ ಪಕ್ಷದ ಕಾರ್ಯಕರ್ತರು ಬಡವರ ಧ್ವನಿಯಾಗಿ ಮಾಜಿ ಶಾಸಕ ವೈ.ಸಂಪಂಗಿ ನೇತೃತ್ವದಲ್ಲಿ ಹೋರಾಟ ಮಾಡಲು ತೀರ್ಮಾನ ಕೈಗೊಂಡಿದೆ ಎಂದರು.



ಕ್ಷೇತ್ರದ ಯಾವುದೇ ಭಾಗದಲ್ಲಿ ನಡೆಯುತ್ತಿರುವ ರಸ್ತೆ ಅಭಿವೃದ್ಧಿ ಕಾಮಗಾರಿಗಳು ಗುಣಮಟ್ಟದಿಂದ ಕೂಡಿಲ್ಲ. ರಸ್ತೆ ಡಾಂಬರಿಕರಣ ಕಂಡ 1 ತಿಂಗಳಿಗೆ ರಸ್ತೆಯಲ್ಲಿನ ಡಾಂಬರು ಕಿತ್ತು ಬರುತ್ತಿದೆ. ಗುತ್ತಿಗೆದಾರರು ಸಹ ನಮ್ಮ ಊರಿನವರಲ್ಲ. ಹೊರ ಊರಿನ ವ್ಯಕ್ತಿಗಳು ಬಂದು ಕಳಪೆ ಗುಣಮಟ್ಟದ ಕಾಮಗಾರಿ ನಡೆಸಿ ಹೋಗುತ್ತಾರೆ ಯಾರನ್ನು ಕೇಳುವುದು ಎಂದು ಜನರು ಪ್ರಶ್ನೆ ಮಾಡುತ್ತಿದ್ದಾರೆ ಎಂದು ಹೇಳಿದರು.

ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಲಕ್ಷ್ಮಿನಾರಾಯಣ ಮಾತನಾಡಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿರುವ ನಾಗರಾಜ್ ವಿನಾಕಾರಣವಾಗಿ ಮಾಜಿ ಶಾಸಕ ಸಂಪಂಗಿ ವಿರುದ್ಧ ಮಾತನಾಡುತ್ತಿದ್ದಾರೆ. ಆದರೆ ಈಶ್ವರ ದೇವಾಲಯಕ್ಕೆ ಸೇರುವ 3 ಎಕರೆ ಜಮೀನಿನನ್ನು ಒತ್ತುವರಿ ಮಾಡಿಕೊಂಡು ಅವರು ಹಾಗೂ ಸಂಬಂಧಿಗಳು ಮನೆಗಳನ್ನು ನಿರ್ಮಿಸಿದ್ದಾರೆ. ಇದರ ವಿರುದ್ಧ ತಹಶೀಲ್ದಾರ್ ರವರಿಗೆ ತನಿಖೆ ನಡೆಸಿ ಕ್ರಮಕೈಗೊಳ್ಳುವಂತೆ ದೂರು ನೀಡಲಾಗುವುದು ಎಂದು ಹೇಳಿದರು.

ಕಳೆದ 1 ತಿಂಗಳಿನಿಂದ ಕ್ಷೇತ್ರದಲ್ಲಿ ನಡೆಯುತ್ತಿರುವ ಅವ್ಯವಹಾರ ಅಕ್ರಮಗಳನ್ನು ಬಯಲಿಗೆಳೆಯಲು ಮುಂದಾಗುತ್ತಿದ್ದಂತೆ ಶಾಸಕರ ಬೆಂಬಲಿಗರು ಮಾಜಿ ಶಾಸಕರ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದಾರೆ. ಸರ್ಕಾರಿ ಜಮೀನು ಗುಳುಂ ಮಾಡಿದ್ದಾರೆ. ಶಾಸಕರಾಗಲಿ, ಮಾಜಿ ಶಾಸಕರಾಗಲಿ, ಸರ್ಕಾರ ತನಿಖೆ ನಡೆಸಿ ವಶಪಡಿಸಿಕೊಳ್ಳಲಿ. ಆದರೆ ಸುಖಸುಮ್ಮನೆ ಆರೋಪಗಳನ್ನು ಹೊರಿಸುವುದು ಸರಿಯಾದುದ್ದಲ್ಲ. ಕ್ಷೇತ್ರದಲ್ಲಿ ಪಡಿತರ ಚೀಟಿ ವಂಚಿತ ಕಾರ್ಡ್‌ದಾರರು ಪೆನ್ಷನ್ ರದ್ದುಗೊಂಡಿರುವ ಫಲಾನುಭವಿಗಳು ನಮ್ಮ ಪರವಾಗಿ ಏಕೆ ಯಾರು ಧ್ವನಿ ಎತ್ತುತ್ತಿಲ್ಲ ಎಂಬ ಅಳಲು ತೋಡಿಕೊಂಡ ಹಿನ್ನಲೆಯಲ್ಲಿ ಮುಂದಿನ ತಿಂಗಳ 5 ರಂದು ತಾಲೂಕು ಕಚೇರಿ ಮುಂಭಾಗದಲ್ಲಿ ಧರಣಿ ನಡೆಸಲಾಗುವುದು ಎಂದು ಹೇಳಿದರು.

ಬಿಎಲ್‌ಎ ಬಾಬಿ ಸುರೇಶ್, ಬಂಡಿ ವೆಂಕಟೇಶ್, ರಾಜಗೋಪಾಲ್, ರವಿಕುಮಾರ್, ಪಾಂಡ್ಯನ್ ಹಾಗೂ ಇತರರು ಹಾಜರಿದ್ದರು.

# 'ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನಕಾರಿ ಹೇಳಿಕೆ ವಿರುದ್ಧ ಕಟ್ಟುನಿಟ್ಟಿನ ಕ್ರಮ'



ಮಧುಗಿರಿ

ಸಾಮಾಜಿಕ ಜಾಲತಾಣಗಳಲ್ಲಿ ಅವಹೇಳನಕಾರಿ ಹೇಳಿಕೆಗಳನ್ನು ನೀಡಿರುವ ವ್ಯಕ್ತಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಶ್ರೀ ಶಂಕರ ಸೇವಾ ಸಮಿತಿ ಹಾಗೂ ವಿಪ್ರ ಬಂಧುಗಳು ಉಪ ವಿಭಾಗಾಧಿಕಾರಿ ಕಚೇರಿಯ ಗ್ರೇಡ್–2 ಅಧಿಕಾರಿ ಶ್ರೀನಿವಾಸ್ ಅವರಿಗೆ ಗುರುವಾರ ಮನವಿ ಸಲ್ಲಿಸಿದರು.

ಮನವಿಯಲ್ಲಿ, ಸನಾತನ ಹಿಂದೂ ಧರ್ಮದ ಪುನರುತ್ಥಾನಕ್ಕೆ ಮಹತ್ತರ ಕೊಡುಗೆ ನೀಡಿದ ಆದಿ ಶಂಕರಾಚಾರ್ಯರು ಅದ್ವೈತ ತತ್ವವನ್ನು ಜಗತ್ತಿಗೆ ಸಾರಿದ ಶ್ರೇಷ್ಠ ಆಚಾರ್ಯರಾಗಿದ್ದು, ಇತ್ತೀಚಿನ ದಿನಗಳಲ್ಲಿ ಕೆಲವರು ಸಾಮಾಜಿಕ ಜಾಲತಾಣಗಳಲ್ಲಿ ಅವರ ಕುರಿತು ಹಾಗೂ ಅವರ ಮಾತೃಶ್ರೀಯವರ ಚಾರಿತ್ರ್ಯದ ಬಗ್ಗೆ ಅತ್ಯಂತ ಅವಹೇಳನಕಾರಿ ಹಾಗೂ ಅಸಭ್ಯ ಭಾಷೆಯಲ್ಲಿ ಮಾತನಾಡುತ್ತಿರುವುದು ಭಕ್ತರ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟುಮಾಡಿದೆ ಎಂದು ಆರೋಪಿಸಲಾಗಿದೆ.

ಅಲ್ಲದೆ, ಶಂಕರಾಚಾರ್ಯರು ರಚಿಸಿದ ಸೌಂದರ್ಯಲಹರಿ ಕುರಿತು ಸಹ ಕೀಳುಮಟ್ಟದ ಹೇಳಿಕೆಗಳನ್ನು ನೀಡಲಾಗಿದ್ದು, ಇಂತಹ ಹೇಳಿಕೆಗಳಿಂದ ಶೃಂಗೇರಿ ಶಾರದಾ ಪೀಠ ಸೇರಿದಂತೆ ಆದಿ ಶಂಕರಾಚಾರ್ಯರ ಅನುಯಾಯಿಗಳ ಮನಸ್ಸಿಗೆ ತೀವ್ರ ನೋವಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಅವಹೇಳನಕಾರಿ ಹೇಳಿಕೆಗಳಿರುವ ವಿಡಿಯೊ ದಾಖಲೆಯನ್ನು (ಸಿ.ಡಿ.) ಮನವಿಯೊಂದಿಗೆ ಲಗತ್ತಿಸಲಾಗಿದ್ದು, ಸಂಬಂಧಪಟ್ಟ ವ್ಯಕ್ತಿಗಳ ವಿರುದ್ಧ ಹಾಗೂ ವಿವೇಕ್ ಸೂರ್ಯ ಎಂಬುವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. ಮುಂದಿನ ದಿನಗಳಲ್ಲಿ ಯಾವುದೇ ಧರ್ಮಗುರುಗಳ ಬಗ್ಗೆ ಅವಹೇಳನಕಾರಿ ಹೇಳಿಕೆಗಳನ್ನು ನೀಡದಂತೆ ಕಾನೂನು ರೂಪಿಸುವಂತೆ ರಾಜ್ಯ ಸರ್ಕಾರಕ್ಕೆ ಶಿಫಾರಸು ಮಾಡುವಂತೆ ಸಮಿತಿ ಆಗ್ರಹಿಸಿದೆ.

ಈ ಸಂದರ್ಭದಲ್ಲಿ ಶ್ರೀ ಶಂಕರ ಸೇವಾ ಸಮಿತಿ ಅಧ್ಯಕ್ಷ ಬಿ.ಆರ್. ಸತ್ಯನಾರಾಯಣ, ಗೌರವಾಧ್ಯಕ್ಷ ಸೂರ್ಯನಾರಾಯಣರಾವ್, ಕಾರ್ಯದರ್ಶಿ ಶಕುಂತಲಾ ಗುಂಡೂರಾವ್, ವೇದಬ್ರಹ್ಮ ಶ್ರೀ ಕೆ. ನಾಗರಾಜ ಶಾಸ್ತ್ರಿಗಳು, ಕೆ. ನಾರಾಯಣ್, ಹೆಚ್.ಟಿ. ಸಂಜೀವಮೂರ್ತಿ, ಎಂ.ಎನ್. ನಾಗಭೂಷಣ್, ಎಂ.ಎಸ್. ಬದ್ರಿನಾಥ್, ಜಿ.ಎನ್. ರಾಘವೇಂದ್ರ, ಭೀಮೇಶ್, ಕೆ. ನಾಗರಾಜ್, ಶ್ರೀನಿವಾಸ್ ಶಾಸ್ತ್ರಿ, ಎಲೆಕ್ಷನ್ ರಂಗನಾಥ್, ಎಚ್.ವಿ. ಮಂಜುನಾಥ್, ಪಿ.ವಿ. ಬಾಲಕೃಷ್ಣ, ಜಿ. ವೆಂಕಟೇಶ್, ಸತೀಶ್ ಎಂ.ಪಿ., ನಟರಾಜ್ ದೀಕ್ಷಿತ್, ಲಕ್ಷ್ಮಿಕಾಂತ ರಾವ್, ಸುನಿಲ್, ರಮ್ಯಾ, ಸರಸ್ವತಿ, ಸಂಧ್ಯಾ, ಶೋಭಾ, ಪದ್ಮ, ಮುರಳಿ, ಶಾರದಮ್ಮ, ಜೋಡಿದಾರ್ ಮುರುಳಿಧರ್, ನಾರಾಯಣ ಚಾರ್ಲು, ಲಕ್ಷ್ಮಿಕಾಂತ್, ಉಷಾದೇವಿ, ರಮೇಶ್, ಪಿ.ವಿ. ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 'ಮಾನವ ಕಳ್ಳ ಸಾಗಾಣಿಕೆ ನಿರ್ಮೂಲನೆಗೆ ಎಲ್ಲರೂ ಕೈ ಜೋಡಿಸಿ'

ರಾಮನಗರ

ಮಾನವ ಕಳ್ಳ ಸಾಗಾಣಿಕೆಯು ಜಾಗತಿಕವಾಗಿ ಸಮಾಜವನ್ನು ಪೀಡಿಸಿರುವ ಸಂಕೀರ್ಣ ಸಮಸ್ಯೆಯಾಗಿದ್ದು, ಆಧುನಿಕ ಸಮಾಜದ ಗುಲಾಮಗಿರಿಯ ಸಂಕೇತವಾಗಿದೆ. ಸಮಾಜದ ಈ ಪಿಡುಗನ್ನು ನಾಶ ಮಾಡಲು ಪ್ರತಿಯೊಬ್ಬ ಜವಬ್ದಾರಿಯುತ ನಾಗರೀಕರು ಕೈಜೋಡಿಸಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತಾ ಪಿ.ಆರ್. ಅವರು ಕರೆ ನೀಡಿದರು.

ಅವರು ಜು. 30ರ ಗುರುವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಾರ್ಮಿಕ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ, ಜಿಲ್ಲಾ ವಕೀಲರ ಸಂಘ, ಶಾಂತ ಜೀವ ಜ್ಯೋತಿ ಹಾಗೂ ಜಿಲ್ಲೆಯ ಎಲ್ಲಾ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ–2026 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಾನವ ಕಳ್ಳಸಾಗಾಣಿಕೆ ತಡೆ ಕಾರ್ಯವು ಕೇವಲ ಸರ್ಕಾರಿ ನೌಕರರ ಜವಾಬ್ದಾರಿಯಷ್ಟೇ ಅಲ್ಲ. ಅದು ಸಮಾಜದ ಪ್ರತಿಯೊಬ್ಬ ನಾಗರಿಕರೂ ಜಾಗೃತರಾಗಿ ಘಟನೆಗಳ ಬಗ್ಗೆ ಸಂಬಂಧಿಸಿದವರಿಗೆ ಮಾಹಿತಿ ನೀಡುವ ಮೂಲಕ ಮಾನವ ಕಳ್ಳ ಸಾಗಾಣಿಕ ಪಿಡುಗನ್ನು ನಿರ್ಮೂಲನೆ ಮಾಡಬಹುದು ಇದಕ್ಕೆ ಎಲ್ಲರೂ ಕೈಜೋಡಿಸಬೇಕು. ಮಾವನ ಕಳ್ಳ ಸಾಗಾಣಿಕೆ ಎಂಬುದು ಮಾನವ ಹಕ್ಕುಗಳ ಸ್ಪಷ್ಟ ಉಲ್ಲಂಘನೆ ಎಂಬುದಾಗಿದೆ ಎಂದು ಹೇಳಿದರು.

ಮಾನವ ಕಳ್ಳಸಾಗಾಣಿಕೆ ತಡೆಗಟ್ಟುವುದು ಕೇವಲ ಒಂದು ಇಲಾಖೆಯ ಜವಾಬ್ದಾರಿಯಲ್ಲ. ಈ ಸಾಮಾಜಿಕ ಪಿಡುಗನ್ನು ಹೋಗಲಾಡಿಸಲು ಎಲ್ಲಾ ಇಲಾಖೆಗಳು ತಮ್ಮ ಕರ್ತವ್ಯವನ್ನು ಅಚ್ಚುಕಟ್ಟಾಗಿ ನಿಭಾಯಿಸಬೇಕು ಹಾಗೂ ಸಾರ್ವಜನಿಕರು ಮಾನವ ಕಳ್ಳ ಸಾಗಾಣಿಕೆ ಕಂಡುಬಂದಲ್ಲಿ ಸಂಬಂಧಿಸಿದ ಅಧಿಕಾರಿಗಳಿಗೆ ಮಾಹಿತಿ ನೀಡಿ, ಮಾನವ ಕಳ್ಳ ಸಾಗಾಣಿಕೆಯಲ್ಲಿರುವವರನ್ನು ಬಿಡುಗಡೆಗೊಳಿಸಲು ಸಹಕರಿಸುವಂತೆ ತಿಳಿಸಿದರು.



ಕಾಣೆಯಾದ ಮಕ್ಕಳ ಪ್ರಕರಣಗಳಲ್ಲಿ ತಕ್ಷಣ ಪೊಲೀಸ್ ಇಲಾಖೆಗೆ ದೂರು ನೀಡಿ ಎಫ್‌ಐಆರ್ ದಾಖಲಿಸುವುದು ಅತ್ಯಗತ್ಯ ಎಂದ ಅವರು ವಿಶೇಷವಾಗಿ ಕಾರ್ಮಿಕ ಇಲಾಖೆಯ ಅಧಿಕಾರಿಗಳು ಕೂಲಿ ಕಾರ್ಮಿಕರ ಕೆಲಸದ ಸ್ಥಳಗಳಲ್ಲಿ ಮಕ್ಕಳ ದುಡಿಮೆ ಅಥವಾ ಕಳ್ಳಸಾಗಾಣಿಕೆಯ ಅನುಮಾನ ಬಂದಲ್ಲಿ ತಕ್ಷಣ ಮಾಹಿತಿ ನೀಡಿ ಸ್ಥಳದ ಮಾಲೀಕರನ್ನು ವಿಚಾರಣೆ ನಡೆಸುವ ಮೂಲಕ ಮಕ್ಕಳನ್ನು ರಕ್ಷಿಸುವ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಮಂಜುನಾಥ್ ಅವರು ಮಾತನಾಡಿ, ಬಲವಂತವಾಗಿ ವಂಚನೆಯ ಮೂಲಕ ಅಥವಾ ಯಾವುದೇ ವ್ಯಕ್ತಿ ಪುರುಷ, ಮಹಿಳೆ ಅಥವಾ ಮಕ್ಕಳನ್ನು ಕರೆದೊಯ್ಯುವುದು ವರ್ಗಾವಣೆ ಮಾಡುವುದು ಆಶ್ರಯ ನೀಡುವುದು ಅಥವಾ ಹಣ ನೀಡಿ ಖರೀದಿ, ಮಾರಾಟ ಮಾಡುವುದು ಮಾನವ ಕಳ್ಳಸಾಗಾಣಿಕೆ ಎಂದು ಪರಿಗಣಿಸಲಾಗುತ್ತದೆ. ಸಮಾಜದಲ್ಲಿ ಮಕ್ಕಳನ್ನು ಜೀತ ಪದ್ಧತಿಗೆ ತಳ್ಳುವುದು, ಅಂಗಾಂಗ ಕಳ್ಳಸಾಗಾಣಿಕೆಗೆ ಬಳಸುವುದು, ವೈಶ್ಯವಾಟಿಕೆಗೆ ಹಾಗೂ ಇತರೆ ಶೋಷಣೆಗೆ ಒಳಪಡಿಸುವುದು ಗಂಭೀರ ಅಪರಾಧವಾಗಿದೆ. ಪ್ರತಿಯೊಬ್ಬ ವ್ಯಕ್ತಿಗೂ ಗೌರವಯುತವಾಗಿ ಬದುಕುವ ಹಕ್ಕು ಇದೆ. ಭಾರತದ ಸಂವಿಧಾನವು ಪ್ರತಿಯೊಬ್ಬ ನಾಗರಿಕನಿಗೂ ಸಮಾನತೆ ಸ್ವಾತಂತ್ರ್ಯ ಹಾಗೂ ಘನತೆಯಿಂದ ಬದುಕುವ ಹಕ್ಕನ್ನು ನೀಡಿದೆ ಎಂದರು.

ಈ ಸಂದರ್ಭದಲ್ಲಿ ಮಾನವ ಕಳ್ಳ ಸಾಗಾಣಿಕೆಯ ಜಾಗೃತಿ ಕರ ಪತ್ರಗಳನ್ನು ಬಿಡುಗಡೆಗೊಳಿಸಲಾಯಿತು.

ಎಎನ್‌ಎಸ್‌ಎಸ್‌ಐಆರ್‌ಡಿ ಹಾಗೂ ಪಿಆರ್‌ನ ರಾಜ್ಯ ಸಂಪನ್ಮೂಲ ವ್ಯಕ್ತಿಗಳಾದ ಮೋಹನ್ ಕುಮಾರ್ ಅವರು ಉಪನ್ಯಾಸ ನೀಡಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಲಕ್ಷ್ಮೀದೇವಿ ಅವರು ಸ್ವಾಗತಿಸಿ, ಪ್ರತಿಜ್ಞಾ ವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ಜಿ.ಪಂ. ಸಹಾಯಕ ಕಾರ್ಯದರ್ಶಿ ಶಿವಕುಮಾರ್, ಶಾಂತ ಜೀವ ಜ್ಯೋತಿ ಕಾರ್ಯದರ್ಶಿ ಷಣ್ಮುಗಂ ಸುಂದರಂ, ರಾಮನಗರ ಟೌನಿನ ವೃತ್ತ ನಿರೀಕ್ಷಕ ರಮೇಶ್, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಪ್ರಮಿಳ, ಕಾಂತರಾಜು, ವೇಣುಗೋಪಾಲ್, ನಾರಾಯಣ್ ಸೇರಿದಂತೆ ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಇತರರು ಕಾರ್ಯಕ್ರಮದಲ್ಲಿದ್ದರು.

02/08/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಕಾನ್‌ಸ್ಟೇಬಲ್ ಪರೀಕ್ಷೆ; ಅಕ್ರಮ ತಡೆಗೆ ಬಿಗಿ ಭದ್ರತೆ, ಸಿಸಿಟಿವಿ ಕಣ್ಗಾವಲು



ಕೋಲಾರ

ಜಿಲ್ಲೆಯಲ್ಲಿ ಆ. 2ರಂದು ನಡೆಯಲಿರುವ ಪೊಲೀಸ್ ಕಾನ್‌ಸ್ಟೇಬಲ್ ಹುದ್ದೆಗಳ ನೇಮಕಾತಿ ಪರೀಕ್ಷೆಯನ್ನು ಅತ್ಯಂತ ಪಾರದರ್ಶಕ ಹಾಗೂ ಸುಗಮವಾಗಿ ನಡೆಸಲು ಜಿಲ್ಲಾಡಳಿತ ಸಕಲ ಸಿದ್ಧತೆ ಕೈಗೊಂಡಿದೆ. ಈ ಕುರಿತು ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಅವರ ಅಧ್ಯಕ್ಷತೆಯಲ್ಲಿ ಗುರುವಾರ ನಡೆದ ಪರೀಕ್ಷಾ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಯಿತು.

ಪರೀಕ್ಷೆಯು ಆ.2ರಂದು ಬೆಳಗ್ಗೆ 10:30 ರಿಂದ ಮಧ್ಯಾಹ್ನ 12:00 ರವರೆಗೆ ನಡೆಯಲಿದ್ದು, ಜಿಲ್ಲೆಯಾದ್ಯಂತ ಒಟ್ಟು 16 ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾಗಿದೆ. ಈ ಬಾರಿ ಒಟ್ಟು 6,704 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದು, ಪರೀಕ್ಷಾ ಕಾರ್ಯಗಳ ಮೇಲ್ವಿಚಾರಣೆಗಾಗಿ 16 ಜನ ವೀಕ್ಷಕರನ್ನು ನೇಮಕ ಮಾಡಲಾಗಿದೆ. ಅಭ್ಯರ್ಥಿಗಳಿಗೆ ಕುಡಿಯುವ ನೀರು, ಶೌಚಾಲಯ ಹಾಗೂ ಅವರ ವಸ್ತುಗಳನ್ನು ಇಡಲು ಪ್ರತ್ಯೇಕ ಕೊಠಡಿಯ ವ್ಯವಸ್ಥೆ ಕಲ್ಪಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಪರೀಕ್ಷಾ ಅಕ್ರಮಗಳನ್ನು ತಡೆಯಲು ಎಲ್ಲಾ 16 ಪರೀಕ್ಷಾ ಕೇಂದ್ರಗಳಲ್ಲಿ ಶೇಕಡಾ 100ರಷ್ಟು ಸಿಸಿಟಿವಿ ಕ್ಯಾಮೆರಾಗಳನ್ನು ಕಡ್ಡಾಯವಾಗಿ ಅಳವಡಿಸಲಾಗುತ್ತಿದ್ದು, ಸಿಸಿಟಿವಿ ಇಲ್ಲದ ಕೇಂದ್ರಗಳಿಗೆ ಪೊಲೀಸ್ ಇಲಾಖೆಯಿಂದಲೇ ಅನುದಾನ ಒದಗಿಸಲಾಗುವುದು. ಜೊತೆಗೆ, ಎಲೆಕ್ಟ್ರಾನಿಕ್ ಉಪಕರಣಗಳ ದುರ್ಬಳಕೆ ತಡೆಯಲು ಮೊಬೈಲ್ ಜಾಮರ್ ಅಳವಡಿಕೆ ಹಾಗೂ ಪ್ರವೇಶ ದ್ವಾರದಲ್ಲಿ ಫೇಸ್ ರೆಕಗ್ನಿಷನ್ ತಂತ್ರಾಂಶದ ಮೂಲಕ ಮೂರು ಹಂತದ ಕಟ್ಟುನಿಟ್ಟಿನ ತಪಾಸಣೆ ನಡೆಸಲಾಗುವುದು ಎಂದು ಅವರು ತಿಳಿಸಿದರು. ಪರೀಕ್ಷಾ ಕೇಂದ್ರದೊಳಗೆ ಮೊಬೈಲ್ ತರುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳಿಗೆ ಕಟ್ಟುನಿಟ್ಟಿನ ವಸ್ತ್ರಸಂಹಿತೆ ಜಾರಿಗೊಳಿಸಲಾಗಿದೆ. ಅಭ್ಯರ್ಥಿಗಳು ಪೂರ್ಣ ತೋಳಿನ ಶರ್ಟ್ ಧರಿಸುವಂತಿಲ್ಲ, ಮುಖ, ಕಿವಿ ಅಥವಾ ತಲೆ ಮುಚ್ಚುವಂತಹ ಉಡುಪು ಹಾಗೂ ಶೂಗಳನ್ನು ಧರಿಸುವುದನ್ನು ನಿಷೇಧಿಸಲಾಗಿದೆ. ಸಾಮಾನ್ಯ ಚಪ್ಪಲಿಗಳಿಗೆ ಮಾತ್ರ ಅವಕಾಶವಿದ್ದು, ಮಂಗಳಸೂತ್ರ ಮತ್ತು ಮೂಗುತಿಯನ್ನು ಹೊರತುಪಡಿಸಿ ಬೇರೆ ಯಾವುದೇ ಲೋಹದ ಆಭರಣಗಳನ್ನು ಧರಿಸುವಂತಿಲ್ಲ. ಪರೀಕ್ಷಾ ಕಾರ್ಯಕ್ಕೆ ನಿಯೋಜನೆಗೊಂಡಿರುವ ಸಿಬ್ಬಂದಿ ಅಭ್ಯರ್ಥಿಗಳೊಂದಿಗೆ ಸೌಜನ್ಯದಿಂದ ವರ್ತಿಸಬೇಕು ಹಾಗೂ ಯಾವುದೇ ಭೀತಿ ಹುಟ್ಟಿಸುವ ವಾತಾವರಣ ನಿರ್ಮಿಸಬಾರದು. ಪರೀಕ್ಷಾ ಕೇಂದ್ರದಲ್ಲಿ ಆರೋಗ್ಯ ಸಹಾಯಕರನ್ನು ತುರ್ತು ಔಷಧಗಳೊಂದಿಗೆ ಒದಗಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಸಭೆಯಲ್ಲಿ ನಿರ್ದೇಶನ ನೀಡಿದರು.

ಪರೀಕ್ಷಾ ಕೇಂದ್ರದ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗುವುದು. ಪರೀಕ್ಷಾ ಕೇಂದ್ರ ಸಂಪೂರ್ಣದಲ್ಲಿ ಸಂಪೂರ್ಣ ವೆಬ್‌ಕ್ಯಾಸ್ಟ್ ಮಾಡಲು ಪೊಲೀಸ್ ಇಲಾಖೆಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್, ಅಪರ ಜಿಲ್ಲಾಧಿಕಾರಿ ಎಸ್. ಎಂ. ಮಂಗಳ, ಉಪವಿಭಾಗಾಧಿಕಾರಿ ಜಂಬಗಿ ರೇಣುಕಾ ಪ್ರಸಾದ್ ದಿಲೀಪ್, ಕೃಷಿ ಜಂಟಿ ನಿರ್ದೇಶಕಿ ಮಂಜುಳ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಮೈಲರಪ್ಪ, ತೋಟಗಾರಿಕೆ ಉಪನಿರ್ದೇಶಕ ಕುಮಾರ ಸ್ವಾಮಿ, ಜಿಲ್ಲಾ ಖಜಾನೆ ಉಪನಿರ್ದೇಶಕ ಮಹೇಂದ್ರ, ಪದವಿ ಪೂರ್ವ ಕಾಲೇಜು ಶಿಕ್ಷಣ ಉಪನಿರ್ದೇಶಕ ರಾಜಶೇಖರ್ ಪಟ್ಟಣಶೆಟ್ಟಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಎನ್. ವಿಜಯಲಕ್ಷ್ಮಿ ಸೇರಿದಂತೆ ಎಲ್ಲಾ ನೋಡಲ್ ಅಧಿಕಾರಿಗಳು, ನಿಯೋಜಿತ ಅಧಿಕಾರಿಗಳು ಉಪಸ್ಥಿತರಿದ್ದರು.

# 5 ನಿಮಿಷದಲ್ಲಿ ಸ್ಪಂದಿಸಿದ ಪೊಲೀಸರ ಕಾರ್ಯಕ್ಕೆ ಸಾರ್ವಜನಿಕರ ಮೆಚ್ಚುಗೆ



ವಿಜಯಪುರ

ಪಟ್ಟಣದ ಬಸ್ ನಿಲ್ದಾಣದಲ್ಲಿ ಮಹಿಳೆಯರು ಸಹಾಯಕ್ಕಾಗಿ ಅಕ್ಕ ಪಡೆಯ ಸಿಬ್ಬಂದಿಗೆ ಕರೆ ಮಾಡಿದ ಕೂಡಲೇ ಕೇವಲ ಐದು ನಿಮಿಷಗಳಲ್ಲಿ ಸ್ಥಳಕ್ಕೆ ಆಗಮಿಸಿ ಸ್ಪಂದಿಸಿದ ಪೊಲೀಸ್ ಸಿಬ್ಬಂದಿಯ ಕಾರ್ಯ ವೈಖರಿಗೆ ಸಾರ್ವಜನಿಕರಿಂದ ಭಾರಿ ಪ್ರಶಂಸೆ ವ್ಯಕ್ತವಾಗಿದೆ.

ಗುರುವಾರ ಬೆಳಿಗ್ಗೆ ಬಸ್ ನಿಲ್ದಾಣದಲ್ಲಿ ಕೆಲ ಮಹಿಳೆಯರಿಗೆ ತೊಂದರೆ ಉಂಟಾದ ಹಿನ್ನೆಲೆಯಲ್ಲಿ ಅವರು ತಕ್ಷಣ ಅಕ್ಕ ಪಡೆ ಸಹಾಯವಾಣಿಗೆ ಕರೆ ಮಾಡಿದ್ದಾರೆ. ಕರೆ ಬಂದ ತಕ್ಷಣವೇ ಕಾರ್ಯಪ್ರವೃತ್ತರಾದ ಅಕ್ಕ ಪಡೆಯ ಮಹಿಳಾ ಪೊಲೀಸ್ ಸಿಬ್ಬಂದಿ ಕೇವಲ ಐದು ನಿಮಿಷದಲ್ಲಿ ಸ್ಥಳಕ್ಕೆ ಧಾವಿಸಿ, ಕರೆ ಮಾಡಿದ ಮಹಿಳೆಯರ ಯೋಗಕ್ಷೇಮ ವಿಚಾರಿಸಿದರು.

ಅಷ್ಟೇ ಅಲ್ಲದೆ, ಅಲ್ಲಿದ್ದ ಇತರೆ ಮಹಿಳಾ ಪ್ರಯಾಣಿಕರಿಗೂ ಧೈರ್ಯ ತುಂಬಿ, ಯಾವುದೇ ಸಂದರ್ಭದಲ್ಲಿ, ಯಾವುದೇ ಸಮಯದಲ್ಲಿ ತೊಂದರೆ ಉಂಟಾದಲ್ಲಿ ತಕ್ಷಣ 112 ಅಥವಾ ಅಕ್ಕ ಪಡೆ ಸಹಾಯವಾಣಿಗೆ ಕರೆ ಮಾಡುವಂತೆ ಜಾಗೃತಿ ಮೂಡಿಸಿದರು. ಮಹಿಳೆಯರ ಸುರಕ್ಷತೆಗಾಗಿ ಪೊಲೀಸ್ ಇಲಾಖೆ ಸದಾ ಸನ್ನದ್ಧವಾಗಿದೆ ಎಂದು ಭರವಸೆ ನೀಡಿದರು.

ಮಹಿಳೆಯರ ರಕ್ಷಣೆಗೆ ಅತ್ಯಂತ ತ್ವರಿತವಾಗಿ ಸ್ಪಂದಿಸಿ, ಮಾನವೀಯತೆಯಿಂದ ವರ್ತಿಸಿದ ಅಕ್ಕ ಪಡೆಯ ಸಿಬ್ಬಂದಿಯ ಈ ಕಾರ್ಯಕ್ಕೆ ಬಸ್ ನಿಲ್ದಾಣದಲ್ಲಿದ್ದ ಪ್ರಯಾಣಿಕರು ಹಾಗೂ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಸಾಯಿಬಾಬಾ ಮಂದಿರಕ್ಕೆ

## ಶಾಸಕ ಡಾ.ಎಂ.ಸಿ ಸುಧಾಕರ್ ಭೇಟಿ



ಚಿಂತಾಮಣಿ

ಗುರುಪೂರ್ಣಿಮೆ ಪ್ರಯುಕ್ತ ತಾಲ್ಲೂಕಿನ ಬಾರ್ಲಹಳ್ಳಿ ಕ್ರಾಸ್ ಬಳಿ ಇರುವ ಸಾಯಿಬಾಬಾ ದೇವಸ್ಥಾನಕ್ಕೆ ಮಾಜಿ ಉನ್ನತ ಶಿಕ್ಷಣ ಸಚಿವರು ಹಾಗೂ ಶಾಸಕರು ಆದ ಡಾ.ಎಂ.ಸಿ.ಸುಧಾಕರ್ ರವರು ಭೇಟಿ ನೀಡಿ ಸ್ವಾಮಿಯ ದರ್ಶನ ಪಡೆದು ಆಶೀರ್ವಾದ ಪಡೆದರು.

ಬಳಿಕ ವಾರದಿಗಾರರೊಂದಿಗೆ ಮಾತನಾಡಿ, ನಾನು 2023ರಲ್ಲಿ ಶಾಸಕನಾದೆ. ಆದರೆ ಆಗ ನಾನು ಸಚಿವನಾಗುತ್ತೇನೆಂದು ಊಹಿಸಿರಲಿಲ್ಲ. ಕ್ಷೇತ್ರದ ಜನರ ಆಶೀರ್ವಾದದಿಂದ ನಾನು ಮಂತ್ರಿಯಾದೆ ಕಾಂಗ್ರೆಸ್ ಪಕ್ಷವು ನನಗೆ ಉನ್ನತ ಶಿಕ್ಷಣ ಇಲಾಖೆ ಸಚಿವರನ್ನಾಗಿ ಮಾಡಿದರು.

ಮೂರು ವರ್ಷಗಳು ರಾಜ್ಯದಲ್ಲಿ ಉತ್ತಮ ಆಡಳಿತ ನಡೆಸಿದ್ದೇನೆ. ಕ್ಷೇತ್ರದಲ್ಲಿಯೂ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದೇನೆ. ಈಗಲೂ ಸಚಿವಕಾಂಕ್ಷಿಯಾಗಿದ್ದು ಮತ್ತೆಯೂ ಸಚಿವ ಸ್ಥಾನ ಕೊಟ್ಟರೆ ರಾಜ್ಯದಲ್ಲಿ ಒಳ್ಳೆಯ ಅಭಿವೃದ್ಧಿ ಕೆಲಸಗಳನ್ನು ಮಾಡುತ್ತೇನೆ. ಇಲ್ಲವಾದರೆ ಈಗಾಗಲೇ ಕ್ಷೇತ್ರಕ್ಕೆ ಅನುಧಾನ ತಂದಿದ್ದು, ಕಾಮಗಾರಿಗಳು ಉತ್ತಮ ಗುಣಮಟ್ಟದಿಂದ ನಡೆಯುವಂತೆ ನೋಡಿಕೊಳ್ಳುತ್ತೇನೆಂದರು. ಈಗಾಗಲೇ ಈ ದೇವಾಲಯದ ಅಭಿವೃದ್ಧಿಗೆ ಐದು ಲಕ್ಷ ನೀಡಿರುವುದಾಗಿ ಡಾ.ಎಂ.ಸಿ ಸುಧಾಕರ್ ಹೇಳಿದರು.

ಕಾಲ ಕಾಲಕ್ಕೆ ಉತ್ತಮ ಮಳೆಯಾಗಿ ಸಮೃದ್ಧ ಬೆಳೆ ಬೆಳೆದು ಸರ್ವಜನರು ಶಾಂತಿ ನೆಮ್ಮದಿಯ ಜೀವನ ನಡೆಸಲು ಬಾಬಾರವರಲ್ಲಿ ಬೇಡಿರುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಸಮಾಜ ಸೇವಕರಾದ ವೆಂಕಟೇಶ್ ರೆಡ್ಡಿ, ದಿಲೀಪ್ ಕುಮಾರ್, ವಿಷ್ಣುವರ್ಧನ್, ಶ್ರೀರಾಮರೆಡ್ಡಿ, ಮಧು, ಮಂಜುನಾಥ್, ಲಾವಣ್ಯ, ನಾಗಮ್ಮ, ನರಸಿಂಹಪ್ಪ ಸಾಯಿಬಾಬಾ ಟ್ರಸ್ಟಿನ ಪದಾಧಿಕಾರಿಗಳು,ಭಕ್ತರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಹಾಜರಿದ್ದರು.

# ಕಾಂಗ್ರೆಸ್ ಪಕ್ಷ ಮತ್ತೆ ಅಧಿಕಾರಕ್ಕೆ ತರುವುದೇ ಗುರಿ: ಆದಿನಾರಾಯಣ

ಮುಳಬಾಗಿಲು

ಕಾಂಗ್ರೆಸ್ ಪಕ್ಷವನ್ನು ತಳಮಟ್ಟದಿಂದ ಸಂಘಟನೆ ಮಾಡಿ ಮತ್ತಷ್ಟು ಬಲಪಡಿಸಿ ಕಾರ್ಯಕರ್ತರನ್ನು ಸಂಘಟಿಸಿ ಮುಂದಿನ ದಿನಗಳಲ್ಲಿ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರ ಮಾರ್ಗದರ್ಶನ ಸಹಕಾರದಿಂದ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವುದೇ ನಮ್ಮ ಉದ್ದೇಶ ಎಂದು ಆವಣಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ 2023 ರ ಕಾಂಗ್ರೆಸ್ ಅಭ್ಯರ್ಥಿ ವಿ ಆದಿನಾರಾಯಣ ತಿಳಿಸಿದರು.



ನಗರದ ಹೊರವಲಯದ ಕಾಂಗ್ರೆಸ್ ಕಚೇರಿ ಬಳಿ ಕಾಂಗ್ರೆಸ್ ಪಕ್ಷದಿಂದ ಹಮ್ಮಿಕೊಂಡಿದ್ದ ಸಂಘಟನಾ ಸೃಜನ್ ಅಭಿಯಾನ ಹಾಗೂ ಕಾಂಗ್ರೆಸ್ ಜಿಲ್ಲಾಧ್ಯಕ್ಷರ ಆಯ್ಕೆಗೆ ಮುಖಂಡರ ಮತ್ತು ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ ನಮ್ಮ ಕಾಂಗ್ರೆಸ್ ಪಕ್ಷದ ರಾಷ್ಟ್ರ ನಾಯಕರಾದ ರಾಹುಲ್ ಗಾಂಧಿಯವರು ಭಾರತ್ ಜೋಡೋ ಮೂಲಕ ದೇಶಾದ್ಯಂತ ಪಾದಯಾತ್ರೆ ಮೂಲಕ ಸಂಘಟನೆ ಮಾಡಿ , ಅವರು ಭಾರತ್ ಜೋಡೋ ಮೂಲಕ ಸಂಚರಿಸಿದ ಎಲ್ಲಾ ಪ್ರದೇಶಗಳಲ್ಲಿ ಹೆಚ್ಚಿನ ಕಾಂಗ್ರೆಸ್ ಅಭ್ಯರ್ಥಿಗಳು ಜಯಗಳಿಸಿರುತ್ತಾರೆ. ಆದ್ದರಿಂದ ಮುಂದಿನ ದಿನಗಳಲ್ಲಿ ನಾವೆಲ್ಲರೂ ಸೇರಿ ತಳಮಟ್ಟದಿಂದ ಪಕ್ಷವನ್ನು ಸಂಘಟನೆ ಮಾಡಿ ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡೋಣ ಎಂದು ತಿಳಿಸಿದರು.

ನಮ್ಮ ರಾಜ್ಯದ ಕಾಂಗ್ರೆಸ್ ಪಕ್ಷದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಾಜ್ಯದ ಅಭಿವೃದ್ಧಿಗಾಗಿ ಪಕ್ಷ ಸಂಘಟನೆಗಾಗಿ ಸದಾ ಕಾಲ 24 ಗಂಟೆಗಳ ಕಾಲ ಕೆಲಸ ಮಾಡುತ್ತಿದ್ದಾರೆ ಅವರ ಹಾದಿಯಲ್ಲಿ ನಾವೆಲ್ಲರೂ ಸೇರಿ ಪಕ್ಷವನ್ನು ಕಟ್ಟೋಣ ಎಂದು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

ರಾಷ್ಟ್ರೀಯ ಕಾಂಗ್ರೆಸ್ ಉಸ್ತುವಾರಿಗಳು ಹಾಗೂ ರಾಜ್ಯದ ಕಾಂಗ್ರೆಸ್ ಉಸ್ತುವಾರಿಗಳು ಇಂದು ನಮ್ಮ ಮುಳಬಾಗಿಲು ಕಾಂಗ್ರೆಸ್ ಕಚೇರಿಯಲ್ಲಿ ಕೋಲಾರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಆಯ್ಕೆಗೆ ಮುಖಂಡರ ಮತ್ತು ಕಾಂಗ್ರೆಸ್ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಣ ಕಾರ್ಯಕ್ರಮದಲ್ಲಿ ಭಾಗವಹಿಸಿ ನಮಗೆಲ್ಲ ಮಾರ್ಗದರ್ಶನ ನೀಡಿರುತ್ತಾರೆ ಅವರ ನಿರ್ದೇಶನದಂತೆ ನಮ್ಮ ತಾಲೂಕಿನ ಎಲ್ಲಾ ಮುಖಂಡರು ತಮ್ಮ ಅಭಿಪ್ರಾಯವನ್ನು ಜಿಲ್ಲಾಧ್ಯಕ್ಷರ ಆಯ್ಕೆಗೆ ತಿಳಿಸಬಹುದೆಂದು ಎಲ್ಲರಲ್ಲಿ ಮನವಿ ಮಾಡಿದರು.

ಬಳಿಕ ಏಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ರಾಮಕೃಷ್ಣ ಓಜಾ, ಹಾಗೂ ಕೆಪಿಸಿಸಿ ಉಪಾಧ್ಯಕ್ಷರು ಹಾಗೂ ಮಾಜಿ ಶಾಸಕ ಎನ್ ಸಂಪಂಗಿ ಮಾತನಾಡಿದರು. ಈ ಸಂದರ್ಭದಲ್ಲಿ ಏಐಸಿಸಿ ಉಸ್ತುವಾರಿಗಳಾದ ಬೈರದ್ ಸಿಂಗ್, ಹರಿಯಾಣ ಪ್ರಧಾನ ಕಾರ್ಯದರ್ಶಿ ಮಂದೀಪ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ, ಉಸ್ತುವಾರಿ ವೆಂಕಟೇಶ್, ಲಕ್ಷ್ಮೀನಾರಾಯಣ, ಮ್ಯಾಲಕಲ ನಾರಾಯಣಸ್ವಾಮಿ, ಹೇಮಾಮಾಲಿನಿ, ಕೆಪಿಸಿಸಿ ಸದಸ್ಯರಾದ ರಾಮಲಿಂಗಾರೆಡ್ಡಿ, ಉತ್ತನೂರು ಶ್ರೀನಿವಾಸ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಮಾನುಲ್ಲಾ, ಗ್ಯಾರಂಟಿ ಸಮಿತಿ ಅಧ್ಯಕ್ಷ ಉಮಾ ಶಂಕರ್, ಆರ್.ಆರ್. ರಾಜೇಂದ್ರ ಗೌಡ, ಗುಜ್ಜನಹಳ್ಳಿ ಮಂಜುನಾಥ್, ಸಿಪಿಎಂ ಗೋಪಾಲ್, ಸರ್ವಜ್ಞ ಗೌಡ, ಹನುಮನಹಳ್ಳಿ ಸುಬ್ರಮಣಿ, ಕಾರ್ಗಿಲ್ ವೆಂಕಟೇಶ್, ಸುಹಾಸ್ ಶೆಟ್ಟಿ, ಗೊಲ್ಲಹಳ್ಳಿ ವೆಂಕಟೇಶ್, ಮೆಕಾನಿಕ್ ಶ್ರೀನಿವಾಸ್, ಜಬಿ ಉಲ್ಲಾ, ಅಕ್ಮಲ್ ಬೇಗ್, ಛೋಟಾ ಸಾಬ್, ತ್ರಿವೇಣಮ್ಮ, ಶಶಿಕಲಾ, ಮಂಜುಳಾ, ಡಾ. ವೆಂಕಟೇಶ್, ಬೈರಕೂರು ರಾಮಾಂಜಿ, ಯೂಥ್ ಕಾಂಗ್ರೆಸ್ ಸುರೇಶ್, ಅಮರ್, ಎಂ.ಎನ್ ಹಳ್ಳಿ ಗುರುಪ್ರಸಾದ್, ಎಂ.ಎನ್ ಹಳ್ಳಿ ಮಂಜುನಾಥ್, ಗುಮ್ಮಕಲ್ ಮಂಜುನಾಥ್, ಕಾಂಗ್ರೆಸ್ ಮುಖಂಡರು ಕಾರ್ಯಕರ್ತರು ಭಾಗವಹಿಸಿದ್ದರು.

# 'ಬಿಪಿಎಲ್ ಪಡಿತರ ಚೀಟಿ ಮರುಸ್ಥಾಪಿಸಲು ಅನುವು ಮಾಡಿ'

ಕೆಜಿಎಫ್

ಆದಾಯ ತೆರಿಗೆ ಪಾವತಿಸುವವರು, ಹೆಚ್ಚು ಆದಾಯ ಹೊಂದಿರುವವರು ಹಾಗೂ ಆರು ತಿಂಗಳಿಗಿಂತ ಹೆಚ್ಚು ಸಮಯ ಪಡಿತರ ಪಡೆಯದೇ ಇರುವವರ ಪಟ್ಟಿಯನ್ನು ಕೇಂದ್ರ ಸರ್ಕಾರ ಪಟ್ಟಿ ಮಾಡಿ ರಾಜ್ಯ ಸರ್ಕಾರಕ್ಕೆ ನೀಡಿದ ಮೇರೆಗೆ ರಾಜ್ಯದಲ್ಲಿ ಅಸ್ಥಿತ್ವದಲ್ಲಿದ್ದಂತಹ ಬಿಪಿಎಲ್ ಪಡಿತರ ಚೀಟಿಗಳು ಎಪಿಎಲ್‌ಗೆ ಪರಿವರ್ತನೆಯಾಗಿವೆ ಎಂದು ಆಹಾರ ಮತ್ತು ನಾಗರೀಕ ಪೂರೈಕೆ ಇಲಾಖೆ ಜಂಟಿ ನಿರ್ದೇಶಕ ರಾಜಶೇಖರ್ ಹೇಳಿದರು.



ಕೆಜಿಎಫ್ ತಾಲೂಕಿನಾದ್ಯಂತ ಸುಮಾರು 2 ಸಾವಿರ ಪಡಿತರ ಚೀಟಿಗಳು ರದ್ದುಗೊಂಡಿರುವ ಹಿನ್ನಲೆಯಲ್ಲಿ ನಗರಸಭಾ ಸಭಾಂಗಣದಲ್ಲಿ ಆಹಾರ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಜನಸ್ಪಂದನಾ ಕಾರ್ಯಕ್ರಮದಲ್ಲಿ ಮಾತನಾಡಿದರು. ಬಿಪಿಎಲ್‌ನಿಂದ ಎಪಿಎಲ್‌ಗೆ ಪರಿವರ್ತನೆಯಾಗಿರುವ ಪಡಿತರ ಚೀಟಿದಾರರು ಅಗತ್ಯ ದಾಖಲೆಗಳನ್ನು ನೀಡಿ ಪುನಃ ಬಿಪಿಎಲ್ ಪಡಿತರ ಚೀಟಿ ಪಡೆಯಲು ಸರ್ಕಾರ ಅವಕಾಶ ಕೊಟ್ಟಿದ್ದು, ದಾಖಲೆಗಳನ್ನು ಸಲ್ಲಿಸಿ ಬಿಪಿಎಲ್ ಪಡಿತರ ಚೀಟಿಗಳನ್ನು ಪಡೆಯಬಹುದು ಎಂದು ತಿಳಿಸಿದರು.

ತುರ್ತು ವೈದ್ಯಕೀಯ ಚಿಕಿತ್ಸೆ ಪಡೆದುಕೊಳ್ಳುವ ಬಡವರಿಗೂ ಬಿಪಿಎಲ್ ಕಾರ್ಡ್‌ಗಳನ್ನು ಪಡೆದುಕೊಳ್ಳಲು ಅವಕಾಶ ಕಲ್ಪಿಸಿದ್ದು, ಚಿಕಿತ್ಸೆ ಪಡೆಯುತ್ತಿರುವ ಬಗ್ಗೆ ಅಗತ್ಯ ದಾಖಲೆಗಳನ್ನು ಸಲ್ಲಿಸಿ ಬಿಪಿಎಲ್ ಪಡಿತರ ಚೀಟಿ ಪಡೆಯಬಹುದು. ಬಿಪಿಎಲ್ ಕಾರ್ಡ್ ಪಡೆಯಲು ಆದಾಯ ಮಿತಿಯನ್ನು 2.50 ಲಕ್ಷಕ್ಕೆ ಏರಿಸಲು ಸರ್ಕಾರದ ಮಟ್ಟದಲ್ಲಿ ಚರ್ಚೆಯಾಗುತ್ತಿದ್ದು ಆದಷ್ಟು ಶೀಘ್ರವಾಗಿ ಆದೇಶ ಹೊರಬೀಳುವ ಸಾಧ್ಯತೆ ಇದೆ ಎಂದರು.

ಶಾಸಕಿ ರೂಪಕಲಾ ಶಶಿಧರ್ ಮಾತನಾಡಿ, ಕೆಜಿಎಫ್ ತಾಲೂಕಿನಾದ್ಯಂತ ತೀರಾ ಬಡವರಿದ್ದು, ಇಲ್ಲಿಯವರೆಗೆ ಇದ್ದಂತಹ ಬಿಪಿಎಲ್ ಪಡಿತರ ಚೀಟಿಗಳು ರದ್ದಾಗಿರುವುದರಿಂದ ಪಡಿತರ ಚೀಟಿದಾರರು ತೀರಾ ಸಂಕಷ್ಟಕ್ಕೆ ಸಿಲುಕಿದ್ದು, ವಿಶೇಷ ಪ್ರಕರಣವೆಂದು ಪರಿಗಣಿಸಿ ಹಲವು ವಿನಾಯಿತಿ ನೀಡಿ ಬಿಪಿಎಲ್ ಪಡಿತರ ಚೀಟಿ ಮರುಸ್ಥಾಪಿಸಲು ಅನುವು ಮಾಡಿಕೊಡಬೇಕೆಂದು ಆಹಾರ ಇಲಾಖೆಯ ಜಂಟಿ ನಿರ್ದೇಶಕರನ್ನು ಕೋರಿದರು.

ಕಳೆದ 3 ವರ್ಷಗಳಿಂದ ಪಡಿತರ ಚೀಟಿದಾರರಿಗೆ ಯಾವುದೇ ಸಮಸ್ಯೆಗಳು ಉದ್ಭವವಾಗಿರಲಿಲ್ಲ. ಆದರೆ ದಿಢೀರ್ ಎಂದು ಪಡಿತರ ಚೀಟಿಗಳನ್ನು ಏಕೆ ರದ್ದುಪಡಿಸಲಾಗಿದೆ ಎಂದು ಪ್ರಶ್ನಿಸಿದರು.

ಆಹಾರ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ್ ಮಾತನಾಡಿ, 65 ವರ್ಷ ಮೇಲ್ಪಟ್ಟ ವಯೋವೃದ್ಧರು ಒಬ್ಬರೇ ಇದ್ದರೆ ಅಂತಹವರಿಗೆ ಸರ್ಕಾರ ಆಹಾರ ಸುವಿದಾ ಎಂಬ ಯೋಜನೆ ಜಾರಿಗೊಳಿಸಿದ್ದು, ಇದರಡಿಯಲ್ಲಿ ಅವರ ಮನೆ ಬಾಗಿಲಿಗೇ ಪಡಿತರವನ್ನು ನೀಡುವಂತಹ ವ್ಯವಸ್ಥೆಯನ್ನು ಜಾರಿಗೆ ತಂದಿದ್ದು, ಕೆಜಿಎಫ್ ತಾಲೂಕಿನಾದ್ಯಂತ ನ್ಯಾಯ ಬೆಲೆ ಅಂಗಡಿ ಮಾಲಿಕರು ಈಗಾಗಲೇ 280 ಏಕ ವ್ಯಕ್ತಿಗಳ ಪಟ್ಟಿಯನ್ನು ನೀಡಿದ್ದು, ಇನ್ನು ಸರ್ಮಪಕವಾಗಿ ಪರಿಶೀಲನೆ ನಡೆಸಿ ಮಾಹಿತಿಯನ್ನು ನೀಡಬೇಕು ಮತ್ತು ಆಹಾರ ಧಾನ್ಯವನ್ನು ನೀವೇ ನೇರವಾಗಿ ಮನೆಗಳಿಗೆ ತಲುಪಿಸಬೇಕು ಎಂದು ಹೇಳಿದರು.

ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ರಾಧಕೃಷ್ಣರೆಡ್ಡಿ, ನಾಗರಾಜ್, ತಹಶೀಲ್ದಾರ್ ಗಾಯಿತ್ರಿ, ಆಹಾರ ಇಲಾಖೆಯ ಸಹಾಯಕ ನಿರ್ದೇಶಕಿ ಶಾಂತಕುಮಾರಿ, ಆಹಾರ ನಿರೀಕ್ಷಕ ರಘು, ಮೊದಲಾದವರು ಇದ್ದರು.

# ಮತದಾರರ ಪಟ್ಟಿ ಪರಿಷ್ಕರಣೆ

## ನಮೂನೆಗಳ ವಿತರಣೆ 100% ಪೂರ್ಣ, 85.30% ಡಿಜಿಟಲೀಕರಣ ಸಂಪನ್ನ

ಕೋಲಾರ

ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯು ಗುರುವಾರ ಮಧ್ಯಾಹ್ನ 04:00 ಗಂಟೆಯವರೆಗಿನ 'ಮತದಾರರ ಪಟ್ಟಿ ಪರಿಷ್ಕರಣೆ ನಮೂನೆಗಳ' (Enumeration Forms) ವಿತರಣೆ ಮತ್ತು ಡಿಜಿಟಲೀಕರಣದ ದೈನಂದಿನ ಪ್ರಗತಿ ವರದಿಯನ್ನು ಬಿಡುಗಡೆ ಮಾಡಿದೆ. 16 ಜೂನ್ 2026 ರ ಅಂಕಿ–ಅಂಶಗಳ ಪ್ರಕಾರ, ಕೋಲಾರ ಜಿಲ್ಲೆಯಾದ್ಯಂತ ಒಟ್ಟು 12,95,265 ಮತದಾರರಿದ್ದಾರೆ. ಈ ಎಲ್ಲ ಮತದಾರರಿಗೆ ಸಂಬಂಧಿಸಿದಂತೆ ಪರಿಷ್ಕರಣೆ ನಮೂನೆಗಳನ್ನು ಮುದ್ರಿಸಿ ಬೂತ್ ಮಟ್ಟದ ಅಧಿಕಾರಿಗಳಿಗೆ (BLOs) ತಲುಪಿಸಲಾಗಿದೆ.

ಕೋಲಾರ ಜಿಲ್ಲೆಯಲ್ಲಿ ಒಟ್ಟು 12,95,265 ನಮೂನೆಗಳನ್ನು ವಿತರಿಸುವ ಮೂಲಕ ಶೇ. 100 ರಷ್ಟು ವಿತರಣಾ ಗುರಿಯನ್ನು ಸಾಧಿಸಲಾಗಿದೆ. ಈ ವಿತರಿಸಲಾದ ನಮೂನೆಗಳ ಪೈಕಿ 11,04,920 ನಮೂನೆಗಳ ಡಿಜಿಟಲೀಕರಣ ಕಾರ್ಯ ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಶೇ. 85.30 ರಷ್ಟು ಸಾಧನೆಯಾಗಿದೆ. ಇದರ ಜೊತೆಗೆ, ಆನ್‌ಲೈನ್ ಮುಖಾಂತರ ಮತದಾರರು ಸ್ವಯಂ ಆಗಿ 6,272 (ಶೇ. 0.48) ನಮೂನೆಗಳನ್ನು ಸಲ್ಲಿಸಿದ್ದಾರೆ.

ಜಿಲ್ಲೆಯಾದ್ಯಂತ ಒಟ್ಟು 1,41,298 ಮತದಾರರನ್ನು ಎಎಸ್‌ಡಿಡಿಓ (ASDDO) ಅಂದರೆ ಗೈರು, ಮರಣ, ಸ್ಥಳಾಂತರ ಹಾಗೂ ನಕಲಿ ಎಂದು ಗುರುತಿಸಲಾಗಿದೆ. ಈ ಪೈಕಿ 27,772 ಮೃತಪಟ್ಟ ಮತದಾರರು, 73,550 ಖಾಯಂ ಆಗಿ ಸ್ಥಳಾಂತರಗೊಂಡವರು, 14,757 ಈಗಾಗಲೇ ನೋಂದಾಯಿತರಾದವರು, 24,034 ಲಭ್ಯವಿಲ್ಲದ ಅಥವಾ ಗೈರುಹಾಜರಾದವರು ಹಾಗೂ 1,185 ಇತರೆ ಕಾರಣಗಳಿಗೆ ಸೇರಿದ ಮತದಾರರಾಗಿದ್ದಾರೆ.

ವಿಧಾನಸಭಾ ಕ್ಷೇತ್ರವಾರು ಪ್ರಗತಿಯನ್ನು ಗಮನಿಸುವುದಾದರೆ, ಶ್ರೀನಿವಾಸಪುರದಲ್ಲಿ ಒಟ್ಟು 2,19,027 ನಮೂನೆಗಳನ್ನು ವಿತರಿಸಿ 1,94,207 ನಮೂನೆಗಳನ್ನು ಡಿಜಿಟಲೀಕರಿಸಲಾಗಿದೆ. ಮುಳಬಾಗಿಲು ಕ್ಷೇತ್ರದಲ್ಲಿ 2,24,684 ನಮೂನೆಗಳ ವಿತರಣೆಯಾಗಿದ್ದು, 1,95,239 ನಮೂನೆಗಳ ಡಿಜಿಟಲೀಕರಣ ಪೂರ್ಣಗೊಂಡಿದೆ. ಕೆ.ಜಿ.ಎಫ್ ಕ್ಷೇತ್ರದಲ್ಲಿ 2,01,274 ನಮೂನೆಗಳನ್ನು ವಿತರಿಸಿ 1,60,827 ನಮೂನೆಗಳನ್ನು ಡಿಜಿಟಲೀಕರಿಸಲಾಗಿದೆ. ಅಂತೆಯೇ ಬಂಗಾರಪೇಟೆಯಲ್ಲಿ 2,12,696 ವಿತರಣೆಯಾಗಿದ್ದು 1,78,113 ನಮೂನೆಗಳನ್ನು ಡಿಜಿಟಲೀಕರಿಸಲಾಗಿದೆ. ಕೋಲಾರದಲ್ಲಿ 2,42,034 ವಿತರಣೆಯಾಗಿದ್ದು 2,03,717 ನಮೂನೆಗಳನ್ನು ಹಾಗೂ ಮಾಲೂರಿನಲ್ಲಿ 1,95,550 ನಮೂನೆಗಳನ್ನು ವಿತರಿಸಿ 1,72,817 ನಮೂನೆಗಳ ಡಿಜಿಟಲೀಕರಣ ಕಾರ್ಯವನ್ನು ಮುಕ್ತಾಯಗೊಳಿಸಲಾಗಿದೆ.

ಉಳಿದಿರುವ ನಮೂನೆಗಳ ಡಿಜಿಟಲೀಕರಣ ಪ್ರಕ್ರಿಯೆಯು ತ್ವರಿತಗತಿಯಲ್ಲಿ ಸಾಗುತ್ತಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯ ಪ್ರಕಟಣೆ ತಿಳಿಸಿದೆ.

# ರಸ್ತೆ ವಿಸ್ತರಣೆ ಅವ್ಯವಸ್ಥೆ: ಮಣ್ಣಿನ ರಾಶಿಯಿಂದ ವಾಹನ ಸಂಚಾರಕ್ಕೆ ತೊಡಕು



ವಿಜಯಪುರ

ಪಟ್ಟಣದಲ್ಲಿ ನಡೆಯುತ್ತಿರುವ ರಸ್ತೆ ವಿಸ್ತರಣೆ ಕಾಮಗಾರಿ ಅವೈಜ್ಞಾನಿಕವಾಗಿ ನಡೆಯುತ್ತಿದ್ದು, ಶಿವ ಗಣೇಶ ಸರ್ಕಲ್ ಬಳಿ ರಸ್ತೆಗೆ ಅಡ್ಡಲಾಗಿ ಮಣ್ಣು ಸುರಿದಿರುವುದರಿಂದ ವಾಹನ ಸಂಚಾರ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ.

ಚಿಕ್ಕಬಳ್ಳಾಪುರ ಕಡೆಯಿಂದ ಬರುವ ವಾಹನಗಳು ಸರ್ಕಲ್ ದಾಟಲು ಸಾಧ್ಯವಾಗುತ್ತಿಲ್ಲ. ರಸ್ತೆಯ ಮಧ್ಯೆ ಹಾಕಿರುವ ಮಣ್ಣಿನ ದಿಬ್ಬದ ಬಳಿಯೇ ಭಾರೀ ವಾಹನಗಳು ಸಿಲುಕಿಕೊಳ್ಳುತ್ತಿವೆ. ಇಂದು ಬೆಳಗ್ಗೆಯಿಂದಲೇ ಒಂದು ಭಾರೀ ಲಾರಿ ಮಣ್ಣಿನಲ್ಲಿ ಸಿಲುಕಿಕೊಂಡು ಗಂಟೆಗಟ್ಟಲೆ ಪರದಾಡುವಂತಾಯಿತು. ಲಾರಿ ಹೊರತೆಗೆಯಲು ಕಾರ್ಮಿಕರು ಮಣ್ಣು ತೆರವುಗೊಳಿಸಿ ಹರಸಾಹಸ ಪಡಬೇಕಾಯಿತು.

ದ್ವಿಚಕ್ರ ವಾಹನ ಸವಾರರು, ಆಟೋ, ಕಾರುಗಳ ಸಂಚಾರಕ್ಕೂ ತೀವ್ರ ತೊಂದರೆಯಾಗಿದೆ. ಕಾಮಗಾರಿ ನಡೆಯುವ ಸ್ಥಳದಲ್ಲಿ ಯಾವುದೇ ಸೂಚನಾ ಫಲಕ, ಬ್ಯಾರಿಕೇಡ್ ಅಥವಾ ಪರ್ಯಾಯ ವ್ಯವಸ್ಥೆ ಮಾಡದಿರುವುದು ಸ್ಥಳೀಯರ ಆಕ್ರೋಶಕ್ಕೆ ಕಾರಣವಾಗಿದೆ.

ಕಾಮಗಾರಿ ಆರಂಭ ಮಾಡಿ, ತಿಂಗಳುಗಟ್ಟಲೇ ಕಾಮಗಾರಿ ವಿಳಂಬ ಮಾಡಿದರೆ, ರಸ್ತೆಗಳ ಬದಿಯಲ್ಲಿರುವ ವ್ಯಾಪಾರಿಗಳ ಗತಿಯೇನು? ಅಂಗಡಿಗಳ ಬಾಡಿಗೆ ಕಟ್ಟುವುದು ಹೇಗೆ? ಕುಟುಂಬಗಳ ಜೀವನ ನಿರ್ವಹಣೆ ಮಾಡುವುದು ಹೇಗೆ? ತ್ವರಿತವಾಗಿ ಕಾಮಗಾರಿ ಮುಗಿಸಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಧೂಳಿನ ಮಜ್ಜನ: ರಸ್ತೆಯನ್ನು ಅಗೆದು, ಹಾಗೆ ಬಿಟ್ಟಿರುವ ಕಾರಣ, ಗಾಳಿಯಿಂದ ಹೊರಬರುವ ಧೂಳು ಅಂಗಡಿಗಳ ಒಳಗೆ ತುಂಬಿಕೊಳ್ಳುತ್ತಿದೆ. ಇದರಿಂದ ವ್ಯಾಪಾರ ವಹಿವಾಟು ಇಲ್ಲದೆ ನಾವು ತಿಂಗಳಿನಿಂದ ನಷ್ಟವನ್ನು ಅನುಭವಿಸುತ್ತಿದ್ದೇವೆ ಎಂದು ವ್ಯಾಪಾರಿಗಳಾದ ಭಾಸ್ಕರ್ ಬಾಬು, ಹರೀಶ್ ಕುಮಾರ್, ಸುಭ್ರಮಣಿ ಅವರು ಆಕ್ರೋಶ ವ್ಯಕ್ತಪಡಿಸಿದರು.

ಕೂಡಲೇ ಸಂಬಂಧಪಟ್ಟ ಲೋಕೋಪಯೋಗಿ ಇಲಾಖೆ ಹಾಗೂ ಗುತ್ತಿಗೆದಾರರು ರಸ್ತೆಗೆ ಅಡ್ಡಲಾಗಿ ಹಾಕಿರುವ ಮಣ್ಣನ್ನು ತೆರವುಗೊಳಿಸಿ, ಸುಗಮ ಸಂಚಾರಕ್ಕೆ ಅವಕಾಶ ಮಾಡಿಕೊಡಬೇಕು ಎಂದು ಸ್ಥಳೀಯರು ಹಾಗೂ ವಾಹನ ಸವಾರರು ಒತ್ತಾಯಿಸಿದ್ದಾರೆ.

# ಜಂಗಮಕೋಟೆ ಭೂಸ್ವಾಧೀನ ವಿರುದ್ಧದ ಧರಣಿ 136ನೇ ದಿನಕ್ಕೆ

ಚಿಕ್ಕಬಳ್ಳಾಪುರ

ತಾಲೂಕು ಜಂಗಮಕೋಟೆ ಹೋಬಳಿಯ 13 ಹಳ್ಳಿಗಳ ರೈತರ ಒಟ್ಟು 2823 ಎಕರೆ ಫಲವತ್ತಾದ ಕೃಷಿ ಭೂಮಿಯನ್ನ ಕೆಐಎಡಿಬಿ ಮೂಲಕ ರಾಜ್ಯ ಸರ್ಕಾರ ಕೈಗಾರಿಕೆಗೆ ಸ್ವಾಧೀನ ಪಡಿಸಿಕೊಳ್ಳಲು ಹೊರಟಿರುವುದು ರೈತರಲ್ಲಿ ತೀವ್ರ ಆಕ್ರೋಶ ಮತ್ತು ಆತಂಕವನ್ನು ಉಂಟು ಮಾಡಿದೆ ಎಂದು ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಗೌರವಾಧ್ಯಕ್ಷ ರವಿಕೃಷ್ಣರೆಡ್ಡಿ ರಾಜ್ಯ ಸರ್ಕಾರದ ವಿರುದ್ಧ ಕಿಡಿ ಕಾರಿದರು.



ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಕಳೆದ 136 ದಿನಗಳಿಂದ ನಿರಂತರ ಹೋರಾಟದಲ್ಲಿ ತೊಡಗಿರುವ ಜಂಗಮ ಕೋಟೆ ಭೂಸ್ವಾಧೀನ ವಿರೋಧಿ ಹೋರಾಟ ಸಮಿತಿಯ ವೇದಿಕೆಯಲ್ಲಿ ರೈತರ ಹೋರಾಟಕ್ಕೆ ಬೆಂಬಲ ನೀಡಿ ಮಾತನಾಡಿದ ಅವರು, ರೈತರು ನಾವಾಗಿದ್ದರೂ ಇಂದು ರೈತರಾಗಿಲ್ಲ, ನಾವು ಭೂಮಿಗೆ ಹಾಕುತ್ತಿರುವ ಗೊಬ್ಬರ ನಮ್ಮದಲ್ಲ, ನಾಡಿಗೆ ಅನ್ನನೀಡಬೇಕು ಆದರೆ ರೈತರಿಗೆ ಜಮೀನು ಬೇಡ ಎಂಬ ಧೋರಣೆಯಲ್ಲಿ ಇಂದಿನ ರಾಜ್ಯ ಸರ್ಕಾರ ಇದೆ ಇದು ಒಳ್ಳೆಯ ಬೆಳವಣಿಗೆ ಅಲ್ಲ ಎಂದು ಅವರು ರಾಜ್ಯ ಸರ್ಕಾರದಲ್ಲಿ ಇಂದಿನ ದಿನಗಳಲ್ಲಿ ರಾಜಕಾರಣಿಗಳು ಹಾಗೂ ಅಧಿಕಾರಿಗಳೇ ಕೆಐಎಡಿಬಿ ಹಾಗೂ ಬಿಡಿಎ ಮೂಲಕ ರಿಯಲ್ ಎಸ್ಟೇಟ್ ದಲ್ಲಾಳಿಗಳಂತೆ ಕಾರ್ಯ ನಿರ್ವಹಿಸುತ್ತಾ, ರೈತರ ಫಲವತ್ತಾದ ಸಾವಿರಾರು ಎಕರೆ ಭೂಮಿ ನುಂಗಲು ಮುಂದಾಗಿರುವುದು ಖಂಡನೀಯ ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಕಾರ್ಯಧ್ಯಕ್ಷ ಭಕ್ತರಹಳ್ಳಿ ಬೈರೇಗೌಡ ಮಾತನಾಡಿ, ರಾಜ್ಯ ಸರ್ಕಾರವು ಕಳೆದ ಕೆಲದಿನಗಳ ಹಿಂದೆ ಹೊರಡಿಸಿದ್ದ, ಈ ಭಾಗದ 13 ಹಳ್ಳಿ ರೈತರ ಪಹಣಿಯಲ್ಲಿ 11 ನೇ ಕಾಲಂ ನಲ್ಲಿ ದಾಖಲಾಗಿರುವ "ಕೆಐಎಡಿಬಿ" ಭೂಸ್ವಾಧೀನ ಎಂಬ ಪದವನ್ನು ಕೂಡಲೇ ತೆಗೆಸಬೇಕೆಂದು ಅಪರ ಜಿಲ್ಲಾಧಿಕಾರಿ ಭಾಸ್ಕರ್ ಅವರಿಗೆ ನೀಡಿದ ಮನವಿಯ ಮೂಲಕ ಆಗ್ರಹಿಸಿದರು. ಒಂದು ವೇಳೆ ನಿರ್ಲಕ್ಷಿಸಿದರೆ ಜಿಲ್ಲಾಧಿಕಾರಿ ಕಚೇರಿಯ ಒಳಗೇ ಪ್ರತಿಭಟನೆ ನಡೆಸಲಾಗುವುದೆಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಶಿಡ್ಲಘಟ್ಟ ಮಾಜಿ ಶಾಸಕ ಎಂ. ರಾಜಣ್ಣ, ಬಿಜೆಪಿ ಮುಖಂಡ ಸೀಕಲ್ ಆನಂದಗೌಡ, ಕೆ ಆರ್ ಎಸ್ ಪಕ್ಷದ ಕಾರ್ಯದರ್ಶಿ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಶ್ರೀನಿವಾಸ್, ರಾಜ್ಯ ಸಂಘಟನಾ ಕಾರ್ಯದರ್ಶಿ ಆನಂದ್ ಚಿಕ್ಕಬಳ್ಳಾಪುರ ಜಿಲ್ಲಾ ಉಪಾಧ್ಯಕ್ಷ ರಾಜಕುಮಾರ್ ನಾಯಕ್, ಶಿವಾರೆಡ್ಡಿ ಜಿಲ್ಲಾ ಕಾರ್ಯದರ್ಶಿಮಂಜುನಾಥ್, ರೈತ ಸಂಘದ ಜಿಲ್ಲಾಧ್ಯಕ್ಷ ರಾಮನಾಥ ರೆಡ್ಡಿ ಸೇರಿದಂತೆ ಜಂಗಮಕೋಟೆ ಹೋರಾಟದ ರೈತರುಗಳು ಹಾಜರಿದ್ದರು.

ಜಂಗಮಕೋಟೆ ಭೂಸ್ವಾಧೀನ ಹೋರಾಟದಂತೆಯೇ ಬಿಡದಿ, ಆನೇಕಲ್ ಹಾಗೂ ದೊಡ್ಡಬೆಳವಂಗಲ ಭೂಸ್ವಾಧೀನ ವಿರೋಧಿ ಹೋರಾಟಗಾರೆಲ್ಲರೂ ಒಂದೇ ದೋಣಿಯ ಪಯಣಿಗರಾಗಿದ್ದಾರೆ. ಈ ನಾಲ್ಕು ಭಾಗಗಳ ಹೋರಾಟಗಾರರನ್ನು ಒಂದೆಡೆ ಸೇರಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ 3 ದಿನಗಳ ಹೋರಾಟಕ್ಕೆ ಯೋಜನೆ ರೂಪಿಸಲಾಗುತ್ತಿದೆ ಎಂದು ಮಾಹಿತಿ ನೀಡಿದ ಅವರು, ಆಗಸ್ಟ್ 17 ರಂದು ಜಂಗಮಕೋಟೆ ಹೋರಾಟಕ್ಕೆ 150 ದಿನಗಳಾಗತ್ತಿರುವ ಹಿನ್ನೆಲೆಯಲ್ಲಿ ಸರ್ಕಾರ ಹಾಗೂ ಜಿಲ್ಲಾಡಳಿತದಿಂದ ಯಾವ ಪರವಾನಗಿಯನ್ನೂ ಪಡೆಯದೆ ಬೃಹತ್ ಬೈಕ್ ಜಾಥಾ ನಡೆಸಲಾಗುವುದು ಎಂದರು. ಜೊತೆಗೆ ನಿವೃತ್ತ ನ್ಯಾಯಮೂರ್ತಿ ಗಳಾದ ಸಂತೋಷ್ ಹೆಗ್ಡೆ, ಗೋಪಾಲಗೌಡರು ಹಾಗೂ ಎಸ್.ಆರ್.ಹಿರೇಮಠ್ ಅವರನ್ನು ಈ ಹೋರಾಟಕ್ಕೆ ಆಹ್ವಾನಿಸಿ ಆ.17 ರಿಂದಲೇ 3 ದಿನಗಳ ಉಪವಾಸ ಸತ್ಯಾಗ್ರಹ ನಡೆಸಲಾಗು ತ್ತಿದ್ದು , ಎಲ್ಲ ರೈತರೂ ಈ ಹೋರಾಟದಲ್ಲಿ ಪಾಲ್ಗೊಂಡು ಸರ್ಕಾರಕ್ಕೆ ಗಂಭೀರ ಎಚ್ಚರಿಕೆ ನೀಡಲು ಮುಂದಾಗಬೇಕೆಂದು ಕರೆ ನೀಡಿದರು. ರಾಜ್ಯದಲ್ಲಿ ಇಂದು ಎಷ್ಟೋ ಕಾರ್ಖಾನೆಗಳು ಮುಚ್ಚಿವೆ. ಅಲ್ಲದೇ ಕೇವಲ ನೂರರಿಂದ ನೂರೈವತ್ತು ಎಕರೆಯಷ್ಟು ಪ್ರದೇಶದಲ್ಲಿ ದೊಡ್ಡ ದೊಡ್ಡ ಕಾರ್ಖಾನೆಗಳು ನಿರ್ಮಾಣವಾಗುತ್ತವೆ ಸರ್ಕಾರಕ್ಕೆ ರೈತರ ಲಕ್ಷಾಂತರ ಎಕರೆಯಷ್ಟು ಭೂಮಿ ಏಕೆ ಬೇಕು..!!? ಬಿಡದಿಯಲ್ಲಿ ನಗರದ ವಿಸ್ತೀರ್ಣಕ್ಕೆ ಏಳುವರೆ ಸಾವಿರ ಎಕರೆ ವಶಕ್ಕೆ, ಚಿಕ್ಕಬಳ್ಳಾಪುರದಲ್ಲಿ ಮೂರುಸಾವಿರ ಎಕರೆ ಹೀಗೆ ಸಾವಿರಾರು ಎಕರೆ ಭೂಮಿಯನ್ನು ಕೆ ಎಚ್ ಬಿ, ಕೆಐಎಡಿಬಿ, ಹಾಗೂ ಬಿಡಿಎ ದಂತಹ ಭಷ್ಟ ಸಂಸ್ಥೆಗಳು ಕೋಟಿ ರೂ ಬೆಲೆಯ ಭೂಮಿಗಳನ್ನು ಲಕ್ಷದ ಲೆಕ್ಕದಲ್ಲಿ ಕಬಳಿಸಲು ನಿಂತಿವೆ.

–ರವಿಕೃಷ್ಣಾರೆಡ್ಡಿ ಕೆ ಆರ್.ಎಸ್. ಪಕ್ಷದ ಗೌರವಾಧ್ಯಕ್ಷ

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy